ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 151 ಸಂಚಿಕೆ- 151 | PAGE- 8 ಪುಟ-8 | ಶುಕ್ರವಾರ 25.07.2025 | RS.2/- ಬೆಲೆ 2/-

G Pay
Mallamanudi
...n and pay with any BHIM UPI ap
G Pay PhonePe Paytm
BHIM UPI

# ಕರ್ನಾಟಕದಲ್ಲೂ ಚುನಾವಣಾ ಅಕ್ರಮ
## 100 ಪರ್ಸೆಂಟ್ ಪ್ರೂಫ್ ಇದೆ; ರಾಹುಲ್ ಗಾಂಧಿ



ಮಲ್ಲಮ್ಮನುಡಿ ವಾರ್ತೆ ನವದೆಹಲಿ: ಕರ್ನಾಟಕದ ಒಂದು ಲೋಕಸಭಾ ಕ್ಷೇತ್ರದಲ್ಲಿ ಚುನಾವಣಾ ಆಯೋಗವು ಮತ ವಂಚನೆಗೆ ಅವಕಾಶ ನೀಡಿದೆ ಎಂಬುದಕ್ಕೆ ತಮ್ಮ ಬಳಿ "ಶೇಕಡಾ 100 ರಷ್ಟು ದೃಢವಾದ ಪುರಾವೆ" ಇದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಗುರುವಾರ ಹೇಳಿದ್ದಾರೆ.

ಚುನಾವಣಾ ಆಯೋಗವು ಭಾರತದ ಚುನಾವಣಾ ಆಯೋಗವಾಗಿ ಕಾರ್ಯನಿರ್ವಹಿಸುತ್ತಿಲ್ಲ. ಅದು ಕೇಂದ್ರ ಸರ್ಕಾರದ ಆಯೋಗವಾಗಿ ಕಾರ್ಯನಿರ್ವಹಿಸುತ್ತಿದೆ. ನಾನು ಚುನಾವಣಾ ಆಯೋಗಕ್ಕೆ ಒಂದು ಸಂದೇಶ ಕಳುಹಿಸಲು ಬಯಸುತ್ತೇನೆ. ನೀವು ಇದರಿಂದ ತಪ್ಪಿಸಿಕೊಳ್ಳಬಹುದು ಎಂದು ಭಾವಿಸಿದ್ದರೆ ಅದು ಸಾಧ್ಯವಿಲ್ಲ ಎಂದು ರಾಹಲ್ ಗಾಂಧಿ ಹೇಳಿದ್ದಾರೆ.

ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಮತ್ತು ಬಿಹಾರ ವಿಧಾನಸಭಾ ಚುನಾವಣೆಯನ್ನು ಬಹಿಷ್ಕರಿಸಲು ಮುಂದಾಗಿರುವ ಆರ್‌ಜೆಡಿ ನಾಯಕ ತೇಜಸ್ವಿಯಾದವ್ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ರಾಹುಲ್ ಗಾಂಧಿ, ಕರ್ನಾಟಕದ ಒಂದು ಸ್ಥಾನದಲ್ಲಿ ಚುನಾವಣಾ ಆಯೋಗವು ವಂಚನೆಗೆ ಅವಕಾಶ ನೀಡಿದೆ ಎಂಬುದಕ್ಕೆ ತಮ್ಮ ಪಕ್ಷವು "ಶೇಕಡಾ 100 ರಷ್ಟು ದೃಢವಾದ ಪುರಾವೆ" ಹೊಂದಿದೆ ಎಂದು ತಿಳಿಸಿದರು.

"ಶೇಕಡಾ 90 ಅಲ್ಲ, ನಾವು ಅದನ್ನು ನಿಮಗೆ ತೋರಿಸಲು ನಿರ್ಧರಿಸಿದಾಗ, ಅದು 100 ರಷ್ಟು ದೃಢವಾದ ಪುರಾವೆಯಾಗಿದೆ" ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ಹೇಳಿದರು.

"ನಾವು ಒಂದು ಕ್ಷೇತ್ರದಲ್ಲಿ ಪರಿಶೀಲನೆ ನಡೆಸಿದಾಗ ಇದು ನಮ್ಮ ಗಮನಕ್ಕೆ ಬಂದಿದೆ. ಪ್ರತಿಯೊಂದು ಕ್ಷೇತ್ರದಲ್ಲೂ ಇದೇ ಡ್ರಾಮಾ ನಡೆಯುತ್ತಿದೆ ಎಂದು ನನಗೆ ಸಂಪೂರ್ಣವಾಗಿ ಮನವರಿಕೆಯಾಗಿದೆ. ಸಾವಿರಾರು ಹೊಸ ಮತದಾರರು, ಅವರ ವಯಸ್ಸು ಎಷ್ಟು? – ಒಂದು ಕ್ಷೇತ್ರದಲ್ಲಿ 45, 50, 60, 65 ವರ್ಷ ಎಂದು ಹೇಳಿಕೊಂಡು ಸಾವಿರಾರು ಜನರ ಸೇರ್ಪಡೆಯಾಗಿದೆ. ಇದು ಒಂದು ವಿಷಯವಾದರೆ, ಮತದಾರರ ಅಳಿಸುವಿಕೆ, ಅಕ್ರಮವಾಗಿ 18 ವರ್ಷಕ್ಕಿಂತ ಮೇಲ್ಪಟ್ಟ ಹೊಸ ಮತದಾರರ ಸೇರ್ಪಡೆಯನ್ನು ಪತ್ತೆ ಮಾಡಿದ್ದೇವೆ" ಎಂದು ಅವರು ತಿಳಿಸಿದರು.

"ನಾನು ಚುನಾವಣಾ ಆಯೋಗ-ಕ್ಕೆ ಒಂದು ಸಂದೇಶ ಕಳುಹಿಸಲು ಬಯಸುತ್ತೇನೆ – ನೀವು ಇದರಿಂದ ತಪ್ಪಿಸಿಕೊಳ್ಳುತ್ತೀರಿ ಎಂದು ಭಾವಿಸಿದರೆ ಅದು ಸಾಧ್ಯವಿಲ್ಲ. ಏಕೆಂದರೆ ನೀವು ತಪ್ಪು ಮಾಡಿದ್ದೀರಿ. ನಾವು ಆ ತಪ್ಪಿನ ಕುರಿತಾದ ಪುರಾವೆಯೊಂದಿಗೆ ನಿಮ್ಮ ಬಳಿಗೆ ಬರುತ್ತೇವೆ" ಎಂದು ರಾಹುಲ್ ಗಾಂಧಿ ಸಂಸತ್ತಿನ ಆವರಣದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

# ರಾಜ್ಯದ ಎಲ್ಲಾ ಬಹುಮಹಡಿ, ಎತ್ತರದ ಕಟ್ಟಡಗಳಿಗೆ ಶೇ.1 ಸೆಸ್



ಬೆಂಗಳೂರು:ಜು.24: ಮೆಟ್ರೋ, ಬಸ್ ಟಿಕೆಟ್ ದರ, ಹಾಲಿನ ದರ ಏರಿಕೆ ಬಳಿಕ ಜಿಎಸ್‌ಟಿಯಿಂದ ತತ್ತರಿಸಿರುವ ಜನತೆ ರಾಜ್ಯ ಸರ್ಕಾರ ಮತ್ತೊಂದು ಶಾಕ್ ಕೊಟ್ಟಿದೆ. ಹೊಸದಾಗಿ ನಿರ್ಮಾಣ ಆಗುವ ರಾಜ್ಯದ ಎಲ್ಲಾ ರಾಜ್ಯದ ಎಲ್ಲ ಬಹುಮಹಡಿ ಮತ್ತು ಎತ್ತರದ ಕಟ್ಟಡಗಳಿಗೆ ಶೇ.1 ಸೆಸ್ ವಿಧಿಸಲು ಇಂದಿನ ಸಚಿವ ಸಂಪುಟ ಸಭೆ ನಿರ್ಧಾರ ಮಾಡಿದೆ.

ಅಗ್ನಿಶಾಮಕ ದಳದ ಕಾಯ್ದೆ ಅನ್ವಯ ಆಗುವ ವಾಣಿಜ್ಯ ಕಟ್ಟಡಗಳು, ಕೈಗಾರಿಕಾಗಳು, ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆ ಕಟ್ಟಡಗಳು, ಅಪಾರ್ಟ್ಮೆಂಟ್‌ಗಳು ಸೇರಿ ಎತ್ತರದ ಬಹುಮಹಡಿ ಕಟ್ಟಡಗಳಿಗೆ 1% ಸೆಸ್ ವಿಧಿಸಲು ಸರ್ಕಾರ ನಿರ್ಧರಿಸಿದೆ. ಇದರೊಂದಿಗೆ ಸಂಪುಟ ಸಭೆಯಲ್ಲಿ ಹಲವು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ.

* ಬೆಂಗಳೂರಿನ ಸ್ಪೇಸ್ ಟೆಕ್‌ನಲ್ಲಿ ಉತ್ಕೃಷ್ಟತಾ ಕೇಂದ್ರ (ಸೆಂಟರ್ ಆಫ್ ಎಕ್ಸಲೆನ್ಸ್) ಸ್ಥಾಪನೆಗೆ ಸಂಪುಟ ಅನುಮೋದನೆ

* ರಾಯಚೂರಿನ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಕಿದ್ವಾಯಿ ಪೆರಿಫೆರಲ್ ಕ್ಯಾನ್ಸರ್ ಚಿಕಿತ್ಸಾ ಘಟಕ ಸ್ಥಾಪನೆ, 50 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ

* ಚಿನ್ನಸ್ವಾಮಿ ಸ್ಟೇಡಿಯಂ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರ ವಿರುದ್ಧ ಇಲಾಖಾ ತನಿಖೆ ನಡೆಸುವುದು. ಜೊತೆಗೆ ಆರ್‌ಸಿಬಿ, ಕೆಎಸ್‌ಸಿಎ ವಿರುದ್ಧ ಕ್ರಿಮಿನಲ್ ಕೇಸ್‌ಗೆ ಅಧಿಕೃತ ಒಪ್ಪಿಗೆ.

* ಕುನ್ಹಾ ವರದಿ ಶಿಫಾರಸ್ಸು ಜಾರಿಗೆ ಕ್ಯಾಬಿನೆಟ್ ಒಪ್ಪಿಗೆ – ಡಿಎನ್‌ಎ ಈವೆಂಟ್ ಮ್ಯಾನೇಜ್‌ಮೆಂಟ್ ಸಂಸ್ಥೆ ವಿರುದ್ಧವೂ ಕ್ರಿಮಿನಲ್ ಕೇಸ್

* ಇದರೊಂದಿಗೆ ಸನ್ನಡತೆ ಆಧಾರದಲ್ಲಿ ಜೀವಾವಧಿ ಶಿಕ್ಷೆ ಖೈದಿಗಳಿಗೆ ಬಿಡುಗಡೆ ಭಾಗ್ಯ ಕಲ್ಪಿಸಲು ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ.

* ಜೊತೆಗೆ ರಾಜ್ಯದ ವಿವಿಧ ಕೇಂದ್ರ ಕಾರಾಗೃಹಗಳಲ್ಲಿರುವ 46 ಜೀವಾವಧಿ ಶಿಕ್ಷಾ ಬಂಧಿಗಳ ಬಿಡುಗಡೆಗೆ ಸಂಪುಟ ಒಪ್ಪಿಗೆ ಸೂಚಿಸಿದೆ.

# ಬಿಟ್ಟೂ ಬಿಡದ ಮಳೆ; ಜನಜೀವನ ಅಸ್ತವ್ಯಸ್ತ



ಮಲ್ಲಮ್ಮನುಡಿ ವಾರ್ತೆ ಬೀದರ. ಜು. 24 : ಜಿಲ್ಲೆಯಾದ್ಯಂತ ಬಿಟ್ಟೂ ಬಿಡದೆ ಮಳೆ ಸುರಿದ ಕಾರಣ ಜನಜೀವನ ಅಸ್ತವ್ಯಸ್ತಗೊಂಡಿತು.

ಗುರುವಾರ ಬೆಳಿಗ್ಗೆ ಆರಂಭಗೊಂಡ ಜಿಟಿಜಿಟಿ ಮಳೆ ದಿನವಿಡೀ ಸುರಿಯಿತು. ನಡು ನಡುವೆ ಧಾರಾಕಾರ ಮಳೆ ಆಯಿತು. ನಿರಂತರ ಮಳೆಯಿಂದ ದೈನಂದಿನ ಕೆಲಸಗಳಿಗೆ ಹೋಗುವವರು, ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ಪರದಾಟ ನಡೆಸಿದರು. ವ್ಯಾಪಾರ ವಹಿವಾಟಿನ ಮೇಲೆಯೂ ಪರಿಣಾಮ ಬೀರಿತು.

ಮಳೆಗೆ ವಾತಾವರಣ ಸಂಪೂರ್ಣ ತಂಪಾಗಿದ್ದರಿಂದ ಗುರುವಾರ ಸಂಜೆ ನಂತರ ಹೆಚ್ಚಿನವರು ಹೊರಗೆ ಬರಲಿಲ್ಲ. ಅಲ್ಲಲ್ಲಿ ಕೆಲವರು ಕೊಡೆ ಹಿಡಿದುಕೊಂಡು ನಡೆದಾಡುತ್ತಿರುವುದು ಕಂಡು ಬಂತು. ಸತತ ಮಳೆಗೆ ಬೀದರ್ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕುಗಳ ತಗ್ಗು ಪ್ರದೇಶಗಳ ಜಮೀನುಗಳಲ್ಲಿ ಅಪಾರ ಮಳೆ ನೀರು ಸಂಗ್ರಹಗೊಂಡಿದ್ದು, ಕೆರೆಯಂತೆ ಭಾಸವಾಗುತ್ತಿದೆ. ಸಿಡಿಲಿಗೆ ಬೀದರ್ ತಾಲ್ಲೂಕಿನ ಬಾವಗಿ ಗ್ರಾಮದಲ್ಲಿ ಆಕಳು ಮೃತಪಟ್ಟಿದೆ.

ಬುಧವಾರ ಸಂಜೆ ಆರಂಭಗೊಂಡ ಧಾರಾಕಾರ ಮಳೆ ತಡರಾತ್ರಿ ವರೆಗೆ ಸುರಿಯಿತು. ಕಳೆದ ನಾಲ್ಕೈದು ದಿನಗಳಿಂದ ಉತ್ತಮ ಮಳೆಯಾಗುತ್ತಿದ್ದು, ಮಳೆಯಿಲ್ಲದೆ ಆತಂಕಗೊಂಡಿದ್ದ ರೈತರು ಈಗ ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.

# ಕಾಗಿಣಾ ನದಿಗೆ ಜಿಗಿದು ಓರ್ವನ ಆತ್ಮಹತ್ಯೆ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಜು.24: ಅನಾರೋಗ್ಯದ ಚಿಂತೆಗೆ ಒಳಗಾಗಿ ಓರ್ವ ವ್ಯಕ್ತಿ ಕಾಗಿಣಾ ನದಿಯ ಸೇತುವೆಯ ಮೇಲಿಂದ ನೀರಿಗೆ ಜಿಗಿದು ಆತ್ಮಹತ್ಯೆ ಮಾಡಿಕೊಂಡ ಘಟನೆ ಶಹಾಬಾದ ಪಟ್ಟಣದ ಹೊರವಲಯದಲ್ಲಿ ಸಂಭವಿಸಿದೆ. ಮೃತನನ್ನು ಜಗದೀಶ್ ಸ್ವಾಮಿ (55) ಎಂದು ಗುರುತಿಸಲಾಗಿದೆ. ವ್ಯಕ್ತಿಯ ಪತ್ತೆಗಾಗಿ ಅಗ್ನಿಶಾಮಕ ದಳದವರು ಕಾರ್ಯಾಚರಣೆ ಆರಂಭಿಸಿದ್ದಾರೆ. ಸ್ಥಳೀಯ ಪೋಲಿಸರು ಸ್ಥಳಕ್ಕೆ ಧಾವಿಸಿ ಪರಿಶೀಲಿಸಿದ್ದಾರೆ.

# ಸೈಬರ್ ಕೆಫೆಗೆ ಬೆಂಕಿ: ಉಪಕರಣಗಳು ಭಸ್ಮ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಜು.24: ಸೈಬರ್ ಕೆಫೆಯೊಂದಕ್ಕೆ ಬೆಂಕಿ ತಗುಲಿ ಕಂಪ್ಯೂಟರ್ ಸಹಿತ ಹಲವು ಉಪಕರಣಗಳು ಸುಟ್ಟು ಹಾನಿಗೊಳಗಾದ ಘಟನೆ ಆಳಂದ ಪಟ್ಟಣದ ಹೊರವಲಯದಲ್ಲಿರುವ ಮಿನಿವಿಧಾನಸೌಧ ಆವರಣದಲ್ಲಿ ಸಂಭವಿಸಿದೆ. ಅಂಬರೀಶ್ ದೇವನೂರ್ ಅವರ ಒಡೆತನದ ವೈಷ್ಣವಿ ಆನ್‌ಲೈನ್ ಸೆಂಟರ್‌ಗೆ ಬೆಂಕಿ ತಗುಲಿದ್ದರಿಂದ ಹಾನಿಯಾಗಿದೆ. ಬೆಂಕಿ ತೀವ್ರಗೊಳ್ಳುತ್ತಿದ್ದಂತೆಯೇ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ಸಿಬ್ಬಂದಿಗಳು ಬೆಂಕಿಯನ್ನು ಶಮನಗೊಳಿಸಿದರು ಬೆಂಕಿಯಿಂದ ಲ್ಯಾಮಿನೇಷನ್ ಮಷೀನ್, ಎರಡು

(2ನೇ ಪುಟ ನೋಡಿ)

# ಕಲಬುರಗಿಯಲ್ಲಿ ಡ್ರೋನ್ ತಂತ್ರಜ್ಞಾನದೊಂದಿಗೆ ಪೊಲೀಸ್ ಮತ್ತು ಯುವಜನರ ಸಬಲೀಕರಣ




ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜು.24:ಕಾನೂನು ಜಾರಿಯನ್ನು ಬಲಪಡಿಸುವ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಕೌಶಲ್ಯಗಳೊಂದಿಗೆ ಯುವಕರನ್ನು ಸಜ್ಜುಗೊಳಿಸುವ ತನ್ನ ನಿರಂತರ ಬದ್ಧತೆಯ ಭಾಗವಾಗಿ, ಕರ್ನಾಟಕ ಸರ್ಕಾರ ಕಲಬುರಗಿಯಲ್ಲಿ ಡ್ರೋನ್ ತಂತ್ರಜ್ಞಾನದೊಂದಿಗೆ ಸಾರ್ವಜನಿಕ ಸುರಕ್ಷತಾ ಮೂಲಸೌಕರ್ಯವನ್ನು ಹೆಚ್ಚಿಸುವುದರ ಜೊತೆಗೆ ರಾಜ್ಯಾದ್ಯಂತ ಕೌಶಲ್ಯಪೂರ್ಣ ಡ್ರೋನ್ ಕಾರ್ಯಪಡೆಗೆ ಅಡಿಪಾಯ ಹಾಕಿದೆ.

ಬೆಂಗಳೂರಿನಲ್ಲಿ ನಡೆದ ಔಪಚಾರಿಕ ಕಾರ್ಯಕ್ರಮದಲ್ಲಿ, ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ಕಲಬುರಗಿ ಜಿಲ್ಲೆಯ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಅವರಿಗೆ ಸುಧಾರಿತ ಕಣ್ಗಾವಲು

(2ನೇ ಪುಟ ನೋಡಿ)

# ಕೋಲಿ-ಕಬ್ಬಲಿಗ ಜನಾಂಗ ಎಸ್.ಟಿ ಪಟ್ಟಿಗೆ ಸೇರಿಸುವ ಸಂಬಂಧ ಮುಖಂಡರೊಂದಿಗೆ ಮುಖ್ಯಮಂತ್ರಿಗಳ ಭೇಟಿ:ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜು.24:ಕೋಲಿ, ಕಬ್ಬಲಿಗ.ಬೆಸ್ತ, ಅಂಬಿಗ, ಬಾರಕಿ ಜನಾಂಗಗಳನ್ನು ಪರಿಶಿಷ್ಟ ಪಂಗಡ ಪಟ್ಟಿಗೆ ಸೇರಿಸಲು ತಮ್ಮ ಸರ್ಕಾರ ಬದ್ಧವಾಗಿದ್ದು, ಕೇಂದ್ರ ಸರ್ಕಾರ ಪ್ರಸ್ತಾವನೆಯನ್ನು ಹಿಂದಕ್ಕೆ ಕಳುಹಿಸಿರುವ ಕಾರಣಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಪುನಃ ಕೇಂದ್ರ ಸರ್ಕಾರಕ್ಕೆ ಸಲ್ಲಿಸುವ ಸಂಬಂಧ ಕೋಲಿ-ಕಬ್ಬಲಿಗ ಸಮಾಜದ ಮುಖಂಡರು ಹಾಗೂ ಜಿಲ್ಲೆಯ ಜನ ಪ್ರತಿನಿದಿಗಳೊಂದಿಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ವಿಕಾಸಸೌಧದ ಸಚಿವರ ಕಚೇರಿಯಲ್ಲಿ ನಡೆದ ಕೋಲಿ-ಕಬ್ಬಲಿಗ ಜನಾಂಗದ ಮುಖಂಡರ ಹಾಗೂ ಜನಪ್ರತಿನಿಧಿಗಳ ಸಭೆಯಲ್ಲಿ ಭಾಗವಹಿಸಿದ್ದ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ರಣದೀಪ್ ಅವರಿಂದ ವಿವರಗಳನ್ನು ಪಡೆದ ಸಚಿವರು ಕೋಲಿ ಹಾಗೂ ಇನ್ನಿತರ ಜನಾಂಗವನ್ನು ಪರಿಶಿಷ್ಟ ಪಂಗಡ ಪಟ್ಟಿಗೆ ಸೇರಿಸಲು ಎದುರಾಗಿರುವ ತಾಂತ್ರಿಕ ತೊಡಕುಗಳನ್ನು ಅವಲೋಕನ ಮಾಡಿ ವರದಿ ತಯಾರಿಸಲು ಸೂಚಿಸಿದರು. ಸೂಕ್ತ ಮಾಹಿತಿಯನ್ನು ಕ್ರೋಢೀಕರಿಸಿದ ನಂತರ ಕೋಲಿ-ಕಬ್ಬಲಿಗ ಜನಾಂಗದ ಮುಖಂಡರೊಂದಿಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮತ್ತೊಮ್ಮೆ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಕೋರಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು. ಸಭೆಯಲ್ಲಿ ಕಲಬುರಗಿ ಜಿಲ್ಲೆಯ ಶಾಸಕರಾದ ಅಲ್ಲಮಪ್ರಭು ಪಾಟೀಲ್, ಶ್ರೀಮತಿ ಕನೀಜ್ ಫಾತೀಮಾ, ಎಂ.ವೈ.ಪಾಟೀಲ್, ತಿಪ್ಪಣ್ಣಪ್ಪ ಕಮಕನೂರ್ ಹಾಗೂ ಕೋಲಿ ಸಮಾಜದ ಮುಖಂಡರು ಭಾಗವಹಿಸಿದ್ದರು.

# ಅಧಿಕಾರಿಗಳಿಗೆ ಸಾಮಾಜಿಕ ಕಾಳಜಿ ಇರಲಿ: ಉಪಲೋಕಾಯುಕ್ತ ಬಿ ವೀರಪ್ಪ ಸಲಹೆ



ಮಲ್ಲಮ್ಮನುಡಿ ವಾರ್ತೆ ರಾಯಚೂರು ಜು 24: ಯಾವುದೇ ರೀತಿಯ ದೂರುಗಳು ಬಾರದ ಹಾಗೆ ಪ್ರತಿಯೊಂದು ಇಲಾಖೆಯಲ್ಲಿ ಆಯಾ ಯೋಜನೆಗಳಿಗೆ ಫಲಾನುಭವಿಗಳ ಆಯ್ಕೆ ಮಾಡುವಾಗ ಪಾರದರ್ಶಕತೆಯನ್ನು ಕಾಯ್ದುಕೊಳ್ಳಬೇಕು ಎಂದು ಗೌರವಾನ್ವಿತ ಕರ್ನಾಟಕ ಉಪಲೋಕಾಯುಕ್ತರಾದ ಬಿ ವೀರಪ್ಪ ಅವರು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸಲಹೆ ಮಾಡಿದರು.

ರಾಯಚೂರ ಜಿಲ್ಲಾ ವ್ಯಾಪ್ತಿಯ ಬಾಕಿ ಇರುವ ದೂರುಗಳ ವಿಚಾರಣೆ ಮತ್ತು ವಿಲೇವಾರಿಯ ಬಗ್ಗೆ ಜುಲೈ 24ರಂದು ಸಂಜೆ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಡಿಯೋ ಸಂವಾದ ನಡೆಸಿ ಅವರು ಮಾತನಾಡಿದರು. ಅಧಿಕಾರಿಗಳು ಒತ್ತಡಕ್ಕೆ ಮನಿದು ಅನರ್ಹರಿಗೆ ಅವಕಾಶ ಕೊಡುತ್ತಿದ್ದಾರೆ. ಇದರಿಂದಾಗಿ ಅರ್ಹ ಫಲಾನುಭವಿಗಳಿಗೆ ಸರ್ಕಾರಿ ಸೌಲಭ್ಯಗಳು ದೊರಕದೇ ಅನ್ಯಾಯವಾಗುತ್ತಿದೆ ಎಂದು ಸಾರ್ವಜನಿಕ ದೂರುಗಳು ಹೆಚ್ಚುತ್ತಿವೆ. ಅಧಿಕಾರಿಗಳಿಗೆ ಸಾಮಾಜಿಕ ಕಾಳಜಿ ಇರಬೇಕು. ಯಾರು ಎಷ್ಟೇ ಒತ್ತಡ ಹಾಕಿದರು ಸಹ ಅದನ್ನು ಪರಿಗಣಿಸದೇ ಸರ್ಕಾರದ ನಿಯಮಾವಳಿಯಂತೆ ಯೋಜನೆಗಳಿಗೆ ಅರ್ಹರನ್ನೇ ಆಯ್ಕೆ ಮಾಡಿ ಸಾಮಾಜಿಕ ನ್ಯಾಯ ಕಾಪಾಡಬೇಕು ಎಂದು ಉಪ ಲೋಕಾಯುಕ್ತರು ಸಲಹೆ ಮಾಡಿದರು. ಸರ್ಕಾರಿ ಆಸ್ಪತ್ರೆಗಳಿಗೆ ಹೋಗುವ ರೋಗಿಗಳಿಗೆ ಅಲ್ಲಿನ ವೈದ್ಯರು ಖಾಸಗಿ ದವಾಖಾನೆಗೆ ಕಳುಹಿಸಕೂಡದು. ಚಿಕಿತ್ಸೆ ನೀಡಿದ ಬಳಿಕೆ ಔಷಧಿಯನ್ನು ಹೊರಗಡೆ ಪಡೆದುಕೊಳ್ಳಲು ರೋಗಿಗೆ ಸೂಚಿಸಬಾರದು. ಈ ವಿಷಯದ ಬಗ್ಗೆ ಗಮನ ಹರಿಸುವಂತೆ, ಜಿಲ್ಲಾ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಪೊಲೀಸ್ ಮತ್ತು ಯುವಜನರ ಸಬಲೀಕರಣ

ಡ್ರೋನ್‌ಗಳನ್ನು – ನಿಂಬಲ್–ಐ ಮತ್ತು ಓಖ01 – ಹಸ್ತಾಂತರಿಸಿದರು. ಕರ್ನಾಟಕದಲ್ಲಿ ವಿನ್ಯಾಸಗೊಳಿಸಲಾದ ಮತ್ತು ತಯಾರಿಸಲಾದ ಡ್ರೋನ್‌ಗಳು ಂಖ–ಚಾಲಿತ ಕಣ್ಗಾವಲು ವೈಶಿಷ್ಟ್ಯಗಳೊಂದಿಗೆ ಸಜ್ಜುಗೊಂಡಿವೆ ಮತ್ತು ಖಾಸಗಿ ವಲಯದ ಸಿಎಸ್‌ಆರ್ ಬೆಂಬಲದ ಮೂಲಕ ನಿಯೋಜಿಸಲಾಗುತ್ತಿದೆ.

"ಕರ್ನಾಟಕದ ಪ್ರತಿಯೊಂದು ಪೊಲೀಸ್ ಠಾಣೆಯನ್ನು ಡ್ರೋನ್‌ಗಳಿಂದ ಸಜ್ಜುಗೊಳಿಸುವುದು ನಮ್ಮ ದೃಷ್ಟಿಯಾಗಿದೆ, ಇದು ನಮ್ಮ ಪಡೆಗಳನ್ನು ಚುರುಕುಗೊಳಿಸುತ್ತದೆ, ವೇಗಗೊಳಿಸುತ್ತದೆ ಮತ್ತು ಹೆಚ್ಚು ಸ್ಪಂದಿಸುತ್ತದೆ. ಕರ್ನಾಟಕ ನಿರ್ಮಿತ ಡ್ರೋನ್‌ಗಳ ತಂತ್ರಜ್ಞಾನವು ಸಾರ್ವಜನಿಕ ಹಿತಾಸಕ್ತಿಯನ್ನು ಹೇಗೆ ಪೂರೈಸುತ್ತದೆ ಎಂಬುದರ ಸಂಕೇತವಾಗಿದೆ" ಎಂದು ಕಾರ್ಯಕ್ರಮದಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ ಹೇಳಿದರು.

ಡ್ರೋನ್‌ಗಳು ರಾತ್ರಿ ಮತ್ತು ಹಗಲು ಕಣ್ಗಾವಲು, ವಾಹನಗಳ ನಂಬರ್ ಪ್ಲೇಟ್ ಗುರುತಿಸುವಿಕೆ, ಜನಸಂದಣಿ ಮತ್ತು ವಾಹನ ಪತ್ತೆ ಮತ್ತು ತ್ವರಿತ ಕ್ಷೇತ್ರ ನಿಯೋಜನೆ ಸೇರಿದಂತೆ ಸುಧಾರಿತ ಸಾಮರ್ಥ್ಯಗಳನ್ನು ನೀಡುತ್ತವೆ , ಜಿಲ್ಲೆಗಳಾದ್ಯಂತ ಚುರುಕಾದ, ತಂತ್ರಜ್ಞಾನ–ಸಕ್ರಿಯಗೊಳಿಸಿದ ಪೊಲೀಸ್ ವ್ಯವಸ್ಥೆಗೆ ಬೆಂಬಲ ನೀಡುತ್ತವೆ ಎಂದೂ ಡಾ.ಪರಮೇಶ್ವರ ತಿಳಿಸಿದರು.ಕಲಬುರಗಿ ಜಿಲ್ಲೆಯಲ್ಲಿ 500 ಯುವಕರಿಗೆ ಡ್ರೋನ್

ಕಾರ್ಯಾಚರಣೆಗಳಲ್ಲಿ ತರಬೇತಿ: ಪ್ರಿಯಾಂಕ್ ಖರ್ಗೆ :ಈ ಉಡಾವಣೆಯಲ್ಲಿ ಭಾಗವಹಿಸಿದ ಐಟಿ ಮತ್ತು ಬಿಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಸಮಗ್ರ ನಾವೀನ್ಯತೆ ಮತ್ತು ಯುವ ಸಬಲೀಕರಣಕ್ಕೆ ಸರ್ಕಾರ ಹೆಚ್ಚಿನ ಬದ್ಧತೆಯನ್ನು ಹೊಂದಿದೆ ಎಂದು ಹೇಳಿದರಲ್ಲದೆ, ಕಲಬುರಗಿ ಜಿಲ್ಲೆಯಲ್ಲಿ 500 ಯುವಕರಿಗೆ ಡಿಜಿಸಿಎ ಪ್ರಮಾಣೀಕೃತ ಡ್ರೋನ್ ಕಾರ್ಯಾಚರಣೆಗಳಲ್ಲಿ ತರಬೇತಿ ನೀಡಲಾಗುವುದು, ಈ ತರಬೇತಿಯು ಕೃಷಿ, ಲಾಜಿಸ್ಟಿಕ್ಸ್, ವಿಪತ್ತು ನಿರ್ವಹಣೆ ಮತ್ತು ಮೂಲಸೌಕರ್ಯ ಮೇಲ್ವಿಚಾರಣೆಯಂತಹ ಡ್ರೋನ್ ಆಧಾರಿತ ಸೇವೆಗಳಲ್ಲಿ ಮಾರ್ಗಗಳನ್ನು ತೆರೆಯುತ್ತದೆ ಎಂದು ಮಾಹಿತಿ ನೀಡಿದರು."ನಮ್ಮ ತಂತ್ರಜ್ಞಾನದ ಬಲವು ಗ್ರಾಮೀಣ ಪರಿವರ್ತನೆ ಮತ್ತು ಅವಕಾಶಗಳಿಗೆ ಒಂದು ಶಕ್ತಿಯಾಗಬೇಕು. ಡ್ರೋನ್ ವಲಯವು ಜಾಗತಿಕವಾಗಿ ವೇಗವಾಗಿ ಬೆಳೆಯುತ್ತಿರುವ ಕೈಗಾರಿಕೆಗಳಲ್ಲಿ ಒಂದಾಗಿದೆ , ವಿವಿಧ ಕ್ಷೇತ್ರಗಳಲ್ಲಿ ಡ್ರೋನ್‌ಗಳನ್ನು ಬಳಸಿಕೊಳ್ಳಲಾಗುತ್ತಿದೆ, ಕಲಬುರಗಿಯ ಯುವಕರನ್ನು ಅತ್ಯಾಧುನಿಕ ಡ್ರೋನ್ ತಂತ್ರಜ್ಞಾನಗಳಲ್ಲಿ ಕೌಶಲ್ಯಪೂರ್ಣಗೊಳಿಸುವ ಮೂಲಕ, ನಾವು ಅವರನ್ನು ಭವಿಷ್ಯದ ಉದ್ಯೋಗಗಳಿಗೆ ಸಿದ್ಧಪಡಿಸುವುದರೊಂದಿಗೆ ಹೊಸ ಜೀವನೋಪಾಯಗಳು, ಸ್ಥಳೀಯ ನಾವೀನ್ಯತೆ ಮತ್ತು ಗ್ರಾಮೀಣ ತಂತ್ರಜ್ಞಾನ ಪರಿಸರ ವ್ಯವಸ್ಥೆಗಳನ್ನು ಸೃಷ್ಟಿಸಲು ನೆರವಾಗುತ್ತಿದ್ದೇವೆ"ಎಂದು ಸಚಿವ ಪ್ರಿಯಾಂಕ್ ಖರ್ಗೆ ಈ ಸಂದರ್ಭದಲ್ಲಿ ತಿಳಿಸಿದರು.ಭವಿಷ್ಯಕ್ಕೆ ಸಿದ್ಧವಾಗಿರುವ ಕರ್ನಾಟಕದ ಕೌಶಲ್ಯ

2026 ರ ವೇಳೆಗೆ ಭಾರತೀಯ ಡ್ರೋನ್ ಉದ್ಯಮವು 1 ಲಕ್ಷಕ್ಕೂ ಹೆಚ್ಚು ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯೊಂದಿಗೆ, ಕರ್ನಾಟಕವು ಡ್ರೋನ್ ತಂತ್ರಜ್ಞಾನದ ಗ್ರಾಹಕರಾಗಿ ಮಾತ್ರವಲ್ಲದೆ ಡ್ರೋನ್ ಪ್ರತಿಭೆ ಮತ್ತು ನಾವೀನ್ಯತೆಯ ರಾಷ್ಟ್ರೀಯ ಕೇಂದ್ರವಾಗಿಯೂ ತನ್ನನ್ನು ತಾನು ಸ್ಥಾನಿಕರಿಸಿಕೊಳ್ಳುತ್ತಿದೆ. ಏರೋಸ್ಪೇಸ್, ಎಲೆಕ್ಟ್ರಾನಿಕ್ಸ್ ಮತ್ತು ಆರ್ ಅಂಡ್ ಡಿಯಲ್ಲಿ ರಾಜ್ಯದ ಅಸ್ತಿತ್ವದಲ್ಲಿರುವ ನಾಯಕತ್ವವು ಜಿಲ್ಲೆಗಳಾದ್ಯಂತ ಕೌಶಲ್ಯ ಉಪಕ್ರಮಗಳನ್ನು ಅಳೆಯಲು ಬಲವಾದ ಅಡಿಪಾಯವನ್ನು ಒದಗಿಸುತ್ತದೆ.ತಂತ್ರಜ್ಞಾನ–ಚಾಲಿತ ಗ್ರಾಮೀಣ ಸಬಲೀಕರಣಕ್ಕೆ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಮತ್ತು ಕಲಬುರಗಿಯನ್ನು ಮಾದರಿ ಜಿಲ್ಲೆಯನ್ನಾಗಿ ಇರಿಸುತ್ತದೆ – ಅಲ್ಲಿ ನಾವೀನ್ಯತೆ, ಸಾರ್ವಜನಿಕ ಸೇವೆ ಮತ್ತು ಯುವ ಕೌಶಲ್ಯವು ಅರ್ಥಪೂರ್ಣ ಪರಿಣಾಮವನ್ನು ಸೃಷ್ಟಿಸಲು ಒಮ್ಮುಖವಾಗುತ್ತದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಈ ಸಂದರ್ಭದಲ್ಲಿ ತಿಳಿಸಿದರು.

ಕರ್ನಾಟಕವು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವಲ್ಲಿ, ಸ್ಥಿತಿಸ್ಥಾಪಕ ಮೂಲಸೌಕರ್ಯವನ್ನು ನಿರ್ಮಿಸುವಲ್ಲಿ ಮತ್ತು ಸಮಗ್ರ ಮತ್ತು ಸ್ಮಾರ್ಟ್ ಆಡಳಿತದ ಮೂಲಕ ಉದ್ಯೋಗಾವಕಾಶಗಳನ್ನು ಸೃಷ್ಟಿಸುವಲ್ಲಿ ಮುಂಚೂಣಿಯಲ್ಲಿದೆ ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

# ಉಪಕರಣಗಳು ಭಸ್ಮ

ಕಂಪ್ಯೂಟರ್‌ಗಳು, ಜೆರಾಕ್ಸ್ ಮಷೀನ್, ಪ್ರಿಂಟರ್, ಜನರೇಟರ್ ಬ್ಯಾಟರಿ ಹಾಗೂ ಟೇಬಲ್‌ಗಳು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿವೆ. ಸೈಬರ್ ಸೆಂಟರ್ ಮಾಲೀಕ ಅಂಬರೀಶ್ ದೇವನೂರ ಅವರು ಈ ಕುರಿತು ಮಾಹಿತಿ ನೀಡಿದ್ದು, ಒಟ್ಟು 3 ಲಕ್ಷ ರೂ.ಗಳಷ್ಟು ನಷ್ಟವಾಗಿದೆ ಎಂದು ತಿಳಿಸಿದ್ದಾರೆ.

# ಉಪಲೋಕಾಯುಕ್ತ ಬಿ ವೀರಪ್ಪ ಸಲಹೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಎಲ್ಲ ತಾಲೂಕು ಸಾರ್ವಜನಿಕ ಆಸ್ಪತ್ರೆಗಳು, ಸಮುದಾಯ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸುತ್ತೋಲೆ ರವಾನಿಸಿ ಸೂಚನೆ ನೀಡಬೇಕು. ಆಸ್ಪತ್ರೆಗಳಲ್ಲಿ ಅವಶ್ಯಕವಾದ ಸಿಟಿ ಸ್ಕಾ ??ನ್, ಎಂಆರ್‌ಐ ಸ್ಕಾ ??ನ್ ಮಷಿನ್‌ಗಳು ಇರುವಂತೆ ನೋಡಿಕೊಳ್ಳಬೇಕು ಎಂದು ಉಪಲೋಕಾಯುಕ್ತರು ಡಿಎಚ್‌ಓ ಡಾ.ಸುರೇಂದ್ರಬಾಬು ಅವರಿಗೆ ನಿರ್ದೇಶನ ನೀಡಿದರು. ರಾಯಚೂರಿನ ರಾಜೀವಗಾಂಧಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಒಪೆಕ್ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳಲ್ಲಿ ಸಹ ಸರಿಯಾದ ನಿಯಮಗಳು ಪಾಲನೆ ಆಗಬೇಕು ಎಂದು ಸೂಚನೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ರಾಯಚೂರ ಜಿಲ್ಲಾ ವ್ಯಾಪ್ತಿಯ ಎಲ್ಲ ಮೆಟ್ರಿಕ್ ಪೂರ್ವ, ನಂತರದ ವಸತಿ ನಿಲಯಗಳು ಮತ್ತು ವೃತ್ತಿಪರ ಕೋರ್ಸಿನ ಎಲ್ಲ ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಊಟ, ಉಪಹಾರ, ಸಮವಸ್ತ್ರ ಸೇರಿದಂತೆ ಇನ್ನಿತರ ಎಲ್ಲ ಸೌಕರ್ಯಗಳನ್ನು ಸಮರ್ಪಕವಾಗಿ ನೀಡಬೇಕು. ಅನಿರೀಕ್ಷಿತ ಭೇಟಿ ವೇಳೆ ಏನಾದರು ಲೋಪದೋಷಗಳು ಕಂಡುಬಂದಲ್ಲಿ ಮುಲಾಜಿಲ್ಲದೇ ಕ್ರಮ ಜರುಗಿಸಲಾಗುವುದು ಎಂದು ಇದೆ ವೇಳೆ ಉಪ ಲೋಕಾಯುಕ್ತರು ಸಂಬಂಧಿಸಿದ ಇಲಾಖೆಯ ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಮಹಿಳೆಯರು ಮತ್ತು ಮಕ್ಕಳ ಆರೋಗ್ಯ ತುಂಬಾ ಮುಖ್ಯ. ಈ ದಿಶೆಯಲ್ಲಿ ಜಿಲ್ಲೆಯ ಪ್ರತಿಯೊಂದು ಅಂಗನವಾಡಿಯಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ನೀಡುವಂತಾಗಬೇಕು. ತಾವು ರಾಯಚೂರ ಪ್ರವಾಸದಲ್ಲಿದ್ದಾಗ ಅಂಗನವಾಡಿಗಳಿಗೆ ಭೇಟಿ ನೀಡಿ ಪರಿಶೀಲಿಸುವುದಾಗಿ ಉಪಲೋಕಾಯುಕ್ತರು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪ ನಿರ್ದೇಶಕರಿಗೆ ತಿಳಿಸಿ ಅಂಗನವಾಡಿ ಮೇಲೆ ಸೂಕ್ತ ಮೇಲ್ವಿಚಾರಣೆಗೆ ನಿರ್ದೇಶನ ನೀಡಿದರು.

ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯು ಜಾಗತಿಕವಾಗಿ ಮೆಚ್ಚುಗೆ ಗಳಿಸಿದ ಯೋಜನೆಯಾಗಿದೆ. ಈ ಯೋಜನೆಯಿಂದಾಗಿ ಗ್ರಾಮೀಣ ಭಾಗದ ಕೃಷಿ ಕೂಲಿ ಕಾರ್ಮಿಕರಿಗೆ ಸಾಕಷ್ಟು ಅನುಕೂಲವಾಗಿದೆ. ಹೀಗಾಗಿ ನರೇಗಾ ಯೋಜನೆಯಡಿ ಬೇರೆ ಬೇರೆ ಕೆಲಸ ಕಾರ್ಯಗಳಿಗೆ ಯಾವುದೇ ಕಾರಣಕ್ಕು ಜೆಸಿಬಿ ಮತ್ತು ಯಾವುದೇ ಯಂತ್ರವನ್ನು ಬಳಸಬಾರದು. ಕಡ್ಡಾಯವಾಗಿ ಕೃಷಿ ಕೂಲಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸಲು ಸಂಬಂಧಿಸಿದ ಅಧಿಕಾರಿಗಳು ಒತ್ತು ಕೊಡಬೇಕು ಎಂದು ಉಪ ಲೋಕಾಯುಕ್ತರು ಸೂಚನೆ ನೀಡಿದರು.ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ನಿರಂತರವಾಗಿರುತ್ತದೆ. ಬಹುತೇಕ ಕಡೆಗಳಲ್ಲಿ ಬೀದಿ ದೀಪಗಳು ಇರುವುದಿಲ್ಲ. ವಿದ್ಯುತ್ ಪ್ರವರ್ತಕ (ಟಿ.ಸಿ)ಗಳು ಬೇಕು ಎಂದು ಎಷ್ಟೇ ಸಲ ಅಲೆದಾಡಿದರೂ ಸಕಾಲಕ್ಕೆ ಕೊಡುವುದಿಲ್ಲ ಎಂದು ಹಳ್ಳಿಯ ಜನರಿಂದ ದೂರುಗಳು ಹೆಚ್ಚುತ್ತಿವೆ. ಹೀಗಾಗಿ ಜೆಸ್ಕಾಂ ಅಧಿಕಾರಿಗಳು ಜಾಗೃತೆಯಿಂದ ಕೆಲಸ ಮಾಡಬೇಕು. ಗ್ರಾಮಸ್ಥರಿಗೆ ಕಚೇರಿಗೆ ಅಲೆದಾಡಿಸುವುದನ್ನು ತಪ್ಪಿಸಬೇಕು. ಇಲ್ಲವಾದಲ್ಲಿ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಬಹುತೇಕ ಕಡೆ ಸಾರ್ವಜನಿಕ ಕೆರೆ, ಬಾವಿ, ಸಾರ್ವಜನಿಕ ಸ್ಥಳಗಳನ್ನು ಪ್ರಭಾವಿ ವ್ಯಕ್ತಿಗಳು ಒತ್ತುವರಿ ಮಾಡುತ್ತಿದ್ದು ಇದರಿಂದಾಗಿ ಸಾಕಷ್ಟು ತೊಂದರೆ–ಯಾಗುತ್ತಿದೆ. ಗ್ರಾಮಗಳಲ್ಲಿ ಚರಂಡಿ ವ್ಯವಸ್ಥೆ ಸರಿಯಾಗಿಲ್ಲ. ಸ್ಥಳೀಯ ಅಧಿಕಾರಿಗಳು ಗಮನ ಹರಿಸುತ್ತಿಲ್ಲ ಎಂದು ಲೋಕಾಯುಕ್ತ ಕಚೇರಿಯಲ್ಲಿ ಸಾಕಷ್ಟು ದೂರುಗಳು ಸಲ್ಲಿಕೆಯಾಗುತ್ತಿವೆ. ಈ ಬಗ್ಗೆ ವಿಶೇಷವಾಗಿ ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ಪಿಡಿಓಗಳು ಗಮನ ಹರಿಸಿ ಮೇಲಧಿಕಾರಿಗಳಿಗೆ ವರದಿ ಮಾಡಲು ಮುತುವರ್ಜಿ ವಹಿಸಬೇಕು ಎಂದು ಸೂಚನೆ ನೀಡಿದರು.ಪರಿಸರದ ಸಮತೋಲನ ಕಾಪಾಡುವಲ್ಲಿ ಗಿಡಮರಗಳ ಪಾತ್ರ ಅತೀ ಮಹತ್ವವಾಗಿದ್ದು ಅರಣ್ಯ ಅತೀಕ್ರಮಣಕ್ಕೆ ಕಡಿವಾಣ ಹಾಕಬೇಕು ಎಂದು ಉಪ ಲೋಕಾಯುಕ್ತರು, ಆರ್‌ಎಫ್‌ಓ ಅವರಿಂದ ಮಾಹಿತಿ ಪಡೆದುಕೊಂಡರು. ಅರಣ್ಯ ಅತೀಕ್ರಮಣದ ಪ್ರಕರಣಗಳ ವಿಲೇವಾರಿಗೆ ಸಂಬಂಧಿಸಿದಂತೆ ಅರಣ್ಯ ಇಲಾಖೆಯು ಇದುವರೆಗೆ ತೆಗೆದುಕೊಂಡ ಕ್ರಮಗಳ ಬಗ್ಗೆ ಮಾಹಿತಿ ಕೇಳಿದರು.ನಿಯಮಿತವಾಗಿ ಸಭೆ ನಡೆಸಿ: ಕುಡಿಯುವ ಸಮರ್ಪಕವಾಗಿ ಸಿಗುತ್ತಿಲ್ಲ. ವಿದ್ಯುತ್ ಪೂರೈಕೆ ಇಲ್ಲ, ಅಧಿಕಾರಿಗಳು ಮಾಹಿತಿ ನೀಡುತ್ತಿಲ್ಲ, ಜೆಸ್ಕಾಂನಿಂದ ಟಿ.ಸಿ. ಕೊಡುತ್ತಿಲ್ಲ ಎನ್ನುವಂತಹ ದೂರುಗಳು ಸಾರ್ವಜನಿಕರಿಂದ ದಾಖಲಾಗುತ್ತಿದ್ದು ಈ ಬಗ್ಗೆ ಪರಿಶೀಲಿಸಿ, ಬೇಗನೆ ಇತ್ಯರ್ಥಗೊಳಿಸಿ ದೂರುದಾರರಿಗೆ ಹಿಂಬರಹ ನೀಡಬೇಕು. ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳೊಂದಿಗೆ ನಿರಂತರ ಸಭೆ ನಡೆಸಿ ಈ ಬಗ್ಗೆ ಆಯಾ ತಾಲೂಕಿನ ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಗಮನ ಹರಿಸುವಂತೆ ಸೂಚನೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಇದೆ ವೇಳೆ ಉಪ ಲೋಕಾಯುಕ್ತರು ತಿಳಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಮಾತನಾಡಿ, ಗೌರವಾನ್ವಿತ ಉಪಲೋಕಾಯುಕ್ತರು ರಾಯಚೂರ ಭೇಟಿ ನೀಡುವ ವೇಳೆಯೊಳಗೆ, ಆಯಾ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕ ದೂರುಗಳ ಬಗ್ಗೆ ಗಮನ ಹರಿಸಿ ವಿಲೇವಾರಿಗೆ ಕ್ರಮವಹಿಸಬೇಕು. ದೂರುಗಳು ಇತ್ಯರ್ಥವಾದ ಬಗ್ಗೆ ವರದಿಯೊಂದಿಗೆ ಸಾರ್ವಜನಿಕ ಅಹವಾಲು ಆಲಿಕೆ ಸಭೆಗೆ ಆಗಮಿಸಬೇಕು. ಆರೋಗ್ಯ ಇಲಾಖೆ, ಜೆಸ್ಕಾಂ, ನಗರಾಭಿವೃದ್ಧಿ ಕೋಶ, ನರೇಗಾ ಯೋಜನೆಯ ಅಧಿಕಾರಿಗಳು ದೂರುಗಳ ವಿಲೆ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ್ ಕಾಂದೂ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಪಂಚಾಯತಗಳ ಗ್ರಾಮ ಅಭಿವೃದ್ಧಿ ಅಧಿಕಾರಿಗಳು, ಲೋಕಾಯುಕ್ತರು ಸಭೆ ನಡೆಸಿ ತಿಳಿಸಿದ ವಿಷಯಗಳ ಬಗ್ಗೆ ಗಮನ ಹರಿಸಬೇಕು. ಪ್ರತಿಯೊಂದು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ, ಶಿಸ್ತುಬದ್ದವಾಗಿ ಗಟಾರು ನಿರ್ಮಾಣ, ಬೀದಿದೀಪ ಅಳವಡಿಕೆ, ಗ್ರಾಮದ ಶುಚಿತ್ವ ಮತ್ತು ನರೇಗಾ ಯೋಜನೆ ಸಮರ್ಪಕ ಅನುಷ್ಠಾನದ ಬಗ್ಗೆ ಗಮನ ಹರಿಸಬೇಕು. ಎಲ್ಲ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಮೇಲಿಂದ ಮೇಲೆ ಸಭೆ ನಡೆಸಿ ಸೂಕ್ತ ಮೇಲ್ವಿಚಾರಣೆ ಮಾಡಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್ ಎ ಸಾತ್ವಿಕ್, ರಾಯಚೂರ ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಚಿಟಗುಪ್ಪಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಮಕ್ಕಳ ಸಹಾಯವಾಣಿಯ ಪರಿಷ್ಕೃತ ಲೋಗೋ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜು.24: ಮಿಷನ್ ವಾತ್ಸಲ್ಯಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವಮಕ್ಕಳ ಸಹಾಯವಾಣಿ1098ರಪರಿಷ್ಕೃತ ಲೋಗೋವನ್ನುಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಗುರುವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಬಿಡುಗಡೆಗೊಳಿಸಿದರು.

ಕೊಪ್ಪಳ ಜಿಲ್ಲೆಯ ಶೈಕ್ಷಣಿಕ ಸಂಸ್ಥೆಗಳಲ್ಲಿ, ಸರ್ಕಾರಿ ಕಛೇರಿಗಳ ಆವರಣ, ಬಸ್ ನಿಲ್ದಾಣಗಳ ಮತ್ತು ಇನ್ನೂ ಮುಂತಾದ ಸ್ಥಳಗಳಲ್ಲಿ ಮಕ್ಕಳ ಸಹಾಯವಾಣಿ–1098ರ ಕುರಿತು ಶಾಶ್ವತ ಬರಹವನ್ನು ಕಡ್ಡಾಯವಾಗಿ ಬರೆಯಿಸುವಂತೆ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೊಪ್ಪಳಜಿಲ್ಲಾಮಕ್ಕಳರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ್ ಅವರು ಮಾತನಾಡಿ, ಮಿಷನ್ ವಾತ್ಸಲ್ಯಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಸಹಾಯವಾಣಿ 1098 ಅನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮಕ್ಕಳಲ್ಲಿ ಜಾಗೃತಿಯನ್ನು ಮೂಡಿಸಲು ಅದರ ಲೋಗೋವನ್ನ ಬದಲಾಯಿಸಲಾಗಿದ್ದು, ಇದರ ಕುರಿತು ಸಮುದಾಯದಲ್ಲಿ ವ್ಯಾಪಕವಾದ ಜಾಗೃತಿಯನ್ನು ಮೂಡಿಸಬೇಕಾಗಿರುತ್ತದೆ. ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕರಣೆ 2023 ರನ್ವಯ ಹಾಗೂ ಮಾನ್ಯ ಉಚ್ಚನ್ಯಾಯಾಲಯ ಕರ್ನಾಟಕ ನಿರ್ದೇಶನದಂತೆ ಶೈಕ್ಷಣಿಕ ಸಂಸ್ಥೆಗಳಲ್ಲಿ, ವಸತಿ ನಿಲಯಗಳಲ್ಲಿ, ವಸತಿ ಸಹಿತ ಶೈಕ್ಷಣಿಕ ಸಂಸ್ಥೆಗಳಲ್ಲಿ,

ಸರಕಾರಿ ಕಚೇರಿಗಳ ಆವರಣಗಳಲ್ಲಿ ಈ ಮಕ್ಕಳ ಸಹಾಯವಾಣಿಯ ಕುರಿತು ಕಡ್ಡಾಯವಾಗಿ ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸ ಬೇಕಾಗಿರುತ್ತದೆ. ಇದರಿಂದ ಸಂಕಷ್ಟ ಪರಿಸ್ಥಿತಿಯಲ್ಲಿರುವ ಮಕ್ಕಳು ತಮ್ಮ ಸಮಸ್ಯೆಗಳ ಕುರಿತು ಅಥವಾ ಮಗುವಿನ ಸಂಕಷ್ಟಕರ ಪರಿಸ್ಥಿತಿಯ ಕುರಿತು ಸಾರ್ವಜನಿಕರು ಈ ಸಹಾಯವಾಣಿಗೆ ಮಾಹಿತಿಯನ್ನು ನೀಡಬಹುದಾಗಿದೆ.ಮಾಹಿತಿಯು ಲಭ್ಯವಾದ 60 ನಿಮಿಷದಲ್ಲಿ, ಅಂತಹ ಮಗುವನ್ನ ರಕ್ಷಿಸಿ ಮುಂದಿನ ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿ, ಕೊಪ್ಪಳ ರವರ ಮುಂದೆ ಹಾಜರಪಡಿಸಲಾಗುವುದು ಎಂದು ಅವರು ಸಭೆಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾನಿರ್ದೇಶಕಮಂಜುನಾಥ ಗುಂಡುರ, ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಕೃಷ್ಣಮೂರ್ತಿ ದೇಸಾಯಿ, ಜಂಟಿ ಕೃಷಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್.,

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ಶೆಟ್ಟಪ್ಪನವರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಶ್ರೀಶೈಲ ಬಿರಾದಾರ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಗುರು ಸ್ಮರಣೆ ಗುರು ಮಹತ್ವದ ಬೆಳಕು



ಮಲ್ಲಮ್ಮ ನುಡಿ ವಾರ್ತೆ

ಕುಕನೂರ:ಜು.24:ಯಲಬುರ್ಗಾ ಗುರು ಸ್ಮರಣೆ ಗುರು ಮಹತ್ವ ಬೆಳಕು ವಿಷಯ ಚಿಂತನ ಗೋಷ್ಠಿಯಲ್ಲಿ ಮಾತನಾಡಿದ ಶ್ರೀ ಗಳು ನಮ್ಮಲ್ಲಿರುವ ಅಜ್ಞಾನವನ್ನು ಹೋಗಲಾಡಿಸಿ ಸುಜ್ಞಾನದ ಕಡೆಗೆ ಕರೆದು–ಕೊಂಡು ಹೊಗುವದೆ ಗುರುವಿನ ಕಾರ್ಯವಾಗಿದೆ, ಗುರುವಿನ ಮಹತ್ವ ಅಪಾರವಾಗಿದೆ ಎಂದು ಗಿಣಿಗೇರಿಯ ಸರಸ್ವತಿ ಪೀಠದ ಶ್ರೀಕಂಠಸ್ವಾಮೀಜಿ ಅವರು ದಮ್ಮೂರ ಗ್ರಾಮದ ಶ್ರೀ ಭೀಮಾಂಬಿಕಾದೇವಿ ಶಿವಾನುಭವ ಸೇವಾ ಸಮಿತಿಯ 376 ನೇ ಶಿವಾನುಭವ ಗೋಷ್ಠಿಯಲ್ಲಿ ಸಸಿಗೆ ನೀರು ಹಾಕಿ ಚಾಲನೆ ನೀಡಿ ಮಾತನಾಡಿದರು. ಗುರು ಸಮುದ್ರ ಇದ್ದ ಹಾಗೆ, ಅವರಲ್ಲಿರುವ ಜ್ಞಾನವನ್ನು ಎಷ್ಟೂ ಸಂಪಾದನೆ ಮಾಡಿದರು ಕಾಲಿಯಾಗುವುದಿಲ್ಲ, ಆದ್ದ–ರಿಂದ ನಾವೆಲ್ಲರೂ ಗುರುಗಳ ಮಾರ್ಗದರ್ಶನದಲ್ಲಿ ಸಾಗಬೇಕು ನಾವು ಹತ್ತು ದೇವರು ಪೂಜಿಸುವುದಕ್ಕಿಂತ ಹೆತ್ತತಂದೆ ತಾಯಿಯವರನ್ನು ಪೂಜಿಸಬೇಕು ಎಂದು ಬಿಸರಳ್ಳಿಯ ಯುವ ಸಾಹಿತಿ ಪವನ ಕುಮಾರ ಕಮ್ಮಾರ ಮಾತನಾಡಿದರು. ವಿದ್ಯಾರ್ಥಿಗಳು ಕಲಿಯುವ ಹಂತದಲ್ಲಿ ಕಲಿಯುವ ವಯಸ್ಸಿನಲ್ಲಿ ಓದುವ ಹವ್ಯಾಸವನ್ನು ರೂಡಿಸಿಕೊಂಡಾಗ ಉತ್ತಮ ಅಂಕ ಪಡೆದುಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ಇದರಿಂದ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ಎಂದು ದಮ್ಮೂರಿನ ಪ್ರೌಢಶಾಲೆಯ ಮುಖ್ಯ ಗುರು ಎಫ್.ಎಂ. ಕಳ್ಳಿ ಅವರು ಮಾತನಾಡಿದರು. ಗುರುಗಳಿಂದ ಮಾರ್ಗದರ್ಶನ ಜ್ಞಾನ ಪಡೆದುಕೊಂಡು ಅವರನ್ನು ಮೀರಿಸುವಂತೆ ಬೆಳೆಯಬೇಕು ಆಗ ಗುರುಗಳು ಆನಂದದಿಂದ ಇರಲು ಸಾಧ್ಯ ಎಂದು ವಕೀಲರಾದ ಮಲ್ಲನಗೌಡ ತರಲಕಟ್ಟಿ ಅವರು ಮಾತನಾಡಿದರು. ವಿಧ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅವರಿಗೆ ಪ್ರೋತ್ಸಾಹ ಮಾಡಿ ಅವರ ವಿದ್ಯಾಭ್ಯಾಸ ಉನ್ನತ ಮಟ್ಟಕ್ಕೆ ಸಾಗಲಿ ಎಂದು ಶಿವಾನುಭವ ಸೇವಾ ಸಮಿತಿಯಿಂದ ಕಾರ್ಯಕ್ರಮ ಪ್ರತಿ ವರ್ಷ ಆಯೋಜನೆ ಮಾಡುತ್ತಿದೆ ಇದರ ಸದುಪಯೋಗವನ್ನು ಪಡೆಯಬೇಕು ಎಂದು ಪ್ರಾಸ್ತವಿಕವಾಗಿ ಗುರುಮೂರ್ತಿ ಡಿ ಬಡಿಗೇರ ಅವರು ಮಾತನಾಡಿದರು. ಶ್ರೀಮಠದ ಒಡೆಯರಾದ ಹನುಮಂತಪ್ಪ ಜ್ಜ ಧರ್ಮ ಮಠ ಹಾಗೂ ಶರಣಯ್ಯ ಹಿರೇಮಠ ಸಾನಿಧ್ಯವನ್ನು ವಹಿಸಿದ್ದರು. ಶ್ರೀ ಭೀಮಾಂಬಿಕಾದೇವಿ ಶಿವಾನುಭವ ಸೇವಾ ಸಮಿತಿ ಅಧ್ಯಕ್ಷ ಶರಣಬಸಪ್ಪ ದಾನಕೈ ಅವರು ಅಧ್ಯಕ್ಷತೆಯನ್ನು ವಹಿಸಿದ್ದರು. ನಿಡುಗುಂದಿಯ ಮು.ಗುರು ಆನಂದ ಸೋಬಗಿನ, ದಮ್ಮೂರಿನ ಮು.ಗುರು ಕನಕಪ್ಪ ಕಂಬಳಿ, ಮಹದೇವಪ್ಪ ಕಮ್ಮಾರ, ದೇವೇಂದ್ರಪ್ಪ ಬಡಿಗೇರ, ಅಮರೇಶ ಬಡಿಗೇರ, ಐಇಸಿ ಸಂಯೋಜಕ ಶರಣಪ್ಪ ಹಾಲಕೇರಿ, ರಸೂಲ ಸಾಬ ಹಿರೇಮನಿ, ಡಾ.ಪ್ರಕಾಶ ರಾವಣಕಿ, ರಷೀದ ಮಿಯಾ ಖಾಜಿ, ನಿಂಗಪ್ಪ ಹಳ್ಳಿಕೇರಿ, ನೀಲಕಂಠಪ್ಪ ರೊಡ್ಡರ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹೊಳಿಯಮ್ಮ ಹಳ್ಳಿಕೇರಿ, ಈರಪ್ಪ ರಾವಣಕಿ, ಕಳಕಪ್ಪ ಹಡಪದ, ಚಂದಪ್ಪ ಜಕ್ಕಲಿ, ಯಮನೂರಪ್ಪ ಹಳ್ಳಿಕೇರಿ, ಭೀಮಣ್ಣ ಜರಕುಂಟಿ, ಭೀಮಣ್ಣ ಹವಳಿ, ಸಂಗಯ್ಯ ಶಾಸ್ತ್ರಿಮಠ, ಅಂದಾನಯ್ಯ ಹಿರೇಮಠ , ಶರಣಯ್ಯ ದ್ಯಾಮನಗೌಡ್ರ, ಗಣೇಶ ನಿಡಗುಂದಿ ಸೇರಿದಂತೆ ಇತರರು ಇದ್ದರು ಕನ್ನಡ ಕೋಗಿಲೆ ಅರ್ಜುನ ಇಟಗಿ, ಹಾಗೂ ಸಂಗೀತ ಕಲಾವಿದ ಡಿ ಮೌನೇಶ ಬಡಿಗೇರ ಇವರಿಗೆ ಸಂಗೀತ ಕಲಾರತ್ನ ಪ್ರಶಸ್ತಿಯನ್ನು ಸಮಿತಿವರಿಂದ ನೀಡಲಾಯಿತು . ನಂತರ ಕನ್ನಡ ಕೋಗಿಲೆ ಅರ್ಜುನ ಇವರಿಂದ ಸಂಗೀತ ಕಾರ್ಯಕ್ರಮ ಜರುಗಿತು.ನಂತರ ಅನ್ನ ಸಂತರ್ಪಣೆ ಜರುಗಿತು.

# ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.24–ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ಮಂತ್ರಾಲಯದಿಂದ ರಸ್ತೆ ಮೂಲಕ ಜುಲೈ 30 ರಂದು ಬುಧವಾರ ಸಂಜೆ 4.30 ಗಂಟೆಗೆ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

ಜುಲೈ 31 ರಂದು ಗುರುವಾರ ಬೆಳಿಗ್ಗೆ 9.30 ಗಂಟೆಗೆ ಕಲಬುರಗಿಯ ವೈದ್ಯಕೀಯ ವಿಜ್ಞಾನಗಳ ಆಸ್ಪತ್ರೆಗೆ ಭೇಟಿ ನೀಡಿ ಕಾಮಗಾರಿಗಳನ್ನು ಪರಿಶೀಲನೆ ನಡೆಸುವರು. ಬೆಳಿಗ್ಗೆ 11 ಗಂಟೆಗೆ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಭಾಗವಹಿಸುವರು. ಮಧ್ಯಾಹ್ನ 2 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 3 ಗಂಟೆಗೆ ಕಲಬುರಗಿ ಐವಾನ್ ಶಾಹಿ ಅತಿಥಿ ಗೃಹದಲ್ಲಿ ಮಹಿಳೆಯರಿಂದ ಅಹವಾಲು ಸ್ವೀಕರಿಸುವರು. ನಂತರ ಅಂದು ರಾತ್ರಿ 9 ಗಂಟೆಗೆ ಕಲಬುರಗಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ರಂಗಭೂಮಿ ಹಿರಿಯ ಕಲಾವಿದರಿಗೆ ನಾಟಕ ಅಕಾಡೆಮಿ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜು.24: ರಾಜ್ಯ ಸರಕಾರ ಮತ್ತು ಕರ್ನಾಟಕ ನಾಟಕ ಅಕಾಡೆಮಿಯು, ವೃತ್ತಿ ರಂಗಭೂಮಿ ಹಿರಿಯ ಕಲಾವಿಧರಾದ ದೇವರಾಜ ಹಲಿಗೇರಿ ಅವರ ಜೀವಮಾನದ ಸಾಧನೆ ಗುರುತಿಸಿ 2025–26 ನೇ ಸಾಲಿನ ನಾಟಕ ಅಕಾಡೆಮಿ ಪ್ರಶಸ್ತಿ ನೀಡಿ ಗೌರವಿಸಿದ್ದನ್ನು ಸ್ವಾಗತಿಸಿ, ಗಿಣಿಗೇರ ವಲಯ ಕನ್ನಡ ಸಾಹಿತ್ಯ ಪರಿಷತ್ತು



ಹರ್ಷ ವ್ಯಕ್ತ ಪಡಿಸಿದೆ.

ಹಾಗೂ ದೇವರಾಜ್ ಅವರು ಎಲೆಮರೆಕಾಯಿ ಹಾಗೆ ಇದ್ದಿದ್ದು ಅವರ ಅಖಂಡ 55 ವರ್ಷದ ಸೇವೆಗೆ ಸೂಕ್ತ ಗೌರವ ಸಿಕ್ಕಿದೆ. ಈ ಮೂಲಕ ಗಿಣಿಗೇರಿ ಗ್ರಾಮಕ್ಕೆ ರಾಜ್ಯ ಮಟ್ಟದ ಪ್ರಶಸ್ತಿ ಬಂದಿದ್ದು ಹೆಮ್ಮೆಯ ವಿಷಯ ಎಂದು ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಶಂಕರ ಗೌಡ ಪಾಟೀಲ್ ಸಂತಸ ವ್ಯಕ್ತ ಪಡಿಸಿದ್ದಾರೆ.

# ಯುಕೆ ಜೊತೆಗೆ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ: ಭಾರತದ 75,000 ಉದ್ಯೋಗಿಗಳಿಗೆ ಪ್ರಯೋಜನ

ನವದೆಹಲಿ:ಜು.24:ಇಂಗ್ಲೆಂಡ್ ಜೊತೆಗಿನ ಮುಕ್ತ ವ್ಯಾಪಾರ ಒಪ್ಪಂದದಿಂದ 75,000 ಕ್ಕೂ ಹೆಚ್ಚು ಭಾರತೀಯ ಉದ್ಯೋಗಿಗಳು ಮತ್ತು 900 ಕ್ಕೂ ಹೆಚ್ಚು ಉದ್ಯೋಗದಾತರಿಗೆ ಪ್ರಯೋಜನವಾಗಲಿದೆ ಎಂದು ಅಂದಾಜಿಸಲಾಗಿದೆ.

ಇದು ಯುಕೆಯಲ್ಲಿ ಪೋಸ್ಟ್ ಮಾಡಲಾದ ಭಾರತೀಯ ವೃತ್ತಿಪರರಿಗೆ, ಮೂರು ವರ್ಷಗಳವರೆಗೆ ಸಾಮಾಜಿಕ ಭದ್ರತಾ ಕೊಡುಗೆಗಳನ್ನು ಪಾವತಿಸುವುದರಿಂದ ವಿನಾಯಿತಿ ನೀಡುತ್ತದೆ ಎಂದು ವಾಣಿಜ್ಯ ಸಚಿವಾಲಯದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

283 ಬಿಲಿಯನ್ ಡಾಲರ್ ಮೊತ್ತದ ಭಾರತದ ಐಟಿ ಉದ್ಯಮಕ್ಕೆ ಯುಕೆ ಎರಡನೇ ಅತಿದೊಡ್ಡ ರಫ್ತು ಮಾರುಕಟ್ಟೆಯಾಗಿರುವುದರಿಂದ ಈ ಕ್ರಮ ಮಹತ್ವದ್ದಾಗಿದೆ. ಅಲ್ಲದೇ ರಫ್ತು ವಲಯಕ್ಕೆ ಶೇಕಡಾ 17 ರಷ್ಟು ಕೊಡುಗೆ ನೀಡುತ್ತದೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್, ಆಅಅ ಭಾಗವಾಗಿ (The Double Contribution Convention ) ಮೂರು ವರ್ಷಗಳವರೆಗೆ ಸಾಮಾಜಿಕ ಭದ್ರತಾ ಕೊಡುಗೆ ಪಾವತಿಸುವುದರಿಂದ ವಿನಾಯಿತಿ ನೀಡುವುದರಿಂದ ಭಾರತೀಯ ಉದ್ಯೋಗಿಗಳು ಮತ್ತು ಅವರ ಉದ್ಯೋಗದಾತರಿಗೆ ಗಮನಾರ್ಹ ಪ್ರಗತಿ ಎಂದಿದ್ದಾರೆ.

ಮುಕ್ತ ವ್ಯಾಪಾರದೊಂದಿಗೆ ಆಅಅಯಿಂದ ಉಭಯ ದೇಶಗಳ ಉದ್ಯೋಗಿಗಳು ತಾತ್ಕಾಲಿಕವಾಗಿ ಕೆಲಸ ಮಾಡುವಾಗ, ತಮ್ಮ ಸಾಮಾಜಿಕ ಭದ್ರತೆಗೆ ದುಪ್ಪಟ್ಟು ಕೊಡುಗೆಗಳನ್ನು ಪಾವತಿಸಬೇಕಾಗಿಲ್ಲ.

ಭಾರತ ಮತ್ತು ಯುಕೆ ಗುರುವಾರ ಮುಕ್ತ ವ್ಯಾಪಾರ ಒಪ್ಪಂದಕ್ಕೆ (ಎಫ್‌ಟಿಎ) ಸಹಿ ಹಾಕಿವೆ. ಇದರಿಂದ ಬ್ರಿಟಿಷ್ ವಿಸ್ಕಿ, ಕಾರುಗಳು ಮತ್ತಿತರ ದುಬಾರಿ ವಸ್ತುಗಳ ಮೇಲಿನ ಸುಂಕವನ್ನು ಕಡಿತಗೊಳಿಸುತ್ತದೆ. ಜೊತೆಗೆ ವಾರ್ಷಿಕವಾಗಿ ಸುಮಾರು 34 ಬಿಲಿಯನ್ ಡಾಲರ್ ನಷ್ಟು ದ್ವಿಪಕ್ಷೀಯ ವ್ಯಾಪಾರವನ್ನು ಹೆಚ್ಚಿಸುತ್ತದೆ.

ಈ ಒಪ್ಪಂದಕ್ಕೆ ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರ ಸಮ್ಮುಖದಲ್ಲಿ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಮತ್ತು ಬ್ರಿಟಿಷ್ ವಾಣಿಜ್ಯ ಸಚಿವ ಜೊನಾಥನ್ ರೆನಾಲ್ಡ್ಸ್ ಸಹಿ ಹಾಕಿದರು.

## ಕನಕಟ್ಟದಲ್ಲಿ ಮನೆ ಮನೆಗೆ ಪೊಲೀಸ್ ಭೇಟಿ:ಕಾನೂನಿನ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಪೊಲೀಸ್ ಇಲಾಖೆಯಿಂದ ಸಾರ್ವಜನಿಕರ ಸುರಕ್ಷತೆಗಾಗಿ ಸರಕಾರ ರೂಪಿಸಲಾದ ಮನೆ ಮನೆಗೆ ಪೊಲೀಸ್ ಎಂಬ ವಿನೂತನ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ರಾಜ್ಯದ ಗೃಹ ಮಂತ್ರಿಗಳ ಮಹತ್ವಾಕಾಂಕ್ಷಿ ಯೋಜನೆ ಇದಾಗಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ತಾಲೂಕಿನ ಕನಕಟ್ಟ ಗ್ರಾಮದಲ್ಲಿ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮಕ್ಕೆ ಪಿಎಸ್ಐ ಸುರೇಶ ಚವ್ಹಾಣ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಸಾರ್ವಜನಿಕರಿಗೆ ಅತ್ಯುತ್ತಮ ಸೇವೆ ಒದಗಿಸುವ ಉದ್ದೇಶದಿಂದ ಇಂತಹದೊಂದು ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸೈಬರ್ ಅಪರಾಧ, ಕರ್ನಾಟಕ ಡ್ರಗ್ಸ್ ಫ್ರೀ ಆಪ್, ಬಾಲ್ಯವಿವಾಹ ನಿಷೇಧ ಕಾಯ್ದೆ, ಸಾಮಾಜಿಕ ಜಾಲ ತಾಣಗಳಲ್ಲಿ ಬರುವ ಸತ್ಯಾಸತ್ಯತೆ ಬಗ್ಗೆ, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವುದು, ಕಾರಿನಲ್ಲಿ ಸಂಚರಿಸುವವರು ಸೀಟ್ ಬೆಲ್ಟ್ ಧರಿಸುವುದು ಸೇರಿದಂತೆ ಇತರೆ ಸುರಕ್ಷತಾ ಕ್ರಮಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಕಾರ್ಯ ಮಾಡಿದರು. ಪುರಷ ಪೊಲೀಸ್ ಹಾಗೂ ಮಹಿಳಾ ಪೊಲೀಸ್ ಸಿಬ್ಬಂದಿಗಳು ಸೇರಿದ ತಂಡವು ಮನೆ ಮನೆಗೆ ತೆರಳಿ ಸಾರ್ವಜನಿಕರ ಸುರಕ್ಷತೆಗಾಗಿ ಕೈಗೊಂಡ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುತ್ತದೆ. ಸಾರ್ವಜನಿಕರು ವಾಸಿಸುವ ಮನೆ ಮತ್ತು ವಾರ್ಡಗಳಲ್ಲಿ ಹೆಚ್ಚಿನ ಭದ್ರತೆಗಾಗಿ, ಸಿಸಿಟಿವಿ ಅಳವಡಿಸುವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವದರ ಜೊತೆಗೆ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಸಣ್ಣ ಪುಟ್ಟ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳುವ ಕೆಲಸ ಮಾಡಲಾಗುತ್ತಿದೆ. ಪ್ರಭಾರಿ ಬಿಟಿ, ಬಿಟ ಪೊಲೀಸ್ ಸಿಬ್ಬಂದಿಗಳ ಮೊಬೈಲ್ ನಂಬರಗಳನ್ನು ಸಾರ್ವಜನಿಕರಿಗೆ ಕೊಟ್ಟಿದ್ದು, ತುರ್ತು ಪರಿಸ್ಥಿತಿಯಲ್ಲಿ 112ಗೆ ಕರೆ ಮಾಡಲು ತಿಳಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಪ್ರೊಬೆಷನರಿ ಪಿಎಸ್ಐ ಪ್ರದೀಪ, ಎಎಸ್ಐಗಳಾದ ಅಂಬೇಡ್ಕರ್, ಪ್ರಭು, ಬಿಟ್ ಪೊಲೀಸ್ ಪ್ರಭು, ದಯಾನಂದ ಸೇರಿದಂತೆ ಸಿಬ್ಬಂದಿ ವರ್ಗದವರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಯಡ್ರಾಮಿಯಲ್ಲಿ ಮಾಜಿ ದೇವದಾಸಿ ಮಹಿಳೆಯರಿಗೆ ಆರೋಗ್ಯ ತಪಾಸಣಾ ಶಿಬಿರ

ಕಲಬುರಗಿ,ಜು.24.(ಕ.ವಾ.)- ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ದೇವದಾಸಿ ಪುನರ್ವಸತಿ ಯೋಜನೆ ಕಲಬುರಗಿ ಜಿಲ್ಲಾ ಕಚೇರಿ ವತಿಯಿಂದ ಬುಧವಾರ (ಜುಲೈ 23ರಂದು) ಯಡ್ರಾಮಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಾಜಿ ದೇವದಾಸಿ ಮಹಿಳೆಯರಿಗಾಗಿ ತಾಲೂಕು ಮಟ್ಟದ ಸಾಮಾನ್ಯ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.

ಈ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಯಡ್ರಾಮಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಪ್ರತಿಭಾ ಹರವಾಳ ಅವರು, ಆರೋಗ್ಯವೇ ಭಾಗ್ಯ, ನಮ್ಮ ಆರೋಗ್ಯ ಉತ್ತಮವಾಗಿಡಲು ಪಾಲಿಸಬೇಕಾದ ಆಹಾರ ಪದ್ಧತಿ ಮತ್ತು ದಿನನಿತ್ಯ ವಾಯುವಿಹಾರ ಅತೀ ಅವಶ್ಯಕವಾಗಿದೆ. ತಂಬಾಕು ಸೇವನೆಯಿಂದ ಕ್ಯಾನ್ಸರ್ ರೋಗದ ಬಗ್ಗೆ ಮಾಹಿತಿ ನೀಡಿದರು. ರಕ್ತದೊತ್ತಡ, ಸಕ್ಕರೆ ಕಾಯಿಲೆ ಸಹಜವಾಗಿ ಕಾಣಿಸುತ್ತಿವುದರಿಂದ ಇದನ್ನು ತಪಾಸಣೆ ಮಾಡಿಕೊಳ್ಳಬೇಕು. ಆದಷ್ಟು ಕರಿದ ಪದಾರ್ಥಗಳ ಸೇವನೆಯಿಂದ ದೂರವಿದ್ದು, ಹಸಿ ತರಕಾರಿಯನ್ನು ಊಟದಲ್ಲಿ ಬಳಕೆ ಮಾಡುವುದು ಅತೀ ಅವಶ್ಯವಾಗಿದೆ. ಅನಾರೋಗ್ಯದಿಂದ ಬಳಲುವವರಿಗೆ ಸರಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಉಚಿತವಾಗಿ ಚಿಕಿತ್ಸೆ ನೀಡಿ ಔಷದೋಪಚಾರವನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ಐಸಿಟಿಸಿ ಆಪ್ತಸಮಾಲೋಚಕರಾದ ಅಂಬಿಕಾ ಜಾನೆ ಅವರು ಮಾತನಾಡಿ, ದೇವದಾಸಿ ಪದ್ಧತಿ ಅನಾಧಿಕಾಲದಿಂದ ಬಂದಿದ್ದು, ಈ ಪದ್ಧತಿಯು ಅನಿಷ್ಠ ಪದ್ಧತಿಯಾಗಿದ್ದು, ದೇವದಾಸಿ ಅನಿಷ್ಠ ಪದ್ಧತಿ ಮತ್ತು ಇದರ ದುಷ್ಪರಿಣಾಮಗಳ ಬಗ್ಗೆ ಶಿಬಿರದಲ್ಲಿ ಮಾಹಿತಿ ನೀಡಿದರು. ನಂತರ ಅವರು ಹೆಚ್.ಐ.ವಿ ಏಡ್ಸ್ ರೋಗ ಕುರಿತು ಮಾಹಿತಿ ನೀಡಿದರು. ಶಿಬಿರದಲ್ಲಿ ಸ್ಟಾಫ್ ನರ್ಸರಾದ ಮಂಜುಳಾ ಜಿ., ಎನ್.ಸಿ.ಡಿ. ಲ್ಯಾಬ್ ಟೆಕ್ನಿಷಿಯನ್ ರೇಖಾ ಎನ್.ಪಾಟೀಲ, ಎನ್.ಸಿ.ಡಿ ಡಿ.ಇ.ಓ. ರಾದ ಜ್ಯೋತಿ ಎಸ್. ಪಾಟೀಲ ಸೇರಿದಂತೆ ಮಲ್ಲಿಕಾರ್ಜುನ ಯಡ್ರಾಮಿ, ಗುಂಡಪ್ಪ ಯಾಳವಾರ ಅವರು ಉಪಸ್ಥಿತರಿದ್ದರು. ಯೋಜನಾ ಅನುಷ್ಠಾನಾಧಿಕಾರಿ ವಾಯ್.ಡಿ ಬಡಿಗೇರ ಅವರು ಕಾರ್ಯಕ್ರಮ ನಿರೂಪಿಸಿ ಕೊನೆಯಲ್ಲಿ ವಂದಿಸಿದರು.

### ಮಾದಿಗ ದಂಡೋರ್ ಹೋರಾಟ ಸಮಿತಿಯ ತಾಲೂಕಾಧ್ಯಕ್ಷರಾಗಿ ಲಾಲಪ್ಪ ರಾಂಪುರೆ ಆಯ್ಕೆ

## ಶಿಕ್ಷಣದಿಂದ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ:- ಹಿಪ್ಪಳಗಾಂವ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಪ್ರತಿಯೊಬ್ಬರು ಶಿಕ್ಷಣ ಪಡೆದಾಗ ಮಾತ್ರ ಆರ್ಥಿಕ, ಸಾಮಾಜಿಕ, ರಾಜಕೀಯವಾಗಿ ಅಭಿವೃದ್ಧಿ ಹೊಂದಲು ಸಾಧ್ಯವಿದೆ. ಈ ದಿಸೆಯಲ್ಲಿ ನಾವು ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಜಿಲ್ಲಾಧ್ಯಕ್ಷ ವಿಜಯಕುಮಾರ್ ಹಿಪ್ಪಳಗಾಂವ ಬುಧವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾದಿಗ ದಂಡೋರ್ ಹೋರಾಟ ಸಮಿತಿಯ ವತಿಯಿಂದ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತ ನುಡಿದರು. ಡಿ.ಎಮ್.ಎಸ್.ಎಸ್. ಜಿಲ್ಲಾಧ್ಯಕ್ಷ ಪರಮೇಶ್ವರ್ ಕಾಳಮದರಗಿ ಮಾತನಾಡಿ, ಸರ್ಕಾರದ ಯೋಜನೆಗಳನ್ನು ಸರಿಯಾದ ರೀತಿಯಲ್ಲಿ ಸದುಪಯೋಗ ಪಡೆದುಕೊಂಡು ಉತ್ತಮ ಸಾಧನೆ ಮಾಡಬೇಕು.

ಇದಕ್ಕಾಗಿ ಪರಿಶ್ರಮ ಅತಿ ಮುಖ್ಯವಾಗಿದೆ. ಪೋಷಕರು ಈ ದಿಸೆಯಲ್ಲಿ ಮಕ್ಕಳಿಗೆ ಅನುಕೂಲತೆ ಕಲ್ಪಿಸಿ ಕೊಡಬೇಕು. ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದರು.

**ಪದಾಧಿಕಾರಿಗಳ ಆಯ್ಕೆ:** ತಾಲೂಕಾ ಮಾದಿಗ ದಂಡೋರ ಹೋರಾಟ ಸಮಿತಿಯ ತಾಲುಕಾಧ್ಯಕ್ಷರಾಗಿ ಲಾಲಪ್ಪ ಎಲ್ ರಾಂಪೂರೆ, ಉಪಾಧ್ಯಕ್ಷರಾಗಿ ರಾಜು ಮುಸ್ತರಿ, ಸಿಮೋನ್ ಉಡಬಾಳ, ಪ್ರಧಾನ ಕಾರ್ಯದರ್ಶಿ ಬಸವರಾಜ ಸೊಂಡಿ, ಕಾರ್ಯದರ್ಶಿ, ಅರುಣ ಇಟಗಾ, ಖಜಾಂಚಿ, ಪುಟರಾಜ ಇಟಗಾ, ಕಾರ್ಯಾಧ್ಯಕ್ಷರಾಗಿ, ಪ್ರಲಾದ ಮಾಡಗೂಳ, ಸಂಘಟನೆ ಸಂಚಾಲಕರಾಗಿ, ವಿಠಲ ರಾಂಪೂರ, ಸಹ ಕಾರ್ಯದರ್ಶಿಯಾಗಿ ರಾಜಕುಮಾರ ಚಾಂಗಲೇರಾ, ಸಹ ಉಪಾಧ್ಯಕ್ಷರಾಗಿ ಜೈಶೀಲ ತಾಳಮಡಗಿ, ಸಲಹೆಗಾರರಾಗಿ ಧನರಾಜ ಮುಸ್ತರಿ, ಪದಾಧಿಕಾರಿಗಳಾಗಿ ಬಸವರಾಜ ಬೇಳಕೇರಾ, ರಾಜಕುಮಾರ ಮುದನಾಳ, ಸಂಜುಕುಮಾರ ವಳಖಿಂಡಿ, ಸಂಜು ರಾಂಪೂರ, ಚಂದ್ರಕಾಂತ ಮಾಡಗೂಳ, ಸತೀಶ ಇಟಗಾ, ಶ್ರೀನಿವಾಸ ನಿರ್ಣಾ, ಶಂಕರ ವಾಲಿ ಮುಸ್ತರಿ, ಪ್ರಶಾಂತ ಬೇಳಕೇರಾ, ರಾಜು ವಳಖಿಂಡಿ, ಉಮೇಶ ಬಗದಲ, ಅಸ್ಕರ ಮನ್ನಾಎಖೇಳಿ, ಪ್ರಕಾಶ ಬಗದಲ, ಅನೀಲ ಬಂಬುಳಗಿ, ದಯಾನಂದ ರೇಕುಳಗಿ, ವಿನೋದ ಮಂಗಲಗಿ, ಯಶವಂತ ಮನ್ನಾಎಖೇಳ್ಳಿ, ಪಪ್ಪು ಚತ್ತಾ-ರೆ, ರಾಜು ಹುಮನಾಬಾದ ಇವರನ್ನು ನೇಮಕ ಮಾಡಿ ಆದೇಶ ಪತ್ರ ನೀಡಿದರು. ಈ ಸಂದರ್ಭದಲ್ಲಿ ಮಹಾಸಭಾ ಅಧ್ಯಕ್ಷ ರವಿ ನಿಜಾಮಪುರೆ, ಜಿಲ್ಲಾ ಉಪಾಧ್ಯಕ್ಷ ಕಮಲಾಕಾರ ಹೆಗಡೆ, ಬೀದರ್ ದಕ್ಷಿಣ ಅಧ್ಯಕ್ಷ ವೀರಶೆಟ್ಟಿ ಬಂಬುಳಗಿ, ಹುಮನಾಬಾದ ಅಧ್ಯಕ್ಷ ಗೋರಖನಾಥ ನಿಂಬೂರ್, ದತ್ತು ಕಾಲೆಬಾಗ್ ಮುದನ್ನಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಸಮಾಜದ ಅಭಿವೃದ್ಧಿಗೆ ಮತ್ತು ಅನ್ಯಾಯದ ವಿರೋಧ ಹಾಗೂ ಒಳ ಮೀಸಲಾತಿಗಾಗಿ ಹೋರಾಡಲು ಸದಾ ಸಿದ್ದನಾಗಿರುತ್ತೇನೆ. ಸಮಾಜದ ಸಂಘಟನೆ ಮಾಡಿ ಪ್ರತಿಯೊಬ್ಬರಿಗೂ ಸರ್ಕಾರದ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ಒದಗಿಸುವ ಪ್ರಯತ್ನ ಮಾಡುತ್ತೇನೆ.

**-ಲಾಲಪ್ಪ ಎಲ್. ರಾಂಪುರೆ**
**ನೂತನ ತಾಲೂಕಾಧ್ಯಕ್ಷರು ಚಿಟಗುಪ್ಪ**

## ಇಂದು ಶ್ರಾವಣ ಮಾಸದ ನಿಮಿತ್ಯ ಆಧ್ಯಾತ್ಮಿಕ ಪ್ರವಚನ ಉದ್ಘಾಟನೆ

(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಜು 24 ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಹಾಗೂ ವಿಶ್ವಸ್ಥ ಸಮಿತಿಯಿಂದ ಹಮ್ಮಿಕೊಂಡಿರುವ ಒಂದು ತಿಂಗಳ ಪರಿಯಂತ ಶ್ರಾವಣ ಮಾಸದ ನಿಮಿತ್ಯ ಆಧ್ಯಾತ್ಮಿಕ ಪ್ರವಚನ ಉದ್ಘಾಟನಾ ಕಾರ್ಯಕ್ರಮವನ್ನು ಇದೇ 25 ರಂದು ಶುಕ್ರವಾರ ಸಾಯಂಕಾಲ 6:30 ಗಂಟೆಗೆ ಜರುಗಲಿದೆ. ದಿವ್ಯ ಸಾನಿಧ್ಯ ಮುಚಳಂಬದ ಶ್ರೀ ನಾಗಭೂಷಣ ಶಿವಯೋಗಿ ಸಂಸ್ಥಾನ ಮಠದ ಪೂಜ್ಯ ಶ್ರೀ ಪ್ರಣವಾನಂದ ಮಹಾಸ್ವಾಮಿಗಳು. ಭಾಲ್ಕಿಯ ಸಂಸ್ಥಾನ ಹಿರೇಮಠದ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು. ನೇತ್ರತ್ವ ವಿಜಯಪುರದ ಜ್ಞಾನ ಯೋಗಾಶ್ರಮದ ಪೂಜ್ಯ ಶ್ರೀ ಅದ್ವೈತಾನಂದ ಸ್ವಾಮಿಗಳು. ಉದ್ಘಾಟನೆ ತಹಸೀಲ್ದಾರರಾದ ಡಾ. ದತ್ತಾತ್ರೇಯ ಗಾದಾ. ಅಧ್ಯಕ್ಷತೆ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಅಧ್ಯಕ್ಷರಾದ ಬಸವರಾಜ ಕೊರಕೆ ವಹಿಸಲಿದ್ದಾರೆ.




ಮುಖ್ಯ ಅತಿಥಿಗಳಾಗಿ ನಗರ ಸಭೆಯ ಪೌರಾಯುಕ್ತರಾದ ರಾಜು ಬಣಗಾರ. ಗೌರವ ಉಪಸ್ಥಿತಿ ಶ್ರೀ ಬಸವೇಶ್ವರ ದೇವಸ್ಥಾನ ವಿಶ್ವಸ್ಥ ಸಮಿತಿಯ ಅಧ್ಯಕ್ಷರಾದ ಶಶಿಕಾಂತ ದುರ್ಗೆ. ಸ್ವಾಗತ ನಿರ್ದೇಶಕರಾದ ಈರಣ್ಣಾ ಹಲಶೇಟ್ಟೆ. ವಚನ ಸಂಗೀತ ಮಂಜುನಾಥ್ ಹೇಮಶೆಟೆ ತಬಲಾ ವಾದಕರು. ಪ್ರೇಮ ಗೌಡಗಾಂವೆ ಹಾರಮೋನೆಯಮ ವಾದಕರು. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು. ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಹಾಗೂ ವಿಶ್ವಸ್ಥ ಸಮಿತಿ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಬಸವಕಲ್ಯಾಣ :- ಹುಮನಾಬಾದ ತಾಲೂಕಿನ ಹಳ್ಳಿಖೇಡ (ಬಿ) ಗ್ರಾಮದಲ್ಲಿ ಶ್ರೀ ಸರ್ವೇಶ್ವರ ದೇವಸ್ಥಾನದಲ್ಲಿ ಬ್ರಾಹ್ಮಣ ಸಮಾಜ ಹಮ್ಮಿಕೊಂಡಿದ್ದ ಸತತಧಾರ (ಅಭಿಷೇಕ) ಸಪ್ತಾಹ ಸಮಾರೋಪದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಅಧ್ಯಕ್ಷರಾದ ವೆಂಕಟೇಶ್ ಕುಲಕರ್ಣಿ. ರಾಜ್ಯ ಸಂಘಟನಾ ಕಾರ್ಯದರ್ಶಿ ಸತೀಶ್ ಕುಲಕರ್ಣಿ. ಜಂಟಿ ಕಾರ್ಯದರ್ಶಿ ರಾಜೇಶ್ ಕುಲಕರ್ಣಿ ಹಾಗೂ ತಾಲ್ಲೂಕು ಉಪಾಧ್ಯಕ್ಷರಾದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಜಿ. ಪಂ ಮಾಜಿ ಸದಸ್ಯ ಕೇಶವರಾವ್ ಮಹಾರಾಜ ತಳಘಟಕರ್. ನರಸಿಂಹ ದೀಕ್ಷಿತ್. ಪಾಂಡುರಂಗ ದೀಕ್ಷಿತ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

### ಸಡಗರದಿಂದ ಜರುಗಿದ ವನಮಹೋತ್ಸವ ಸಮಾರೋಪ

## ಹಸಿರು ಮರ ಗಿಡಗಳ ಸಂರಕ್ಷಣೆ ಮಾಡಿದರೆ ನಮಗೆ ಉಳಿಗಾಲ : ಕಾವಡಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ : ಮನುಷ್ಯ ಜೀವಿಸಲು ಬೇಕಾದ ಮೂಲ ವಸ್ತುಗಳು ಗಾಳಿ ನೀರು ಕಾಡುಗಳಾಗಿವೆ ಎಂದು ಪರಿಸರವಾಹಿನಿ ಅಧ್ಯಕ್ಷ ಶೈಲೇಂದ್ರ ಕಾವಡಿ ತಾಲೂಕಿನ ಚಳಕಾಪುರ್ ಗ್ರಾಮದ ಸಿದ್ದರೊಡ ಪ್ರೌಢ ಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜನಜಾಗೃತಿ ಕಾರ್ಯಕ್ರಮ ಹಾಗೂ ವನಮಹೋತ್ಸವ ಸಮಾರೊಪ ಸಮಾರಂಭ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಹಸಿರಿಲ್ಲದೆ ಉಸಿರಿಲ್ಲ ಎಂಬ ವಾಕ್ಯ ಸರ್ವಕಾಲಿಕ ಸತ್ಯ ಉಸಿರಾಟಕ್ಕೆ ಬೇಕಾದ ಆಮ್ಲಜನಕ ಬಿಡುಗಡೆಯಾಗುವುದೇ ಹಸಿರು ಮರ ಗಿಡಗಳಿಂದ ಮನುಷ್ಯ ಜೀವಿಸಲು ಹಸಿರು ಮರ ಗಿಡಗಳು ಸಂರಕ್ಷಣೆ ಮಾಡಿದರೆ ನಮಗೆ ಉಳಿಗಾಲವಿದೆ ಎಂದರು. ಮರ ಗಿಡಗಳ ಬೇರುಗಳು ಮಣ್ಣಿನ ಸವಕಳಿಯನ್ನು ತಡೆದು ಫಲವತ್ತಾದ ಮಣ್ಣು ಮಳೆ ನೀರಿಗೆ ಕೊಚ್ಚಿಕೊಂಡು ಹೋಗುವುದನ್ನು ತಡೆಯುತ್ತದೆ. ಈ ಕಾರಣಕ್ಕಾಗಿ ಕಾಡನ್ನು ಹಸಿರು ಹೊನ್ನು ಎನ್ನುತ್ತಾರೆ ಎಂದರು. ಭಾಲ್ಕಿ ಕ್ಷೇತ್ರದ ಶಾಸಕರು ಹಾಗೂ ಅರಣ್ಯ ಸಚಿವರಾದ ಈಶ್ವರ ಖಂಡ್ರೆ ಅವರು ದೇಶಕ್ಕೆ ಮಾದರಿ ಆಗಿರುವ ಕಾರ್ಯಕ್ರಮ ರೂಪಿಸಿ ಅರಣ್ಯ ಸಂರಕ್ಷಣೆಗೆ ಹಗಲಿರಳು ಶ್ರಮಿಸುತ್ತಿದ್ದಾರೆ. ಇವರು ಸಚಿವರಾದ ಮೇಲೆ ಭಾಲ್ಕಿ ಕ್ಷೇತ್ರ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲಿ ಹಸಿರು ಹೊದಿಕೆ ಹೆಚ್ಚಳಕ್ಕೆ ಅಧ್ಯತೆ ನೀಡಿದ್ದಾರೆ. ಶಾಲಾ ಮಕ್ಕಳಿಗಾಗಿ ಜಾರಿಗೆ ತಂದಿರುವ ಚಿಣ್ಣರ ವನ ದರ್ಶನ ಕಾರ್ಯಕ್ರಮ ಮಕ್ಕಳಲ್ಲಿ ಅರಣ್ಯ ಸಂರಕ್ಷಣೆ ಹಾಗೂ ಮಾಹಿತಿಗೆ ಸಹಾಯವಾಗಿದೆ ಎಂದರು. ಪರಿಸರ ಅಸಮತೋಲನದಿಂದ ಮರಗಿಡಗಳ ನಾಶದಿಂದ ವಾಯುಗುಣದಲ್ಲಿ ಬದಲಾವಣೆಯಾಗಿ ಭೂತಾಪಮಾನ ಹೆಚ್ಚಳವಾಗುತ್ತಿದೆ ಎಂದು ತಿಳಿಸಿದರು. ಭೂತಾಪಮಾನ ಹೆಚ್ಚಳದಿಂದ ಹಲವಾರು ಪ್ರಕೃತಿ ವಿಕೋಪಗಳು ಸಂಭವಿಸಲಾರಂಭಿಸಿವೆ ಭೂತಾಪಮಾನ ಕಡಿಮೆ ಮಾಡಿದರೆ ನಮಗೆ ಉಳಿಗಾಲವಿದೆ ಎಂದು ಎಚ್ಚರಿಕೆ ನೀಡಿದರು. ಶಾಲಾ ಮುಖ್ಯ ಗುರುಗಳಾದ ಪ್ರದೀಪ ಜಮಾದರ್ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೃಷಿ ಮೇಲ್ವಿಚಾರಕ ಮಹೇಶ ಇವರ ಮಾರ್ಗದರ್ಶನ ಪರಿಸರ ಜಾಗೃತಿ ಕಾರ್ಯಕ್ರಮ ಜರುಗಿ-ತ್ತು. ಶಾಲಾ ಆವರಣದಲ್ಲಿ ಸಸಿ ನೆಡೆಸಲಾಯಿತ್ತು. ವಲಯ ಮೇಲ್ವಿಚಾರಕ ಶಿವರಾಜ ಸ್ವಾಗತಿಸಿ ವಂದಿಸಿದರು.

## ಎಸ್.ಬಿ ಕಾಮರ್ಸ್ ಕಾಲೇಜಿನಲ್ಲಿ ಮತದಾರ ಜಾಗೃತಿ ಆಂದೋಲನ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.24: ನಗರದ ಶರಣಬಸವೇಶ್ವರ ವಾಣಿಜ್ಯ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ನನ್ನ ಮತ ಮಾರಾಟಕ್ಕಿಲ್ಲ- ಮತದಾರ ಜಾಗೃತಿ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಶೇಟ್ ಶಂಕರಲಾಲ್ ಲಾಹೋಟಿ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಮಹೇಶ್ವರಿ ಎಸ್ .ಹಿರೇಮಠ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಚುನಾವಣೆಗಳಲ್ಲಿ ಹೆಚ್ಚುತ್ತಿರುವ ಹಣಬಲದಿಂದಾಗಿ ದೇಶಕ್ಕೆ ಭವಿಷ್ಯದಲ್ಲಿ ಗಂಡಾಂತರ ಬರಲಿದೆ. ಚುನಾವಣೆಗಳಲ್ಲಿ ಹಣಬಲ ನಿಲ್ಲದೆ ಹೋದರೆ ಭ್ರಷ್ಟಾಚಾರ ಇನ್ನೂ ಹೆಚ್ಚು ತಾಂಡವಾಡುತ್ತದೆ. ಮುಂದೊಂದು ದಿನ ದೇಶಕ್ಕೆ ಭ್ರಷ್ಟಾಚಾರ ಶಾಪವಾಗಿ ಪರಿಣಮಿಸಲಿದೆ. ಇವತ್ತು ರಾಜ-ಕಾರಣ ಸಮಾಜ ಸೇವೆಯಾಗಿ ಉಳಿಯದೆ ವ್ಯಾಪಾರವಾಗಿ ಬದಲಾಗುತ್ತಿದೆ. ಕ್ರಿಮಿನಲ್ ಆರೋಪ ಹಿನ್ನೆಲೆಯುಳ್ಳ ಕೆಲವು ವ್ಯಕ್ತಿಗಳು ವಿಧಾನಸಭೆ- ಲೋಕಸಭೆಗೆ ಆಯ್ಕೆಯಾಗುತ್ತಿರುವುದು ದುರ್ದೈವದ ಸಂಗತಿಯಾಗಿದ್ದು, ಮತದಾರರು ಚುನಾವಣೆಗಳಲ್ಲಿ ಕೆಲವು ಅಭ್ಯರ್ಥಿಗಳು ನೀಡುವ ಆಮಿಷಕ್ಕೆ ಬಲಿಯಾಗದೆ ಎಚ್ಚೆತ್ತುಕೊಳ್ಳಬೇಕಾಗಿದೆ. ರಾಜಕಾರಣದಲ್ಲಿ ಭ್ರಷ್ಟರೇ ಹೆಚ್ಚುತ್ತಿರುವ ಇವತ್ತಿನ ಕಾಲದಲ್ಲಿ ಒಳ್ಳೆಯ ರಾಜಕಾರಣಿಗಳಿಗೆ ಹಾಗೂ ಒಳ್ಳೆಯ ಅಧಿಕಾರಿಗಳಿಗೆ ಬೆಲೆ ಇಲ್ಲದಂತಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ಸಂಸ್ಥಾಪಕ ರಮೇಶ ಆರ್ ದುತ್ತರಗಿ ಪ್ರಾಸ್ತಾವಿಕವಾಗಿ ಮಾತನಾಡಿದರು

ಕಾಲೇಜಿನ ಪ್ರಾಂಶುಪಾಲ ಪ್ರೋ.ದಯಾನಂದ ಹೊಡಲ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಉಪನ್ಯಾಸಕರಾದ ಪ್ರೋ.ಸಿದ್ದಮ್ಮ ಪಾಟೀಲ್ ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಣೆ ಮಾಡಿದರು. ಉಪನ್ಯಾಸಕರಾದ ಪ್ರೋ.ಪಾರ್ವತಿ ಮೋದಿ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಪ್ರತಿಜ್ಞಾವಿಧಿ ಭೋದಿಸಲಾಯಿತು.




ಬಸವಕಲ್ಯಾಣ: - ಇಲ್ಲಿನ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕದಿಂದ ತ್ರಿಪುರಾಂತ ಯಾತ್ರಿ ನಿವಾಸದಲ್ಲಿ ಅಯೋಜಿಸಲಾಗಿದ್ದ ಪತ್ರಿಕಾ ದಿನಾಚರಣೆ ಸಮಾರಂಭದಲ್ಲಿ ದಿ. ಶಂಕರಪ್ರಸಾದ ದುಬೆ ಪ್ರಶಸ್ತಿ ಪಡೆದ ಹಿರಿಯ ಪತ್ರಕರ್ತ ಚಂದ್ರಕಾಂತ ಹುಣಸಗಿ ಹಾಗೂ ಪತ್ರಕರ್ತರಾದ ಧರ್ಮೇಂದ್ರ ಪೂಜಾರಿ ಬಗದುರಿ ಯವರಿಗೆ ಮಾಜಿ ನಗರಸಭೆ ಸದಸ್ಯರಾದ ರಾಜಕುಮಾರ ಹೊಸಮನಿ ಹಾಗೂ ಸಮಾಜ ಸೇವಕರಾದ ರೇಖಾ ಹೊಸಮನಿ. ಸಾಹಿತಿ ಚಿಂತಕ ಶಿಕ್ಷಣ ಪ್ರೇಮಿ ಡಾ. ಕೆ. ಜಿ. ಶರಣಪ್ಪ ಗದಲೇಗಾಂವ ಯವರು ಗೌರವ ಸನ್ಮಾನ ಮಾಡಿ ಗೌರವಿಸಿದರು. ಸಮಾರಂಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಶಹಾಬಾದ್-ಘರ್ತಾಬಾದ್ ರಸ್ತೆ ಗಂಭೀರ ಸ್ಥಿತಿಯಲ್ಲಿ



ಮಲ್ಲಮ್ಮ ನುಡಿ ವಾರ್ತೆ

ಶಹಾಬಾದ್, ಜುಲೈ 24: ರಾಜ್ಯ ಹೆದ್ದಾರಿ 150 ರಲ್ಲಿ ಶಹಾಬಾದ್‌ನಿಂದ ಘರ್ತಾಬಾದ್‌ಗೆ ಸಂಪರ್ಕಿಸುವ 12 ಕಿಲೋಮೀಟರ್ ರಸ್ತೆ ಎರಡು ವರ್ಷಗಳಿಗೂ ಹೆಚ್ಚು ಕಾಲ ಅಪಾಯಕಾರಿಯಾಗಿ ಶಿಥಿಲಗೊಂಡಿದ್ದು, ಪ್ರಯಾಣಿಕರಿಗೆ ಗಂಭೀರ ಅಪಾಯವನ್ನುಂಟುಮಾಡುತ್ತಿದೆ ಮತ್ತು ದೈನಂದಿನ ಸಾರಿಗೆಗೆ ಅಡ್ಡಿಯಾಗಿದೆ. ಸಂಬಂಧಪಟ್ಟ ಅಧಿಕಾರಿಗಳ ತಾತ್ಕಾಲಿಕ ಪ್ಯಾಚ್‌ವರ್ಕ್ ಹೊರತಾಗಿಯೂ, ಯಾವುದೇ ಶಾಶ್ವತ ಪರಿಹಾರವನ್ನು ಜಾರಿಗೆ ತರಲಾಗಿಲ್ಲ. ಇತ್ತೀಚಿನ ಭಾರೀ ಮಳೆಯಿಂದಾಗಿ ಪರಿಸ್ಥಿತಿ ಗಮನಾರ್ಹವಾಗಿ ಹದಗೆಟ್ಟಿದೆ. ಉಕ್ಕಿ ಹರಿಯುವ ನೀರು ಮತ್ತು ಕಳಪೆ ಒಳಚರಂಡಿ ರಸ್ತೆಯ ದೊಡ್ಡ ಭಾಗಗಳನ್ನು ಕೆಸರುಮಯ, ಅಪಾಯಕಾರಿ ವಲಯವನ್ನಾಗಿ ಮಾಡಿದೆ. ಹಾನಿಗೊಳಗಾದ ಒಂದು ವಿಭಾಗದಲ್ಲಿ ಇತ್ತೀಚೆಗೆ ಒಂದು ಲಾರಿ ಎರಡು ದಿನಗಳ ಕಾಲ ಸಿಲುಕಿಕೊಂಡಿತ್ತು, ಅದನ್ನು ತೆರವುಗೊಳಿಸಲು ಎರಡು ಕ್ರೇನ್‌ಗಳು ಬೇಕಾದವು. ರಸ್ತೆಯು ಭಾರೀ ವಾಹನಗಳಿಗೆ ಬಹುತೇಕ ದುಸ್ತರವಾಗಿದೆ.

ಈ ಮಾರ್ಗದಲ್ಲಿ ಹಲವಾರು ಬೃಹತ್ ಗುಂಡಿಗಳಿವೆ, ಕೆಲವು ಭಾಗಗಳು ಬಹುತೇಕ ಸಂಚಾರಕ್ಕೆ ಯೋಗ್ಯವಲ್ಲ. ಇತ್ತೀಚಿನ ಒಂದು ಘಟನೆಯಲ್ಲಿ, ಮಕ್ಕಳಿಂದ ತುಂಬಿದ ಶಾಲಾ ಬಸ್ ಗುಂಡಿಯಲ್ಲಿ ಸಿಲುಕಿಕೊಂಡಿದೆ. ಶಿಕ್ಷಕರು ಮತ್ತು ಸ್ಥಳೀಯರು ಮಧ್ಯಪ್ರವೇಶಿಸಿ ಮಕ್ಕಳನ್ನು ಸುರಕ್ಷಿತವಾಗಿ ಕರೆದೊಯ್ಯಬೇಕಾಯಿತು. ಮತ್ತೊಂದು ಆತಂಕಕಾರಿ ಪ್ರಕರಣದಲ್ಲಿ, ಯಾವುದೇ ಆಂಬ್ಯುಲೆನ್ಸ್ ಅಥವಾ ದೊಡ್ಡ ವಾಹನಗಳು ಆ ಪ್ರದೇಶವನ್ನು ತಲುಪಲು ಸಾಧ್ಯವಾಗದ ಕಾರಣ, ಅಸ್ವಸ್ಥ ರೋಗಿಯನ್ನು ದ್ವಿಚಕ್ರ ವಾಹನದಲ್ಲಿ ಆಸ್ಪತ್ರೆಗೆ ಕರೆದೊಯ್ಯಬೇಕಾಯಿತು.

ರಸ್ತೆಯ ಹದಗೆಟ್ಟ ಸ್ಥಿತಿಯು ಮಾರ್ಗದಲ್ಲಿನ ಎಲ್ಲಾ ಬಸ್ ಸೇವೆಗಳನ್ನು ಸ್ಥಗಿತಗೊಳಿಸಲು ಕಾರಣವಾಗಿದೆ, ವಿದ್ಯಾರ್ಥಿಗಳು, ಕಾರ್ಮಿಕರು ಮತ್ತು ರೈತರು ಸೇರಿದಂತೆ ನೂರಾರು ದೈನಂದಿನ ಪ್ರಯಾಣಿಕರಿಗೆ ಸಂಪರ್ಕ ಕಡಿತಗೊಂಡಿದೆ.

ಸರ್ಕಾರ ಅಥವಾ ಲೋಕೋಪಯೋಗಿ ಇಲಾಖೆಯಿಂದ ಯಾವುದೇ ಸಕಾಲಿಕ ಹಸ್ತಕ್ಷೇಪವಿಲ್ಲದೆ, ಶಹಾಬಾದ್ ಲಾರಿ ಅಸೋಸಿಯೇಷನ್ ನೇತೃತ್ವದಲ್ಲಿ ಸ್ಥಳೀಯ ನಿವಾಸಿಗಳು ವಿಷಯಗಳನ್ನು ತಮ್ಮ ಕೈಗೆತ್ತಿ-ಕೊಂಡಿದ್ದಾರೆ. ಯೂನುಸ್ ಖಾನ್ (ಕೆಟಿಎಸ್) ನೇತೃತ್ವದಲ್ಲಿ, ಸಂಘವು ಲಾರಿ ಮಾಲೀಕರು ಮತ್ತು ಸಂಬಂಧಪಟ್ಟ ನಾಗರಿಕರನ್ನು ತುರ್ತು ದುರಸ್ತಿಗೆ ಹಣಕಾಸು ಒದಗಿಸಲು ಸಜ್ಜುಗೊಳಿಸಿದೆ. ಇಲ್ಲಿಯವರೆಗೆ, 50 ಕ್ಕೂ ಹೆಚ್ಚು ಟ್ರಕ್ ಲೋಡ್‌ಗಳಷ್ಟು ದುರಸ್ತಿ ಸಾಮಗ್ರಿಗಳನ್ನು ಗುಂಡಿಗಳನ್ನು ತುಂಬಲು ಮತ್ತು ಹೆಚ್ಚು ಹಾನಿಗೊಳಗಾದ ವಿಭಾಗಗಳನ್ನು ನೆಲಸಮಗೊಳಿಸಲು ಬಳಸಲಾಗಿದೆ ಮತ್ತು ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಸಾಮಗ್ರಿಗಳು ಬೇಕಾಗುತ್ತವೆ.

ನಾವು ದುರಸ್ತಿಯನ್ನು ವಿಳಂಬ ಮಾಡುವ ಪ್ರತಿದಿನ, ಹೆಚ್ಚಿನ ಜೀವಗಳು ಅಪಾಯದಲ್ಲಿವೆ. ನಾವು ಇನ್ನು ಮುಂದೆ ಅಧಿಕಾರಿಗಳಿಗಾಗಿ ಕಾಯಲು ಸಾಧ್ಯವಿಲ್ಲ" ಎಂದು ಯೂನುಸ್ ಖಾನ್ ಹೇಳಿದರು. "ನಮ್ಮ ಸಂಘದ ಸದಸ್ಯರು ನಮ್ಮ ಜನರನ್ನು ರಕ್ಷಿಸಲು ಮತ್ತು ಸಾರಿಗೆ ಸಂಚಾರವನ್ನು ಮುಂದುವರಿಸಲು ಸ್ವಯಂಪ್ರೇರಣೆಯಿಂದ ಹಣ ಮತ್ತು ಸಂಪನ್ಮೂಲಗಳನ್ನು ಸಂಗ್ರಹಿಸಿದ್ದಾರೆ.

ಸಮುದಾಯ ಪ್ರಯತ್ನವು ಕೆಲವು ಪ್ರದೇಶಗಳಿಗೆ ತಾತ್ಕಾಲಿಕ ಪರಿಹಾರವನ್ನು ತಂದಿದೆ, ಆದರೆ ದೀರ್ಘಾವಧಿಯ ಪರಿಹಾರ ಇನ್ನೂ ಅಗತ್ಯವಿದೆ. ಸ್ಥಳೀಯ ನಿವಾಸಿಗಳು ಈಗ ರಾಜ್ಯ ಸರ್ಕಾರ ಮತ್ತು ಸಂಬಂಧಿತ ಇಲಾಖೆಗಳು ರಸ್ತೆಯ ಶಾಶ್ವತ ಪುನರ್ನಿರ್ಮಾಣಕ್ಕಾಗಿ, ಸರಿಯಾದ ಒಳಚರಂಡಿ ವ್ಯವಸ್ಥೆಗಳು ಮತ್ತು ಮರುನಿರ್ಮಾಣಕ್ಕಾಗಿ ಹಣವನ್ನು ತಕ್ಷಣವೇ ಮಂಜೂರು ಮಾಡಬೇಕೆಂದು ಒತ್ತಾಯಿಸುತ್ತಿದ್ದಾರೆ.

ಅಲ್ಲಿಯವರೆಗೆ, ಶಹಾಬಾದ್-ಘರ್ತಾಬಾದ್ ರಸ್ತೆ ಆಡಳಿತಾತ್ಮಕ ನಿರ್ಲಕ್ಷ್ಯದ ಸಂಕೇತವಾಗಿ ಉಳಿದಿದೆ.

## ಚಿಟಗುಪ್ಪಾ ತಾಲ್ಲೂಕಿನ ನೂತನ ಪದಾಧಿಕಾರಿಗಳ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.24:ಚಿಟಗುಪ್ಪಾ ತಾಲ್ಲೂಕು ಕೇಂದ್ರದ ಪ್ರವಾಸಿ ಮಂದಿರದಲ್ಲಿ ಫರ್ನಾಂಡೀಸ್ ಹಿಪ್ಪಳಗಾವ್‌ಮಾದಿಗದಂಡೋರ ಹೋರಾಟ ಸಮಿತಿ ರಾಜ್ಯ ಕಾರ್ಯಾಧ್ಯಕ್ಷರ ಆದೇಶದ ಮೇರೆಗೆ ಬೀದರ್ ಜಿಲ್ಲೆಯ ಮಾದಿಗದಂಡೋರಹೋರಾಟ ಸಮಿತಿಯ ಜಿಲ್ಲೆ ಅಧ್ಯಕ್ಷರಾದ ಶ್ರೀವಿಜಯಕುಮಾರ್‌ಹಿಪ್ಪಳಗವ್ ನೇತೃತ್ವದಲ್ಲಿಚಿಟಗುಪ್ಪಾತಾಲ್ಲೂಕಿನ ನೂತನ ಪದಾಧಿಕಾರಿಗಳನ್ನು ಪದಗ್ರಹಣ ಮಾಡಲಾಯಿತ್ತು.

ಸಂಘಟನೆಯ ಜವಾಬ್ದಾರಿಕ ತತ್ವಸಿದ್ದಾಂತಗಳನು ಮನವರಿಕೆ ಮಾಡಿ ತಾಲ್ಲೂಕು ಅಧ್ಯಕ್ಷ ಲಾಲಪ್ಪ ರಾಂಪುರೆ ನಿರ್ಣಾ ಹಾಗೂ ಉಪಾಧ್ಯಕ್ಷರಾದ ರಾಜ ಸಾಂಗ್ಲೆಮುಸ್ತರಿ,ಕಾರ್ಯದರ್ಶಿ ಬಸವರಾಜ ಸೊಂಡೆ ನಿರ್ಣಾ, ಪ್ರಧಾನ ಕಾರ್ಯದರ್ಶಿ ಸಿಮೋನ್ ಉಡಬಾಳ, ಕಾರ್ಯಾಧ್ಯಕ್ಷ ಪುಟ್ಟರಾಜ್ ಇಟಗಿ, ಸಹ ಕಾರ್ಯದರ್ಶಿ ವಿಠ್ಠಲ್ ರಾಂಪುರ, ಖಜಾಂಚಿ ಅರುಣ್ ಇಟಗಿ, ಸಂಘಟನೇ ಸಂಚಾಲಕರು ಪ್ರಲ್ಹಾದ ಮಾಡಗೋಳ,ಸಹಉಪಾಧ್ಯಕ್ಷರು ರಾಜಕುಮಾರ್ ಚಾಂಗ್ಲೆರಾ, ಹಾಗೂ ಪದಾಧಿಕಾರಿಗಳು ರಾಜುಕುಮಾರ್ ವಳಕಿಂಡಿ,

ಶಂಕರ್‌ವಾಲಿಮುಸ್ತರಿ,ಸಂಜು ವಳಕಿಂಡಿ,ಪ್ರಶಾಂತ್‌ಬೆಳಕೇರಾ, ಭೀಮಷ ಉಡಬಾಳ, ಸಂಜು ರಾಂಪುರ, ಸತೀಶ್ ಇಟಗಿ, ಚಂದ್ರಕಾಂತ್ ಮಾಡಗೋಳ, ಧನರಾಜ್‌ಮುಸ್ತರಿ,ಬಸವರಾಜ್ ಬೆಳಕೇರಾ, ರಾಜಕುಮಾರ್ ಮುದ್ನಾಳ್, ಇವರನ್ನು ನೇಮಕ ಮಾಡಿ ಆದೇಶ ಪತ್ರಗಳನ್ನುನೀಡುತ್ತಸಂಘಟನೆ ಬಲಪಡಿಸಲು ಕರೆಕೊಟ್ಟರು.

ಈ ಸಂದರ್ಭದಲ್ಲಿ ಮಾದಿಗ ದಂಡೋರಹೋರಾಟಸಮಿತಿಯ ಮುಖಂಡರುಗಳಾದಕಮಲಕರ ಹೆಗಡೆ ಜಿಲ್ಲಾ ಉಪಾಧ್ಯಕ್ಷರು, ವೀರಶೆಟ್ಟಿ ಬಂಬುಳ್ಳಗಿ ಅಧ್ಯಕ್ಷ ದಕ್ಷಿಣ ಕ್ಷೇತ್ರ, ಗೋರಕನಾಥ ಅಧ್ಯಕ್ಷ ಹುಮನಾಬಾದ , ಮುಖಂಡರುಗಾಳದ ರವಿ ನಿಜಾಮಪುರೆ ಜಿಲ್ಲಾಧ್ಯಕ್ಷ ಮಾದಿಗಮಹಾಸಭಾ ಬೀದರ್, ಪರಮೇಶ್ವರ ಕಾಳಮದರಗಿ ಮಾಜಿ ತಾಲ್ಲೂಕು ಅಧ್ಯಕ್ಷ, ಉಮೇಶ್‌ಗುತ್ತೇದಾರ ಅಧ್ಯಕ್ಷರು ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿ ಬೀದರ್‌ದಕ್ಷಿಣ ಕ್ಷೇತ್ರ, ಆಸ್ಕರ್ ಫರ್ನಾಂಡೀಸ್ ಜಿಲ್ಲಾ ಕಾರ್ಯಧ್ಯಕ್ಷ ಕೆಪಿಸಿಸಿ ಜಿಲ್ಲಾ ಸಾಮಾಜಿಕ ಜಾಲತಾಣ ಬೀದರ್‌ಹಾಗೂನಾಮನಿರ್ದೇಶಕ ಸದಸ್ಯರು, ದಯಾನಂದ ರೇಕುಳ್ಗಿ ಉಪಾಧ್ಯಕ್ಷ MRPS ದಕ್ಷಿಣ ಕ್ಷೇತ್ರ, ಯಶವಂತ ಹಲಗಿ ಒಖಿಕಖ ಪ್ರಧಾನ ಕಾರ್ಯದರ್ಶಿ ದಕ್ಷಿಣ ಕ್ಷೇತ್ರ, ವಿನೋದ ಮಂಗಲಗಿ ಅಧ್ಯಕ್ಷರು ಯುವ ಒಖಿಕಖ ದಕ್ಷಿಣ ಕ್ಷೇತ್ರ, ಪ್ರಕಾಶ್ ಬಗದಲಕರ್ ಕಾರ್ಯಧ್ಯಕ್ಷ ದಕ್ಷಿಣ ಕ್ಷೇತ್ರ, ಶ್ರೀಮಂತ ಉಪಾಧ್ಯಕ್ಷರು ದಕ್ಷಿಣ ಕ್ಷೇತ್ರ, ಅನೀಲ್ ಬಂಬುಳ್ಳಗಿ ಇತ್ಯಾದಿ ಸಮುದಾಯದ ನಾಯಕರುಗಳು ಹಾಗೂ ಹಿರಿಯರುಉಪಸ್ಥಿತಿಯಲ್ಲಿದ್ದರು.

## ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ ವಯೋಶ್ರೇಷ್ಠರಿಗೆ ರಾಜ್ಯ ಪ್ರಶಸ್ತಿ: ಪ್ರಸ್ತಾವನೆಗಳ ಆಹ್ವಾನ

ಬೀದರ. ಜು.24: ವಿಶ್ವ ಹಿರಿಯನಾಗರಿಕರದಿನಾಚರಣೆ (ದಿ:01–10–2025) ಯನ್ನು ರಾಜ್ಯಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿಹಿರಿಯನಾಗರಿಕರ ಕ್ಷೇತ್ರದಲ್ಲಿಉತ್ತಮಸೇವೆಸಲ್ಲಿಸಿದ ವಯೋಶ್ರೇಷ್ಠರಿಗೆರಾಜ್ಯಪ್ರಶಸ್ತಿ ನೀಡಲು ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ ಎಂದು ಬೀದರ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳುಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಹಿರಿಯ ನಾಗರಿಕರ ವಿವಿಧ ಕ್ಷೇತ್ರಗಳಾದ ಶಿಕ್ಷಣ ಕ್ಷೇತ್ರ,ಸಾಹಿತ್ಯಕ್ಷೇತ್ರ,ಕಾನೂನು, ಪ್ರತಿಭೆ/ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆಯಲ್ಲಿಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 06 ವೈಯಕ್ತಿಕ ಹಾಗೂ ಹಿರಿಯ ನಾಗರಿಕರಕ್ಷೇತ್ರದಲ್ಲಿಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 01 ಸಂಸ್ಥೆ ಪ್ರಶಸ್ತಿ ಸೇರಿ ಒಟ್ಟು 07 ಪ್ರಶಸ್ತಿಗಳನ್ನುನೀಡಲಾಗುತ್ತದೆ.ಕಾರಣ ಜಿಲ್ಲೆಯ ಹಿರಿಯ ನಾಗರಿಕರು ನಿಗದಿತ ಅರ್ಜಿನಮೂನೆಯನ್ನು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯನಾಗರಿಕರಸಬಲೀಕರಣ ಇಲಾಖೆ,ಮೈಲೂರ ಬೀದರ ಈ ಕಛೇರಿಯಿಂದ ಪಡೆದು,ನಿಗದಿತ ನಮೂನೆಯಲ್ಲಿ ದ್ವಿಪ್ರತಿಗಳಲ್ಲಿ ದಿನಾಂಕ: 25–08–2025. ರೊಳಗೆಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಚೇರಿ, ಮೈಲೂರ ಬೀದರ ದೂರವಾಣಿ ಸಂಖ್ಯೆ: 08482234647,9513081723 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ನಿಸ್ವಾರ್ಥ ಸೇವೆಗೆ ಸಂದ ಗೌರವ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.24:ವಿಶ್ರಾಂತ ಮುಖ್ಯೋಪಾಧ್ಯಯರಾದ ತುಕಾರಾಮ ಮೋರೆಯವರು ಆರಂಭದಿಂದಲೂ ಸಾವ ಾಜಿಕ,ಧಾರ್ಮಿಕ,ಆಧ್ಯಾತಿ ್ಮಕ,ಶೈಕ್ಷಣಿಕ ಸೇರಿದಂತೆ ವಿವಿಧಕ್ಷೇತ್ರಗಳಲ್ಲಿನಿಸ್ವಾರ್ಥ ಸೇವೆ ಸಲ್ಲಿಸಿರುವುದರಿಂದ ಬೆಂಗಳೂರಿನ ಕರ್ನಾಟಕ ರಾಜ್ಯ ಆರ್ಯ ಪ್ರತಿನಿಧಿ ಸಭೆಗೆಕಾರ್ಯದರ್ಶಿಯಾಗಿ ನೇಮಕಗೊಂಡಿದ್ದು ಅತೀವ ಸಂತೋಷವಾಗಿದೆ ಎಂದು ಕೆಕೆಎಮ್‌ಪಿ ಜಿಲ್ಲಾಧ್ಯಕ್ಷ ಡಿಗಂಬರಾವ ಮಾನಕರಿ ಹೇಳಿದರು.

ಪಟ್ಟಣದಹೊರವಲಯದ ಹೋಟಲ್‌ಸಭಾಂಗಣದಲ್ಲಿ ಅಭಿಮಾನಿ ಬಳಗದ ವತಿಯಿಂದ ಆಯೋಜಿಸಿದ ತುಕಾರಾಮ ಮೋರೆಯವರ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿಮಾತನಾಡಿದರು.

ದಲಿತ ಒಕ್ಕೂಟದ ಜಿಲ್ಲಾಧ್ಯಕ್ಷ ಕಾಂಗ್ರೆಸ್ ಮುಖಂಡ ವಿಲಾಸ ಮೋರೆ ಮಾತನಾಡಿ,ಯಾವ ವ್ಯಕ್ತಿ ಸಮಾಜದ ಏಳಿಗೆಗಾಗಿ ಶ್ರಮಿಸುತ್ತಾರೆ ಅವರಿಗೆ ಸ್ಥಾನಮಾನಗಳುಮನೆಬಾಗಿಲಿಗೆ ಬರುತ್ತವೆ.ಭವಿಷ್ಯದದಿನಗಳಲ್ಲಿ ಸಮಾಜ ಸಂಘಟನೆಗಾಗಿ ಕಾರ್ಯನಿರ್ವಹಿಸಲಿಎಂದು ಶುಭಹಾರೈಸಿದರು.ಮುಖಂಡ ಜನಾರ್ಧನರಾವಬಿರಾದಾರ ಮಾತನಾಡಿ,ನಡೆ–ನುಡಿ ಒಂದಾಗಿಸಿಕೊಂಡು ,ಸಹಜತೆ,ಸರಳತೆಯಿಂದ ಸಮಾಜೋಪಯೋಗಿ ಚಟುವಟಿಕೆಗಳಲ್ಲಿ ನಿರತರಾದವರಿಗೆ ಎಲ್ಲೆಡೆ ಮನ್ನಣೆ ದೊರೆಯುತ್ತದೆ ಎಂದರು.

ಸನ್ಮಾನ: ಇದೇ ಸಂದರ್ಭದಲ್ಲಿಅಭಿಮಾನಿ ಬಳಗದ ವತಿಯಿಂದ ತುಕಾರಾಮಮೋರೆಯವರಿಗೆ ಸನ್ಮಾನಿಸಿ,ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಓಂಕಾರ ಮೋರೆ,ಪ್ರಮುಖರಾದ ಶ್ರಾವಣಕುಮಾರಗಾಯಕವಾಡ ರಾವಸಾಹೇಬಬಿರಾದಾರ,ಪ್ರತಾಪ ಪಾಟೀಲ,ಅಶೋಕ ರಾಜೋಳೆ,ರಮೇಶ ಪಾಟೀಲ ,ರುದ್ರಮಣಿ ಹರಿದೇವ,ರಮೇಶ ರಾಜೋಳೆ,ಲಕ್ಷ ??ಣ ಮಾನಕರಿ,ಸಂತೋಷ ಭೋಸ್ಲೆ,ಸಂತೋಷ ಬೀರಿಕರ್,ಶಿವಾ ಬಂಗಾರೆ,ಯೋಗೇಶ ಉಮಾಜಿ,ಶಿವಾಜಿರಾವ ಜಾಧವ,ರಾಮಭಾಂಗೆ,ಉತ್ತಮ ಪುರಿ,ವಸಂತಪಾಟೀಲ,ದಿನೇಶ ಭಾಂಗೆ,ದಯಾನಂದ ಬಿರಾದಾರ ,ಕಡಾಜಿ ಮುಳೆ,ಗೋಪಾಲ ಬಿರಾದಾರ,ಕೊಂಡಿಬಾ ಸಾಹುಕಾರ,ನಾರಾಯಣ ಬಿರಾದಾರ,ಸಂತೋಷ ಪವಾರ ಸೇರಿದಂತೆ ಅನೇಕರಿದ್ದರು.

# ನಾಳೆ ಸರ್ವ ಸದಸ್ಯರ ಸಭೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.24: ಇಲ್ಲಿಯ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ತಾಲೂಕು ಸರಕಾರಿ ನೌಕರರ ಸಂಘದ ವತಿಯಿಂದಶನಿವಾರಮಧ್ಯಾಹ್ನ 1.30ಕ್ಕೆ2024–25ನೇಯ ಸಾಲಿನ ಸರ್ವ ಸದಸ್ಯರ ಸಾಮಾನ್ಯ ಸಭೆ ಜರುಗಲಿದೆ ತಾಲೂಕು ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆತಿಳಿಸಿದ್ದಾರೆ.

ಸರಕಾರಿನೌಕರರ ಸಂಘದ ಎಲ್ಲ ಪಾಧಿಕಾರಿಗಳು, ನಿರ್ದೇಶಕರು,ನಾಮನಿರ್ದೇಶಿತ ಸದಸ್ಯರು, ಸಂಘದ ಸರ್ವ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಅರಣ್ಯ ಪ್ರದೇಶ ಹೆಚ್ಚಳ: ಸಿಐಒ ಗುರಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 24 : ಚಿಲ್ಡ್ರನ್ ಇಸ್ಲಾಮಿಕ್ ಆರ್ಗನೈಝೇಷನ್ ದೇಶದಲ್ಲಿ ಶೇ 24 ರಷ್ಟು ಇರುವ ಅರಣ್ಯ ಪ್ರದೇಶವನ್ನು ಶೇ 33 ಕ್ಕೆ ಹೆಚ್ಚಿಸುವ ಗುರಿ ಇಟ್ಟುಕೊಂಡಿದೆ ಎಂದು ಚಿಲ್ಡ್ರನ್ ಇಸ್ಲಾಮಿಕ್ ಆರ್ಗನೈಝೇಷನ್ ಸಂಚಾಲಕಿ ಅನ್ವರಿ ಬೇಗಂ ಹೇಳಿದರು.

ಜಮಾ ಅತೆ ಇಸ್ಲಾಮಿ ಹಿಂದ್ ಬೀದರ್ ಘಟಕ ಹಾಗೂ ಚಿಲ್ಡ್ರನ್ ಇಸ್ಲಾಮಿಕ್ ಆರ್ಗನೈಝೇಷನ್ ವತಿಯಿಂದ ನಗರದ ಡೀಸೆಂಟ್ ಫಂಕ್ಷನ್ ಹಾಲ್‌ನಲ್ಲಿ ಈಚೆಗೆ ಆಯೋಜಿಸಿದ್ದ ಸಸಿ ನೆಡುವ ಅಭಿಯಾನದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಸಂಘಟನೆಯಿಂದ ಜೂನ್ 25 ರಿಂದ ಆರಂಭಿಸಲಾದ ದೇಶದಾದ್ಯಂತ 10 ಲಕ್ಷ ಸಸಿ ನೆಡುವ ಅಭಿಯಾನ ಜುಲೈ 25ಕ್ಕೆ ಮುಕ್ತಾಯಗೊಳ್ಳಲಿದೆ ಎಂದು ತಿಳಿಸಿದರು.

'ಮಣ್ಣಿನಲ್ಲಿ ಕೈಗಳು– ತಾಯ್ನಾಡಿನೊಂದಿಗೆಹೃದಯ' ಅಭಿಯಾನದಘೋಷವಾಕ್ಯವಾಗಿದೆ. ಹೊಸ ಪೀಳಿಗೆಗೆ ತಾಯ್ನಾಡು ಹಾಗೂ ಮಣ್ಣಿನ ಬಗ್ಗೆ ಪ್ರೀತಿ ಬೆಳೆಸಿಕೊಳ್ಳಲು ಪ್ರೇರಣೆ ನೀಡುವುದು ಈ ಘೋಷವಾಕ್ಯದ ಉದ್ದೇಶವಾಗಿದೆ ಎಂದು ಸಂಚಾಲಕ ಡಾ. ಇರ್ಷಾದ್ ನವೀದ್ ಹೇಳಿದರು.

ಮಕ್ಕಳಾದ ಶೇಕ್ ರಾಯನ್ ಅಹಮ್ಮದ್,ಸೈಯದ್ ಆರೀಬ್ ರೆಜಾ, ಸೈಯದ್ ಮುಂಜಾ ಅನಮ್,ಮೆಹ್ರೂಜ್ ಅಫಿಯಾ ಅರುಷ್, ಅರೀಬಾ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಜಮಾ ಅತೆ ಇಸ್ಲಾಮಿ ಹಿಂದ್ ಬೀದರ್ ಘಟಕದ ಅಧ್ಯಕ್ಷಮಹಮ್ಮದ್ ಮೊಅಜಂ, ಉಪಾಧ್ಯಕ್ಷ ಮಹಮ್ಮದ್ ಆರಿಫುದ್ದೀನ್, ಮಹಿಳಾ ವಿಭಾಗದ ಸಂಚಾಲಕಿ ಆಸ್ಮಾ ಸುಲ್ತಾನಾ, ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್, ವಿಜ್ಡಂ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷಮಹ್ಮದ್ ಆಸಿಫುದ್ದೀನ್, ಮೌಲಾನಾ ಮೋನಿಸ್ ಕಿರ್ಮಾನಿ, ಮುಹಮ್ಮದ್ ಸಿರಾಜ್ ನೆಲವಾಡ,ಜಮಾ ಅತೆ ಇಸ್ಲಾಮಿ ಹಿಂದ್ ಸಹಾಯಕ ಮಾಧ್ಯಮ ಉಸ್ತುವಾರಿ ಸೈಯದ್ ಅತಿಕುಲ್ಲಾ ಇದ್ದರು.

ವಿದ್ಯಾರ್ಥಿನಿ ಎ. ರೆಹಾನ್ ಕುರಾನ್ ಪಠಣ ಮಾಡಿದರು. ಅನ್ವರಿ ಬೇಗಂ ವಂದಿಸಿದರು. ಅರಣ್ಯ ಇಲಾಖೆ ವತಿಯಿಂದ 200 ಮಾವು, ಪೇರಲ, ನೇರಳೆ ಹಾಗೂ ಕರಿಬೇವು ಸಸಿಗಳನ್ನು ಉಚಿತವಾಗಿ ವಿತರಿಸಲಾಯಿತು.

ಇದಕ್ಕೂ ಮುನ್ನ ಮಕ್ಕಳಿಂದ ನೂರ್‌ಖಾನ್ ತಾಲೀಂನಿಂದ ಚಾಬಾರಾ, ಮಹಮೂದ್ ಗವಾನ್ ಮದರಸಾ, ಕೋ–ಟೆ ಮಾರ್ಗವಾಗಿ ಫಂಕ್ಷನ್ ಹಾಲ್‌ವರೆಗೆ ಪರಿಸರ ಜಾಗೃತಿ ರ್ಯಾಲಿ ನಡೆಯಿತು.

# ವಚನ ಸಾಹಿತ್ಯಕ್ಕೆ ಹಳಕಟ್ಟಿ ಕೊಡುಗೆ ಅನನ್ಯ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 24 : ಕನ್ನಡ ನಾಡು, ನುಡಿ ಹಾಗೂ ವಚನ ಸಾಹಿತ್ಯಕ್ಕೆ ಡಾ. ಫ.ಗು. ಹಳಕಟ್ಟಿ ಅವರ ಕೊಡುಗೆ ಅನನ್ಯವಾಗಿದೆ ಎಂದು ಸಾಹಿತಿ ರಮೇಶ ಮಠಪತಿ ಹೇಳಿದರು

ಲಿಂಗಾಯತ ಮಹಾ ಮಠದ ವತಿಯಿಂದ ಇಲ್ಲಿಯ ಬಸವಗಿರಿಯಲ್ಲಿ ಬುಧವಾರ ಸಂಜೆ ಆಯೋಜಿಸಿದ್ದ 265ನೇ ಮಾಸಿಕ ಶರಣ ಸಂಗಮ ಹಾಗೂ ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿ ಸ್ಮರಣೆ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಹಳಕಟ್ಟಿ ಸರಳ ಜೀವನ–ಉದಾತ್ತ ಚಿಂತನೆ–ಅದ್ಭುತ ಕಾರ್ಯಗಳ ತ್ರಿವೇಣಿ ಸಂಗಮವಾಗಿದ್ದರು. ಬಸವಣ್ಣನವರ ಪ್ರಾಣವಾಗಿದ್ದ ವಚನಗಳ ಸಂಶೋಧನೆ, ಸಂಸ್ಕರಣೆ ಹಾಗೂ ಮುದ್ರಣವೇ ಅವರ ಉಸಿರಾಗಿತ್ತು ಎಂದು ತಿಳಿಸಿದರು.

ಕೈತುಂಬಾ ಆದಾಯ ತಂದುಕೊಡುತ್ತಿದ್ದ ವಕೀಲ ವೃತ್ತಿ ತೊರೆದು, ತಮ್ಮನ್ನು ವಚನ ಸಂರಕ್ಷಣೆ ವೃತ್ತಿಗೆ ಸಮರ್ಪಿಸಿಕೊಂಡರು. ಬೇರೆ ಮುದ್ರಣಾಲಯದವರು ಅನುಭಾವದ ರಸಘಟ್ಟಿಯಾದ ವಚನಗಳ ಮುದ್ರಣಕ್ಕೆ ಒಪ್ಪದಿದ್ದಾಗ, ಮನೆ ಮಾರಿ 'ಹಿತ ಚಿಂತಕ' ಮುದ್ರಣಾಲಯ ಸ್ಥಾಪಿಸಿದ ತ್ಯಾಗಿಯಾಗಿದ್ದರು ಎಂದು ಹೇಳಿದರು.

ವಚನಗಳ ಪ್ರಸಾರಕ್ಕಾಗಿ ಶಿವಾನುಭವ ಮಾಸ ಪತ್ರಿಕೆ ಹಾಗೂ ಕರ್ನಾಟಕ ಏಕೀಕರಣದ ಮಹತ್ವ ಸಾರಲು ನವ ಕರ್ನಾಟಕ ಪತ್ರಿಕೆ ಹೊರ ತಂದರು. ಕನ್ನಡ ಮತ್ತು ವಚನ ಅವರ ಎರಡು ಕಣ್ಣುಗಳಾಗಿದ್ದವು. ಒಂದು ವಿಶ್ವವಿದ್ಯಾಲಯ ಮಾಡದ ಕಾರ್ಯವನ್ನು ಅವರು ಮಾಡಿದ್ದರು ಎಂದು ಬಣ್ಣಿಸಿದರು.

ಶಿವಾನುಭವ ಪತ್ರಿಕೆ ಮೂಲಕ 15 ಸಾವಿರ ಪುಟಗಳ ಸಾಹಿತ್ಯ ಹೊರ ತಂದರು. 200 ಶರಣ–ಶರಣೆಯರ ಜೀವನ ಚರಿತ್ರೆ ಪ್ರಕಟಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ತಾವು ಬಡತನ ಅಪ್ಪಿಕೊಂಡು ಕನ್ನಡ ಹಾಗೂ ವಚನ ಸಾಹಿತ್ಯವನ್ನು ಶ್ರೀಮಂತಗೊಳಿಸಿದ ಹಳಕಟ್ಟಿ ಅವರ 'ನಮ್ಮ ಉಳಿದ ಸಂಪತ್ತನ್ನು ರಕ್ಷಿಸುವಂತೆ ವಚನಗಳನ್ನು ರಕ್ಷಿಸಿ, ನಮಗೆ ಹೊಳಗುವುದಕ್ಕಿಂತ ಶಿವಶರಣರನ್ನು ಹೊಗಳಿರಿ' ಎಂಬ ಸಂದೇಶವನ್ನು ಅನುಸರಿಸುವ ಮೂಲಕ ಅವರಿಗೆ ನಿಜವಾದ ಗೌರವ ಸಲ್ಲಿಸಬೇಕಿದೆ ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಪ್ರಭುದೇವ ಸ್ವಾಮೀಜಿ ಮಾತನಾಡಿ, ಮನಸ್ಸು ಮಾಡಿದರೆ ಸುಖದ ಸುಪ್ಪತ್ತಿಗೆಯಲ್ಲಿ ತೇಲಾಡಬಹುದಾಗಿದ್ದ ಫಕೀರಪ್ಪ ಹಳಕಟ್ಟಿ ಅವರು ಕಲ್ಯಾಣ ಕ್ರಾಂತಿಯ ನಂತರ ಭೂಗತವಾಗಿದ್ದ ವಚನ ಸಾಹಿತ್ಯ ಸಂಶೋಧಿಸಿ ಕೊಟ್ಟು ಮಹದುಪಕಾರ ಮಾಡಿದ್ದನ್ನು ಕನ್ನಡಿಗರು ಎಂದೆಂದೂ ಮರೆಯಲಾರರು ಎಂದು ನುಡಿದರು.

ಶ್ರಾವಣ ಮಾಸ ಶುರುವಾಗಲಿದ್ದು, ಹಳಕಟ್ಟಿ ಮತ್ತು ಅಕ್ಕ ಅನ್ನಪೂರ್ಣತಾಯಿ ಅವರ ಆಶಯದಂತೆ ವಚನ ಪಠಣ ಅಭಿಯಾನದಲ್ಲಿ ಎಲ್ಲರೂ ಭಾಗವಹಿಸಬೇಕು. ಶ್ರಾವಣ ಮಾಸದಲ್ಲಿ ಪ್ರತಿ ದಿನ 101 ವಚನ ಪಠಣ ಮಾಡಬೇಕು ಎಂದು ತಿಳಿಸಿದರು.

ಬರುವ ಬಸವ ಪಂಚಮಿಯಂದು ಹಸಿದವರಿಗೆ ಹಾಲು ಉಣಿಸೋಣ, ಮೂಢ ನಂಬಿಕೆ, ಮೂಢ ಆಚಾರ–ಕ್ಕೆ ತಿಲಾಂಜಲಿ ಇಡೋಣ. ಅಂದು ಸರ್ಕಾರಿ ಆಸ್ಪತ್ರೆಯಲ್ಲಿ ಗರ್ಭಿಣಿಯರಿಗೆ ಹಾಲು–ಹಣ್ಣು ನೀಡುವ ಮೂಲಕ ಬಸವ ಪಂಚಮಿಯನ್ನು ಅರ್ಥಪೂರ್ಣವಾಗಿ ಆಚರಿಸಿ, ವೈಚಾರಿಕತೆಯನ್ನು ಮೆರೆಯೋಣ ಎಂದು ಹೇಳಿದರು.

ಜ್ಯೋತಿ ಪ್ರಜ್ವಲಿಸಿ ಕಾರ್ಯಕ್ರಮ ಉದ್ಘಾಟಿಸಿದ ಡಾ. ಜ್ಞಾನಗಂಗಾ ಪಾಟೀಲ ಅವರು, ಫ.ಗು. ಹಳಕಟ್ಟಿ ಅವರ ಜೀವನ ಚರಿತ್ರೆಯನ್ನು ವಿವರಿಸಿದರು.

ಜಿಲ್ಲಾ ಪಂಚಾಯಿತಿ ವ್ಯವಸ್ಥಾಪಕ ಹುದ್ದೆಯಿಂದ ನಿವೃತ್ತರಾದ ಉಮೇಶ ಪಾಟೀಲ ಹಾಗೂ ಬೀರೇಶ್ವರ ಸೌಹಾರ್ದ ಸಹಕಾರಿಯಿಂದ ಸ್ವಯಂ ನಿವೃತ್ತಿ ಪಡೆದ ಲಾವಣ್ಯ ಚನ್ನಬಸಪ್ಪ ಹಂಗರಗಿ ಅವರನ್ನು ಶಾಲು ಹೊದಿಸಿ ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು.

ಕದಳಿಶ್ರೀಯ ವಚನ ನೃತ್ಯ ಗಮನ ಸೆಳೆಯಿತು. ನಿವೃತ್ತ ಶಿಕ್ಷಕ ರೇವಣಪ್ಪ ಮೂಲಗೆ ಹಾಗೂ ಶ್ಯಾಮಲಾ ಎಲಿ ವಚನ ಗಾಯನ ನಡೆಸಿಕೊಟ್ಟರು. ಪರುಷ ಕಟ್ಟೆ ಚನ್ನಬಸವಣ್ಣ ಹಾಗೂ ಚನ್ನಬಸಪ್ಪ ಹಂಗರಗಿ ಪ್ರಾರ್ಥನೆಗೈದರು. ಡಾ. ಪ್ರಿಯಾ ಎಲಿ ಸ್ವಾಗತಿಸಿದರು. ಲಿಂಗಾನಂದ ಹಂಗರಗಿ ನಿರೂಪಿಸಿದರು.

## ಅರ್ಹರಿಗೆ ಜಮೀನು ಮಂಜೂರು ಮಾಡಿ: ಶಾಸಕ ಡಾ. ಶೈಲೇಂದ್ರ



ಬೀದರ. ಜು. 24 : ಚಿಟಗುಪ್ಪ ಬಗರ್ ಹುಕುಂ ಅರ್ಜಿ ಅರ್ಹವಾಗಿದ್ದಲ್ಲಿ ಅಧಿಕಾರಿಗಳೇ ಜವಾಬ್ದಾರಿ ವಹಿಸಿಕೊಂಡು ಸಭೆ ಮುಂದಿಟ್ಟು ಚರ್ಚಿಸಿ ಸಮಿತಿ ಮೂಲಕ ಜಮೀನು ಮಂಜೂರು ಮಾಡಬೇಕು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು.

ಪಟ್ಟಣದ ತಹಶೀಲ್ ಕಚೇರಿ ಸಭಾಂಗಣದಲ್ಲಿ ನಡೆದ ಬಗರ್ ಹುಕುಂ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಅರ್ಹ ಫಲಾನುಭವಿಗಳಿಗೆ ಕಾನೂನು ಬದ್ಧವಾಗಿ ಭೂ ಮಂಜೂರುಗೊಳಿಸಲು ಅಧಿಕಾರಿಗಳು ಶ್ರಮಿಸಬೇಕು. ಸಾಗುವಳಿ ಸಕ್ರಮೀಕರಣ ಅರ್ಜಿಗಳನ್ನು ಶೀಘ್ರ ವಿಲೇವಾರಿ ಮಾಡಿ, ಅರ್ಹ ಸಾಗುವಳಿದಾರರಿಗೆ ಅನುಕೂಲ ಕಲ್ಪಿಸಬೇಕು. ಬಡ ಮತ್ತು ಕೂಲಿ ಕಾರ್ಮಿಕರಿಗೆ ಈ ಇದರ ಮಾಹಿತಿ ಕೊರತೆ ಇರುತ್ತದೆ. ಇಂತವರಿಗೆ ಅಧಿಕಾರಿಗಳೇ ಮಾಹಿತಿ ನೀಡಬೇಕು ಎಂದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಮಂಜುನಾಥ್ ಪಾಂಚಾಳ, ಸಮಿತಿ ಸದಸ್ಯರಾದ ನಂದಕುಮಾರ ಪಾಟೀಲ, ಲಕ್ಷ್ಮಣ ನಿರ್ಣಾಕರ್, ಅನುರಾಧಾ ಪಾಂಚಾಳ ಇದ್ದರು.

ಜಿಟಿ ಜಿಟಿ ಮಳೆಯಲ್ಲಿ ಸಂಪನ್ನ ಗೊಂಡ ಪೊಲೆಪಲ್ಲಿ ಯಲ್ಲಮ್ಮ ಜಾತ್ರೆ.

# ವಿಶೇಷವಾಗಿ ಆಕರ್ಷಣೆಗೊಂಡ ಪೋತುರಾಜು ಕುಣಿತ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ/ಗುರುಮಠಕಲ್: ಪಟ್ಟಣದಹೃದಯಭಾಗದಲ್ಲಿರುವ ನಗರೇಶ್ವರ ದೇವಸ್ಥಾನ ಆವರಣದಲ್ಲಿರುವ ಪೊಲೆಪಲ್ಲಿ ಯಲ್ಲಮ್ಮ ದೇವಿಯ 5 ನೇಯ ವರ್ಷದ ಜಾತ್ರಾ ಮಹೋತ್ಸವ ಇಂದು ಸಂಭ್ರಮದಿಂದ ಜರುಗಿತು.

ಪ್ರತಿ ವರ್ಷದ ಜಾತ್ರೆಯ ಸಂಪ್ರದಾಯದಂತೆ ಶ್ರಾವಣ ಮಾಸದ ಪ್ರಾರಂಭದ ಭೀಮನ ಅಮಾವಾಸ್ಯೆಯಂದು ಪಟ್ಟಣದಲ್ಲಿ ದೇವಿಯ ಜಾತ್ರೆ ಶ್ರದ್ಧಾಭಕ್ತಿ, ಸಡಗರ, ಹರ್ಷೋದ್ಗಾರ, ಸಂಭ್ರಮದೊಂದಿಗೆ ಜರುಗಿತು.

ಆಶಿರೆಡ್ಡಿ ಕೊಸ್ಗಿ ದಂಪತಿಗಳಿಂದ ದೇವಿಗೆ ಪೂಜೆ, ವಿಘ್ನೇಶ್ವರ ಪೂಜೆ, ಗುರುಪೂಜೆ, ದೇವಿಯ ಪಾದುಕೆ ಪೂಜೆ, ಮಂಗಳಾರತಿ ಕಾರ್ಯಕ್ರಮಗಳು ಸಂಪ್ರದಾಯದಂತೆ ನಡೆದವು.

ಪೋತುರಾಜು ವೇಷದಾರಿಗಳು ಪ್ರಮುಖ ರಸ್ತೆಗಳ ಮೂಲಕ ಸಂಚರಿಸಿ ಎಲ್ಲರ ಗಮನ ಸೆಳೆದರು. ಇನ್ನೂ ಮಹಿಳೆಯರು, ಪುರುಷರು, ಮಕ್ಕಳು, ಯುವತಿಯರು ದೇವಿಗೆ ಕಾಯಿಕರ್ಪೂರ ಅರ್ಪಿಸಿ ಭಕ್ತಿ ಸಮರ್ಪಿಸಿದರು.

ಭಕ್ತರು ಸರದಿಯಲ್ಲಿ ನಿಂತು ದೇವಿಗೆ ಕಾಯಿಕರ್ಪೂರ, ನೈವೇದ್ಯ ಅರ್ಪಿಸಿ, ದರ್ಶನ ಪಡೆದರು. ಅನ್ನದ ದಾಸೋಹ, ಕುಡಿಯುವ ನೀರಿನ ವ್ಯವಸ್ಥೆ ಮಾಡಿದ್ದರು.

ಮಳೆಯಲ್ಲಿಯೇ ಕೈಕುಸ್ತಿ ಪಂದ್ಯಗಳು ಜರುಗಿದವು, ಯಾವುದೇ ಅಹಿತಕರ ಘಟನೆಗಳಾಗದಂತೆ ಪೊಲೆಪಲ್ಲಿ ಯಲ್ಲಮ್ಮ ತಾಯಿಯ ಜಾತ್ರೆ ಈ ವರ್ಷ ಸಂಪನ್ನಗೊಂಡಿತು.

**IN THE COURT OF THE SENIOR CIVIL JUDGE & JMFC AT BASAVAKALYAN**

**Crl.Misc. No.217/2025**

Petitioner: P1. Ramchandra P2. Kalavati, P3. Ganesh, all are R/o Nirgudi, TQ. Basavakalyan, dist. Bidar. P4. Vithabai, W/o Parameshwar R/o Aurad (G) TQ:Basavakalyan, P5. Dinesh S/o Shivaji R/o Nirgudi, TQ. Basavakalyan Dist. Bidar.

**V/s**

Respondent: The Tahasildar, Basavakalyan.

Claim:Issue of Death Certificate of the Grand Mother of

petitioner No.1

petitioner under sec. 13 (3) of birth and death Registration Act.1969

**PAPER PUBLICATION**

This is to inform to the public at large, the Grand Mother of the petitioner No.1 by name Vithabai W/o Ramachandra who was died on 10/04/1980, in his house at Village: Nirgdi, Tq:Basavakalyan, Dist:Bidar leaving behind the petitioner No.1 the said P1. Ramchndra and 4 others, all are R/o Nirgudi, Tq:Basavakalyan, Dist:Bidar has filed the above case before the Hon'bale Senior Civil Judge Court at Basavakalyan, for issuing direction to the respondent for issue of death certificate. If anybody got objection for the same, they are hereby requested to come and appear before the Hon'ble court on or before 29.09.2025 at 11-00 AM.

Date:16.07.2025

By Order of the Court
Chief Ministerial Officer
Senior Civil Judge & JMFC Court
Basavakalyan

# ಅನಧಿಕೃ ಮುರಂ ಗಣಿಗಾರಿಕೆ ದಿಢೀರನೆ ಸ್ಥಳ ಪರಿಶೀಲನೆ : ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 24, (ಕ.ವಾ) : ಯಾದಗಿರಿ ಜಿಲ್ಲೆಯ ಯಾದಗಿರಿ ತಾಲ್ಲೂಕಿನ ಸೈದಾಪೂರ ಹೊಬಳಿಯ ವ್ಯಾಪ್ತಿಯಲ್ಲಿ ಅನಧಿಕೃ ಮುರಂ ಗಣಿಗಾರಿಕೆ ಮಾಡಿ ಸಾಗಾಣಿಕೆ ಮಾಡಿರುವ ದೂರಿನ ಕುರಿತು ಕ್ರಮ ವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಸೂಚಿಸಿದರು.

2025ರ ಜುಲೈ 23ರ ಬುಧವಾರ ರಂದು ಯಾದಗಿರಿ ಜಿಲ್ಲೆಯ ಯಾದಗಿರಿ ತಾಲ್ಲೂಕಿನ ಸೈದಾಪೂರ ಹೊಬಳಿಯ ವ್ಯಾಪ್ತಿಯಲ್ಲಿ ಅನಧಿಕೃತ ಮುರಂ ಗಣಿಗಾರಿಕೆ ಮಾಡಿ ಸಾಗಾಣಿಕೆ ಮಾಡಿರುವ ದೂರಿನ ಕುರಿತು ಸ್ಥಳ ಪರಿಶೀಲಿಸಿ ಅವರು ಮಾತನಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಿರಿಯ ಭೂವಿಜ್ಞಾನಿ ಶ್ರೀಮತಿ ಪೂರ್ಣಿಮ.ಸಿ, ಯಾದಗಿರಿ ತಹಶೀಲ್ದಾರ ಸುರೇಶ ಅಂಕಲಗಿ ಹಾಗೂ ಭೂ ದಾಖಲೆಯ ಅಧಿಕಾರಿಗಳಿಗೆ ಜಂಟಿ ಸ್ಥಳ ಪರಿಶೀಲನೆಗೆ ಹಾಜರಾಗಲು ಸೂಚಿಸಿದರು. ಜಿಲ್ಲಾಧಿಕಾರಿಗಳ ಸಮಕ್ಷಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಹಾಗೂ ಯಾದಗಿರಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಭೂವಿಜ್ಞಾನಿ ಮತ್ತು ಯಾದಗಿರಿ ತಹಶೀಲ್ದಾರರು, ಯಾದಗಿರಿ ಸಹಾಯಕ ಭೂ ದಾಖಲೆಗಳ ನಿರ್ದೇಶಕರ ಅಧಿಕಾರಿಗಳೊಂದಿಗೆ ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನ ಸೈದಾಪೂರ ಹೊಬಳಿಯ ಕಡೇಚೂರು ಗ್ರಾಮದ ಸರ್ವೆ ನಂ. 421, 423/4, 425, 418 ಪೋರ್ಟ–2/3ರ ಜಮೀನುಗಳಲ್ಲಿ ಅನಧಿಕೃತವಾಗಿ ಮುರಂ ಗಣಿಗಾರಿಕೆ ಮಾಡಿ ಸಾಗಾಣಿಕೆ ಮಾಡಿರುವ ಪಟ್ಟಾ ಜಮೀನುಗಳ ಜಂಟಿ ಸ್ಥಳ ಪರಿಶೀಲನೆ ಕೈಗೊಳ್ಳಲಾಯಿತು.

ಜಿಲ್ಲಾಧಿಕಾರಿಗಳು ಈ ಸರ್ವೇ ನಂಬರಗಳಲ್ಲಿ ಅನಧಿಕೃತವಾಗಿ ಗಣಿಗಾರಿಕೆ, ಸಾಗಾಣಿಕೆಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿಯನ್ನು ಪಡೆದುಕೊಂಡರು ಕಡೆಚೂರು ಗ್ರಾಮದ ಸರ್ವೇ ನಂಬರ್ 423ರ ಸಂಬಂಧವಾಗಿ ಸೈದಾಪೂರ ಪೊಲೀಸ್ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಿದೆ. ಅನಧಿಕೃತವಾಗಿ ಮುರಂ ಗಣಿಗಾರಿಕೆ ಮಾಡಿ ಸಾಗಾಣಿಕೆ ಮಾಡಿರುವ ಬಗ್ಗೆ ತಾಲ್ಲೂಕು ಮಟ್ಟದ ಅಧಿಕಾರಿಗಳ ತಂಡವನ್ನು ರಚಿಸಿ ವರದಿಯನ್ನು ಸಲ್ಲಿಸಲು ಯಾದಗಿರಿ ಗಣಿ ಮತ್ತು ಭೂವಿಜ್ಞಾನ ಇಲಾಖೆ, ಹಿರಿಯ ಭೂವಿಜ್ಞಾನಿ ಅವರಿಗೆ ಜಿಲ್ಲಾಧಿಕಾರಿ ಅವರು ಸೂಚಿಸಿದರು.

# ಕುಡುಕರ ಅಡ್ಡೆಯಾದ ಶಾಲೆ ಆವರಣ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ।ನಗರದ ಮುಸ್ಲಿಂಪುರ ಏರಿಯಾದ

ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕುಡುಕರ ಹಾವಳಿ ಹೆಚ್ಚಿದೆ. ಸಂಜೆಯಾಗುತ್ತಿದ್ದಂತೆ ಶಾಲಾ ಆವರಣ ಕುಡುಕರ ಅಡ್ಡೆಯಾಗಿ ಮಾರ್ಪಡುತ್ತದೆ. ಎಲ್ಲಿಬೇಕಲ್ಲಿ ಮದ್ಯದ ಬಾಟಲಿ, ಪೌಚ್‌ಗಳು, ಸೇದಿ ಬೀಸಾಕಿದ ಬೀಡಿ, ಸಿಗರೇಟಿನ ತುಂಡುಗಳೇ ಕಾಣಿಸುತ್ತವೆ. ಶಾಲೆ ಆವರಣ ತ್ಯಾಜ್ಯದ ಆಗರವಾಗಿದೆ. ಇದರಿಂದ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಮುಜುಗರಪಟ್ಟುಕೊಳ್ಳುವಂತಾಗಿದೆ.

ಕುಡಿದ ಮತ್ತಿನಲ್ಲಿ ಮದ್ಯದ ಬಾಟಲಿಗಳನ್ನು ಒಡೆದು ಎಲ್ಲೆಂದರಲ್ಲಿ ಎಸೆಯುವುದು ಸಾಮಾನ್ಯವಾಗಿದೆ. ಹೀಗಾಗಿ, ಆಟವಾಡುವಾಗ ಮಕ್ಕಳಿಗೆ ಗಾಜಿನ ಚೂರುಗಳು ತಗುಲಿ ಗಾಯಗೊಂಡಿರುವ ಘಟನೆ ನಡೆಯಾಬಹುದು ಎಂದು ಇಲ್ಲಿನ ಶಿಕ್ಷಕರು ಹೇಳುತ್ತಾರೆ.

**IN THE COURT OF THE SENIOR CIVIL JUDGE & JMFC AT BASAVAKALYAN**

**Crl.Misc. No.218/2025**

Petitioner: P1. Ramchandra P2. Kalavati, P3. Ganesh, all are R/o Nirgudi, TQ. Basavakalyan, dist. Bidar. P4. Vithabai, W/o Parameshwar R/o Aurad (G) TQ:Basavakalyan, P5. Dinesh S/o Shivaji R/o Nirgudi, TQ. Basavakalyan Dist. Bidar.

**V/s**

Respondent: The Tahasildar, Basavakalyan.

Claim:Issue of Death Certificate of the father of petitioner No.1 petitioner under sec. 13 (3) of birth and death Registration Act.1969

**PAPER PUBLICATION**

This is to inform to the public at large, the Father of the petitioner by name "Shivaji S/o Ramachandra", who died on 01/11/1989, in his house at Village: Nirgdi, Tq:Basavakalyan, Dist:Bidar leaving behind the petitioner, as her son the said P1. Ramchndra and 4 others, all are R/o Nirgudi, Tq:Basavakalyan, Dist:Bidar has filed the above case before the Hon'bale Senior Civil Judge Court at Basavakalyan, for issuing direction to the respondent for issue of death certificate. If anybody got objection for the same, they are hereby requested to come and appear before the Hon'ble court on or before 29.09.2025 at 11-00 AM.

Date:16.07.2025

//By Order of the Court //
Chief Ministerial Officer
Senior Civil Judge & JMFC Court
Basavakalyan

**IN THE COURT OF THE SENIOR CIVIL JUDGE & JMFC AT BASAVAKALYAN**

**Crl.Misc. No.216/2025**

Petitioner: P1. Ramchandra P2. Kalavati, P3. Ganesh, all are R/o Nirgudi, TQ. Basavakalyan, dist. Bidar. P4. Vithabai, W/o Parameshwar R/o Aurad (G) TQ:Basavakalyan, P5. Dinesh S/o Shivaji R/o Nirgudi, TQ. Basavakalyan Dist. Bidar.

**V/s**

Respondent: The Tahasildar, Basavakalyan.

Claim:Issue of Death Certificate of the Grand father of

petitioner No.1

petitioner under sec. 13 (3) of birth and death Registration Act.1969

**PAPER PUBLICATION**

This is to inform to the public at large, the Grand Father of the petitioner No.1 by name "Ramachandra S/o Eknath" who was died on 04/04/1987, in his house at Village: Nirgdi, Tq:Basavakalyan, Dist:Bidar leaving behind the petitioner, as her son the said P1. Ramchndra and 4 others, all are R/o Nirgudi, Tq:Basavakalyan, Dist:Bidar has filed the above case before the Hon'bale Senior Civil Judge Court at Basavakalyan, for issuing direction to the respondent for issue of death certificate. If anybody got objection for the same, they are hereby requested to come and appear before the Hon'ble court on or before 29.09.2025 at 11-00 AM.

Date:16.07.2025

//By Order of the Court//
Chief Ministerial Officer
Senior Civil Judge & JMFC Court
Basavakalyan

# ಅಕ್ರಮ ಕೇಬಲ್ ತಂತಿಗಳಿಗೆ ಕಡಿವಾಣವೇ ಇಲ್ಲ! ಜೆಸ್ಕಾಂ ಅಧಿಕಾರಿಗಳ ನಿರ್ಲಕ್ಷ್ಯ ಮುಂದುವರಿಕೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ನಗರದ ಹಲವಾರು ಪ್ರದೇಶಗಳಲ್ಲಿ ವಿದ್ಯುತ್ ಕಂಬಗಳಿಗೆ ಅಕ್ರಮವಾಗಿ ಕೇಬಲ್ ಟಿವಿ ಹಾಗೂ ಇಂಟರ್‌ನೆಟ್ ತಂತಿಗಳು ಅಳವಡಿಸಲಾಗಿದ್ದು, ಸಾರ್ವಜನಿಕರ ಜೀವಕ್ಕೆ ಅಪಾಯ ಉಂಟುಮಾಡುತ್ತಿದೆ. ಕಂಬದ ಮೇಲೆ ಗೊಂದಲದ ರೀತಿಯಲ್ಲಿ ತಂತಿಗಳು ತೂಗುಹಾಕಲಾಗಿದ್ದು, ಕೆಲವೆಡೆ ತಂತಿಗಳು ಕೆಳಕ್ಕೆ ಬೀಳುವ ಪರಿಸ್ಥಿತಿ ಉಂಟಾಗಿದೆ.

ಹಿಂದಿನ ಜಿಲ್ಲಾಧಿಕಾರಿಗಳು ಈ ಬಗ್ಗೆ ಹಲವು ಬಾರಿ ಜೆಸ್ಕಾಂ ಅಧಿಕಾರಿಗಳಿಗೆ ಮೌಖಿಕ ಸೂಚನೆ ನೀಡಿದರೂ ಯಾವುದೇ ಕ್ರಮ ಕೈಗೊಳ್ಳದ ಅಧಿಕಾರಿಗಳ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ. ಕೇಬಲ್ ಮಾಲೀಕರಿಗೆ ಕೇಳಿದರೆ, "ನಾವು ಸರ್ಕಾರಕ್ಕೆ ಟ್ಯಾಕ್ಸ್ ಕೊಡ್ತೀವಿ" ಎಂಬ ಉತ್ತರ ಸಿಗುತ್ತದೆ. ಆದರೆ ಅವರು ಯಾರಿಗೆ, ಎಲ್ಲಿ, ಎಷ್ಟು ಟ್ಯಾಕ್ಸ್ ಕೊಡ್ತಾರೆ ಎಂಬ ಪ್ರಶ್ನೆಗೆ ಸ್ಪಷ್ಟತೆ ಇಲ್ಲ. ಸಾರ್ವಜನಿಕರು ಮತ್ತು ಮಾಧ್ಯಮಗಳು ಇದು ಬಗ್ಗೆ ಧ್ವನಿ ಎತ್ತುತ್ತಿದ್ದರು ಕೂಡಾ ಸಂಬಂಧಿತ ಇಲಾಖೆ ಕಾರ್ಯಚರಣೆ ಕೈಗೊಳ್ಳದೆ ಕಾಲಹರಣ ಮಾಡುತ್ತಿದೆ.

ಈ ಅಕ್ರಮ ಕೇಬಲ್ ಜಾಲದ ಕುರಿತು ತಕ್ಷಣ ಕ್ರಮ ಕೈಗೊಳ್ಳಬೇಕು ಹಾಗೂ ಸಂಬಂಧಿತ ಅಧಿಕಾರಿಗಳ ವಿರುದ್ಧ ತನಿಖೆ ನಡೆಸಬೇಕು ಎಂದು ಸಾರ್ವಜನಿಕರ ಆಗ್ರಹವಾಗಿದೆ.

# ಕಾರ್ಯನಿರತ ಪತ್ರಕರ್ತ ಸಂಘದಿಂದ ಜಿಲ್ಲಾಧಿಕಾರಿಗೆ ಸನ್ಮಾನ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನೂತನ ಜಿಲ್ಲಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ಆರ್ಷಲ್ ಬೋಯರ್ ಅವರನ್ನು ಗುರುವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಇಂಧುದರ ಸಿನ್ನೂರ್ ಅವರ ನೇತೃತ್ವದಲ್ಲಿ ಕಚೇರಿಗೆ ಭೇಟಿ ನೀಡಿ ಸನ್ಮಾನಿಸಲಾಯಿತು.

ಜಿಲ್ಲೆಯ ಹಲವು ಸಮಸ್ಯೆಗಳಾದ ಕುಡಿಯುವ ನೀರು, ರಸ್ತೆ, ವಿದ್ಯುತ್, ಇನ್ನಿತರ ಹಲವು ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು. ಜಿಲ್ಲೆಯ ಸಮಸ್ಯೆಗಳ ಪರಿಹಾರಕ್ಕೆ ಸೂಕ್ತ ಕ್ರಮ ಜರುಗಿಸಿ ಸಾರ್ವಜನಿಕರ ಅನುಕೂಲತೆಗೆ ಪರಿಹಾರ ನೀಡುವ ಭರವಸೆ ಜಿಲ್ಲಾಧಿಕಾರಿ ನೀಡಿದರು.

ಈ ಸಂಧರ್ಭದಲ್ಲಿ ವಾರ್ತಾಧಿಕಾರಿ ಸುಲೇಮಾನ್ ನಾಧಾಫ್ ಹಿರಿಯ ಪತ್ರಕರ್ತರಾದ ಸಂಜೀವ್ ರಾವ್ ಕುಲಕರ್ಣಿ, ಶರಣು ಗೊಬ್ಬುರ್, ಎಸ್ ಎಸ್ ಮಠ್, ಆನಂದ್ ಎಮ್ ಸೌದಿ, ಹಣಮಂತು ಪಿ, ಅಂಬರೀಷ್ ಬಿಳಾರ್,

ಆನಂದ ಗೊರ್ಕಲ್, ಎಸ್ ಎಸ್ ನಾಯಕ್, ಡಾ, ಭೀಮರಾಯ ಲಿಂಗೇರಿ, ನಾಗಪ್ಪ ಮಾಲಿ ಪಾಟೀಲ್, ರಫೀಕ್ ಸಾಬ್, ಅಮೀನ್ ಹೊಸೂರ್, ವಿಜಯಭಾಸ್ಕರ್ ರಡ್ಡಿ, ಸಾಗರ ದೇಸಾಯಿ, ರವಿರಾಜ್ ಕಂದಳ್ಳಿ,

ರಾಜು ನಳ್ಳಿಕರ್, ಶಿವಕುಮಾರ್, ಪರಶುರಾಮ್, ರೂಪೇಶ್ ಹುಲಿಕರ್, ಲಕ್ಷ್ಮಿಕಾಂತ್ ಲಿಂಗೇರಿ, "#ಎಮ್ ಡಿ #ರಫೀಕ್ (#ಪಟೇಲ್)", ಮಹೇಶ್ ಗಣೇರ್, ಶರಬು ನಾಟೆಕರ್, ಆಂಜನೇಯ ದೇವರಮನಿ, ಮಲ್ಲು ಕಾಮರಡ್ಡಿ, ಅರುಣ್ ಮಾಸ್ತರ್, ನಾಗರಾಜ, ಕುದಾನ ಸಾಬ್, ಸುಧೀರ್ ಕೋಟೆ, ಸೇರಿದಂತೆ ಇನ್ನಿತರ ಪತ್ರಕರ್ತರು ಭಾಗವಹಿಸಿದ್ದರು.

# ಸಾರ್ವಜನಿಕ ಸ್ಥಳಗಳಲ್ಲಿ ದಿನೇ ದಿನೇ ಕಳ್ಳತನ ಹೆಚ್ಚಾಗುತ್ತಿದ್ದು ಪೊಲೀಸ್ ಇಲಾಖೆ ಎಚ್ಚೆತ್ತುಕೊಳ್ಳಲಿ ಮಾನಪ್ಪ ಹಡಪದ್ ಆಕ್ರೋಶ.

ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ನಗರ ವ್ಯಾಪ್ತಿಯಲ್ಲಿ ದಿನೇದಿನೇ ಸರಗಳತನ ಹೆಚ್ಚಾಗುತ್ತಿದ್ದು. ಹಳ್ಳಿಯಿಂದ ನಗರಕ್ಕೆ ತಮ್ಮ ಕೆಲಸ ಕಾರ್ಯಗಳನ್ನು ಮುಗಿಸಿಕೊಂಡು ಹೋಗಲು ನಗರಕ್ಕೆ ಬರುವ ಸಾರ್ವಜನಿಕರಿಗೆ ದೊಡ್ಡ ತಲೆನೇವಾಗಿದೆ.

ದಿನನಿತ್ಯ ಕಳ್ಳರು ಕದೀಮರ ಕಾಟ ಹೆಚ್ಚಾಗುತ್ತಿದ್ದು. ಕೂಡಲೇ ಪೊಲೀಸ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ಕಳ್ಳತನ ವಾಗಿರುವ ವಸ್ತುಗಳನ್ನು ಪುನಃ ವಾರಸುದಾರರಿಗೆ ನೀಡುವಲ್ಲಿ ಪೊಲೀಸ್ ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ನಿನ್ನೆ ಹೊಸ ಬಸ್ ಸ್ಟ್ಯಾಂಡ್ ಹಾಗೂ ಹಳೆ ಬಸ್ ಸ್ಟ್ಯಾಂಡ್ ಬಸ್ ಹತ್ತುವ ಸಮಯದಲ್ಲಿ ಕಳ್ಳರೇ ತಮ್ಮ ಕೈಚಳಕವನ್ನು ತೋರಿಸಿ ಹಲವಾರು ಮೊಬೈಲಗಳನ್ನು ಹಾಗೂ ಚಿನ್ನಾಭರಣಗಳನ್ನು ಹಾಗೂ ದುಡ್ಡು ಕದ್ದಿರುವ ಘಟನೆಗಳು ಹೆಚ್ಚಾಗುತ್ತಿದ್ದು.

ಎರಡು ಮೂರು ದಿನಗಳಲ್ಲಿ ಸರಣಿ ಕಳ್ಳತನವಾಗುತ್ತಿದ್ದು ಪೊಲೀಸರ ಗಮನಕ್ಕೆ ಬಂದರು ಕ್ಯಾರೆನಾದ ಕ್ರೈಂ ಬ್ಯೂರೋ ತನಿಕಾ ಅಧಿಕಾರಿಗಳು ಮೌನಕ್ಕೆ ಶರಣಾಗಿರುವುದು ವಿಪರ್ಯಾಸ.

ಕೂಡಲೇ ಪೊಲೀಸ್ ಇಲಾಖೆ ಎಚ್ಚೆತ್ತುಕೊಂಡು ಅಂತವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಇಲ್ಲವಾದರೆ ಜನಸಾಮಾನ್ಯರು ದಿನನಿತ್ಯ ಅನುಭವಿಸುವ ಗೋಳು ಹೆಚ್ಚಾಗುತ್ತಿದ್ದು ಕೂಡಲೇ ಪೊಲೀಸ್ ಅಧಿಕಾರಿಗಳು ಎಚ್ಚೆತ್ತು ಅಂತಹ ಕದಿಮರಿಗೆ ಬೆಂಡೆತ್ತುವ ಕಾರ್ಯ ಮಾಡಬೇಕೆಂದು ಮಾನಪ್ಪ ಹಡಪ್ಪ ತಿಳಿಸಿದ್ದಾರೆ.



ಸಾರ್ವಜನಿಕ ವಲಯದಲ್ಲಿ ಪೊಲೀಸ್ ಇಲಾಖೆಯು ಶಹಪುರ್ ನಗರದ ಕಾರ್ಯವೈಖರ್ಗಳನ್ನು ಕುಗ್ಗಿತ್ತಿವೆ .

ಸರಿಯಾದ ಸಾರ್ವಜನಿಕರಿಗೆ ಸ್ಪಂದಿಸುವ ಕೆಲಸವಾಗುತ್ತಿಲ್ಲ ನಗರದಲ್ಲಿ ದಿನನಿತ್ಯ ಸರಣಿ ಕಳ್ಳತನವಾಗುತ್ತಿದ್ದ. ಪೊಲೀಸರು ಮೌನಕ್ಕೆ ಶರಣಾಗಿರೋದು ವಿಪರ್ಯಾಸ .

ಕಳ್ಳತನ ಮಾಡಿರುವ ಕದೀಮರನ ಹಿಡಿದು ಬಿಟ್ಟು ಕಳಿಸುತ್ತಿರುವುದು ಹೊಸದೇನು ಅಲ್ಲ ಎಂದು ಸಾರ್ವಜನಿಕ ವಲಯದಲ್ಲಿ ಪಿಸು ಪಿಸು ಮಾತನಾಡುತ್ತಿರುವ ಸಾರ್ವಜನಿಕರ ವಾದವಾಗಿದೆ.

# ಶಹಾಪುರ ಕಸಾಪದಿಂದ ಮಡಿವಾಳಪ್ಪ ರವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:–ಇಂದು ಶಹಾಪುರ ನಗರ ನಂದಿನಿ ಹೋಟೆಲನಲ್ಲಿ, ಕೆಂಭಾವಿ ವಲಯದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರರಾದ ಮಡಿವಾಳಪ್ಪ. ಪಾಟೀಲ್ ಹೆಗ್ಗಣದೊಡ್ಡಿಯವರು ಯಾದಗಿರಿ ಜಿಲ್ಲೆಯ ವೀರಶೈವ ಸಮಾಜದ ಯುವ ಘಟಕದ ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾದ ಪ್ರಯುಕ್ತ ಶಹಾಪುರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಸನ್ಮಾನಿಸಲಾಯಿತು, ಕಾರ್ಯಕ್ರಮದಲ್ಲಿ ತಾಲೂಕು ಕ. ಸಾ. ಪ ಶಹಾಪುರದ ಅಧ್ಯಕ್ಷರಾದ ಡಾ. ರವೀಂದ್ರನಾಥ್ ಹೊಸಮನಿ, ಹಾಗೂ ಪರಿಷತ್ತಿನ ಹಿರಿಯ ಪದಾಧಿಕಾರಿಗಳಾದ ಡಾ. ನೀಲಕಂಠ ಬಡಿಗೇರ್, ಶಂಕರ್ ಸಿಂಘ ,ಮಲ್ಲಪ್ಪ ಬೀರನೂರ್, ಮಹದೇವ್ ದಿಗ್ಗಿ, ದೌಲಪ್ಪ ಸಜ್ಜನ, ಮಾನಪ್ಪ ಗಡ್ಡದ, ದೇವೇಂದ್ರಪ್ಪ ವಿಶ್ವಕರ್ಮ,, ಭೀ. ಗುಡಿ ವಲಯದ ಅಧ್ಯಕ್ಷರಾದ ಶರಣಬಸವ ಬಿರಾದಾರ್, ಗೌರವ ಕಾರ್ಯದರ್ಶಿಗಳಾದ ಸುರೇಶ ಕೆ.ಅರುಣಿ ರವರು ಉಪಸ್ಥಿತರಿದ್ದರು.

# ರೈತರಿಗೆ ರಸಗೊಬ್ಬರ ಕೊರತೆಯ ಸಮಸ್ಯೆ ಪರಿಹರಿಸಲು ಸಂಸದ ಈ.ತುಕಾರಾಮ್ ಪ್ರಯತ್ನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.24–ಜಿಲ್ಲೆಯರೈತರಿಗೆ ಮುಂಗಾರು ಬಿತ್ತನೆಯ ಬೇಡಿಕೆಗೆ ತಕ್ಕಂತೆ ಯೂರಿಯಾ ಮತ್ತು ಇತರೆ ರಸಗೊಬ್ಬರ ಪೂರೈಕೆಯಾಗದೇ ಕೃಷಿ ಚಟುವಟಿಕೆಗಳಿಗೆ ತುಂಬಾ ಅನಾನುಕೂಲ ಆಗುತ್ತಿರುವ ಬಗ್ಗೆ ಅಖಂಡ ಬಳ್ಳಾರಿ ಜಿಲ್ಲೆಯ ಸಂಸದರಾದ ಈ.ತುಕಾರಾಮ್ ಅವರುಗುರುವಾರನವದೆಹಲಿಯಲ್ಲಿ ಕೇಂದ್ರ ರೈಲ್ವೇ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ.ಸೋಮಣ್ಣ ಅವರನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿದರು.

ಬಳ್ಳಾರಿ ಜಿಲ್ಲೆಯ ರೈತ ಸಮುದಾಯಕ್ಕೆ ಯೂರಿಯಾ ಮತ್ತು ಇತರೆ ರಸಗೊಬ್ಬರಗಳನ್ನು ಟ್ರ್ಯಾಕ್‌ಸಂಖ್ಯೆ:08 ರಲ್ಲಿ ಮಾತ್ರ ಇಳಿಸಲಾಗುತ್ತಿರುವುದರಿಂದರೈತರಿಗೆ ಯಾವುದೇ ರೀತಿಯಲ್ಲಿ ಕೃಷಿ ಚಟುವಟಿಕೆಗಳಿಗೆ ತೊಂದರೆ–ಯಾಗದಂತೆ ಮನವರಿಕೆ ಮಾಡಿ ಕೂಡಲೇ ಸಮಸ್ಯೆ ಪರಿಹರಿಸುವಂತೆ ಕೋರಿದರು.

ಇದಕ್ಕೆ ಸಚಿವ ವಿ.ಸೋಮಣ್ಣ ಅವರು ಸಂಸದ ಈ.ತುಕಾರಾಮ್ ಅವರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿ ಕೂಡಲೇ ಬಳ್ಳಾರಿ ರೈಲ್ವೇ ನಿಲ್ದಾಣದ (ಜಂಕ್ಷನ್) ಟ್ರ್ಯಾಕ್ ಸಂಖ್ಯೆ: 06 ಮತ್ತು 08 ರಲ್ಲಿ ರಸಗೊಬ್ಬರಗಳನ್ನು ಇಳಿಸುವುದಕ್ಕೆ (ಅನ್‌ಲೋಡಿಂಗ್) ಅನುಮತಿ ನೀಡಿ ಬಳ್ಳಾರಿ ಜಿಲ್ಲೆಯ ಎಲ್ಲಾ ರೈತರಿಗೆ ಬೇಡಿಕೆ ಇರುವ ರಸಗೊಬ್ಬರ ಪೂರೈಕೆಗೆ ಸಮಸ್ಯೆಯಾಗದಂತೆ ಪರಿಹರಿಸುವುದಾಗಿ ತಿಳಿಸಿದರು.

# ಜಿಟಿಟಿಸಿ: ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.24–ಜಿಲ್ಲೆಯಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಸಂಸ್ಥೆಯ ಬಹುಕೌಶಾಲ್ಯಾಭಿವೃದ್ಧಿ ಕೇಂದ್ರದಲ್ಲಿ ಹತ್ತನೇ ತರಗತಿ ಉತ್ತೀರ್ಣರಾದ ಯುವಕರಿಗೆ 'ಟೂಲರೂಮ್ ಮಶಿನಿಸ್ಟ್' ತಾಂತ್ರಿಕ ದೀರ್ಘಾವಧಿ ವೃತ್ತಿ ತರಬೇತಿಗೆ ಪ್ರವೇಶಾತಿ ಪ್ರಾರಂಭವಾಗಿದ್ದು, ತರಬೇತಿಗಾಗಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಹೊಂದಿದ ಅಭ್ಯರ್ಥಿಗಳಿಗೆ ಕೈಗಾರಿಕೆಗಳಲ್ಲಿ ಹೆಚ್ಚಿನ ಬೇಡಿಕೆಯಿದ್ದು, ಒಂದೇ ಕೋರ್ಸಿನಲ್ಲಿ ಫಿಟ್ಟರ್, ಟರ್ನರ್, ಮಿಲ್ಲರ್, ಗ್ರೈಂಡರ್, ಸಿಎನ್‌ಸಿ, ಕ್ಯಾಡ್–ಕ್ಯಾಮ್ ಮತ್ತು ಟೂಲ್ ಆಂಡ್ ಡೈ ಮೇಕಿಂಗ್ ಟ್ರೇಡ್‌ಗಳಲ್ಲಿ ಆನ್ ದಿ ಜಾಬ್ ತರಬೇತಿ ನೀಡುವುದರಿಂದ ವಿದ್ಯಾರ್ಥಿಗಳಿಗೆ ಹೆಚ್ಚು ಉದ್ಯೋಗಾವಕಾಶಗಳು ದೊರಕುತ್ತವೆ. ಜೊತೆಗೆ ಆಟೋಕ್ಯಾಡ್, ಕನ್ನಡ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯ ಹಾಗೂ ಉದ್ಯೋಗ ಕೌಶಲ್ಯಗಳನ್ನು ಕಲ್ಪಿಸಲಾಗುತ್ತದೆ.

ಜಿಟಿಟಿಸಿ ಸಂಸ್ಥೆಯು ಉನ್ನತ ತಂತ್ರಜ್ಞಾನ ಮತ್ತು ತರಬೇತಿ ಸೌಲಭ್ಯಗಳನ್ನು ಅಳವಡಿಸಿಕೊಂಡಿದ್ದು, ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಶಿಕ್ಷಕರನ್ನು ಹೊಂದಿದೆ.

ತರಬೇತಿಯ ನಂತರ ವಿದ್ಯಾರ್ಥಿಗಳಿಗೆ ಟೂಲಿಂಗ್, ವಿಮಾನ ತಯಾರಿಕೆ, ಮತ್ತು ಆಟೋಮೊಬೈಲ್ ವಲಯಗಳ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸಿ ಕೊಡಲಾಗುವುದು.

ಸರ್ಕಾರದ ವಿವಿಧ ಯೋಜನೆಯಡಿ "ಮೆಕ್ಯಾನಿಕಲ್–ಕ್ಯಾಡ್/ಕಾಮ್", "ಎಲೆಕ್ಟ್ರಾನಿಕ್ಸ್–ಅಟೋಮೇಶನ್ ಮನೆ/ಕೈಗಾರಿಕೆ, ಪಿ.ಎಲ್.ಸಿ ಪ್ರೋಗ್ರಾಮಿಂಗ್, ಅಡ್ವಾನ್ಸ್ ಹೈಡ್ರಾಲಿಕ್ಸ್ ಮತ್ತು ನ್ಯೂಮ್ಯಾಟಿಕ್ಸ್", "ಎಲೆಕ್ಟ್ರಿಕಲ್– ಮನೆ/ಕೈಗಾರಿಕೆ ಇನ್ಸಾಲೇಷನ್, ಸಿಕ್ಯಾಡ್ ಮತ್ತು ಕಂಪ್ಯೂಟರ್ ಸೈನ್ಸ್–ಕಂಪ್ಯೂಟರ್ ಅಪ್ಲಿಕೇಷನ್ ವಿಭಾಗದ ಉಚಿತ ಮತ್ತು ಪಾವತಿ ತಾಂತ್ರಿಕ ಕೌಶಲ್ಯ ಅಲ್ಪಾವಧಿ ತರಬೇತಿಗಳನ್ನು ಪ್ರಾರಂಭಿಸಲಾಗುತ್ತಿದೆ.

ಕನಿಷ್ಠ 8ನೇ ತರಗತಿ, ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ, ಐಟಿಐ, ಡಿಪ್ಲೋಮಾ, ಬಿ.ಇ ಉತ್ತೀರ್ಣರಾದ 16 ರಿಂದ 35 ವಯೋಮಿತಿಯೊಳಗಿನ ಅಭ್ಯರ್ಥಿಗಳು ತರಬೇತಿ ಪಡೆಯಲು ಅರ್ಹರು. ತರಬೇತಿ ಪಡೆಯಲು ಆದಾಯದ ಮಿತಿ ಇರುವುದಿಲ್ಲ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಅಲ್ಪಾವಧಿ ಮತ್ತು ದೀರ್ಘಾವಧಿ ತರಬೇತಿಗಳು ಉಚಿತವಾಗಿರುತ್ತದೆ.

ಡಿಪ್ಲೋಮಾ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಕಂಟೋನ್‌ಮೆಂಟ್‌ನ ಐಶ್ವರ್ಯ ಕಾಲೋನಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಐ.ಟಿ.ಐ. ಕ್ಯಾಂಪಸ್) ಅಥವಾ ಮೊ.9972320076,9620057086 ಗೆ ಸಂಪರ್ಕಿಸಬಹುದು ಎಂದು ಜಿಟಿಟಿಸಿಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾನಗರ ಪಾಲಿಕೆ: ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,24–ಬಳ್ಳಾರಿ ಮಹಾನಗರ ಪಾಲಿಕೆಯಲ್ಲಿ ಖಾಲಿ ಇರುವ ಪೌರಕಾರ್ಮಿಕರ ಆಯ್ಕೆಗಾಗಿ ಅಧಿಸೂಚನೆ ಹೊರಡಿಸಲಾಗಿದ್ದು, ಈಗಾಗಲೇ ತಾತ್ಕಾಲಿಕವಾಗಿ ಆಯ್ಕೆಗೊಂಡ 121 ಸಂಖ್ಯಾತಿರಿಕ್ತ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ. ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದು.

ಆಯ್ಕೆಪಟ್ಟಿಯನ್ನು ಮಹಾನಗರ ಪಾಲಿಕೆ ಕಚೇರಿಯ ಸೂಚನಾ ಫಲಕ ಹಾಗೂ ಪಾಲಿಕೆಯ ವೆಬ್‌ಸೈಟ್ www.ballar-icity.mrc.gov.in ನಲ್ಲಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಆಯ್ಕೆಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸಲು ಆಗಸ್ಟ್ 11 ಕೊನೆಯ ದಿನವಾಗಿದ್ದು, ಲಿಖಿತವಾಗಿ ಸೂಕ್ತ ದಾಖಲೆಗಳೊಂದಿಗೆ ಮಹಾನಗರ ಪಾಲಿಕೆಯ ಆಯುಕ್ತರ ಕಚೇರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.08392–273479,278168 ಗೆ ಸಂಪರ್ಕಿಸಬಹುದು ಎಂದು ಪೌರಕಾರ್ಮಿಕ ನೇರ ನೇಮಕಾತಿ (ವಿಶೇಷ) ಆಯ್ಕೆ ಪ್ರಾಧಿಕಾರದ ಅಧ್ಯಕ್ಷರು ಆದ ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೂಸಿನ ಮನೆಗಳಿಗೆ ಮೊಬೈಲ್ ಕ್ರೆಶ್ ಸಂಸ್ಥೆ ಬೆಂಗಳೂರು ತಂಡ ಭೇಟಿ: ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ: ಇಂದು ಕೊಪ್ಪಳ ಜಿಲ್ಲೆಯ ಕುಕನೂರ ತಾಲೂಕಿನ ತಳಕಲ್, ಮಂಡಲಗೇರಿ, ಇಟಗಿ, ರಾಜೂರ, ಮಸಬಹಂಚಿನಾಳ, ಬೆಣಕಲ್ ಮತ್ತು ಭಾನಾಪೂರ ಗ್ರಾಮ ಪಂಚಾಯತಿಗಳ ಕೂಸಿನ ಮನೆ ಗೆ ಮೊಬೈಲ್ ಕ್ರೇಶ್ ಸಂಸ್ಥೆ ಬೆಂಗಳೂರು ತಂಡದ ಶಶಿಧರ್ ಮತ್ತು ರಜಿನಿ ಎಚ್ ಅವರು ಭೇಟಿ ನೀಡಿ ಪರಿಶೀಲಿಸಿದರು.

ಕೂಸಿನ ಮನೆಯಲ್ಲಿ ಮಕ್ಕಳ ಹಾಜರಾತಿ, ಗುಣಮಟ್ಟದ ಆಹಾರ, ವಿತರಣೆ, ದಾಖಲಾತಿಗಳ ನಿರ್ವಹಣೆ, ಮಕ್ಕಳಿಗೆ ಸ್ವಚ್ಛತೆ ಬಗ್ಗೆ ಮಾಹಿತಿ, ಹಾಡು, ನೃತ್ಯ, ಆರೋಗ್ಯ ತಪಾಸಣೆ, ಪೋಷಕರ ಸಭೆ, ಮತ್ತು ಕೂಸಿನ ಮನೆ ಮೇಲ್ವಿಚಾರಣಾ ಸಭೆ ಮುಂತಾದವುಗಳ ಬಗ್ಗೆ ಕೂಸಿನ ಮನೆಯಲ್ಲಿ ಕೆಲಸ ಮಾಡುತ್ತಿರುವ ಕೇರ್ ಟೆಕರ್ ಗಳಿಂದ ಮಾಹಿತಿ ಪಡೆದರು.

ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಬರುವಂತೆ ಕೇರ್ ಟೇಕರ್ ಅವರು ಮನೆ ಮನೆ ಭೇಟಿ ನೀಡಿ ಕರೆದುಕೊಂಡು ಬರಬೇಕು. ಜಿಲ್ಲಾ ಪಂಚಾಯತಿಯಲ್ಲಿ ನಿರ್ಧರಿಸಿದ ಆಹಾರ ಮೆನುವಿನ ಪ್ರಕಾರ ಪೌಷ್ಠಿಕ ಆಹಾರ ನೀಡುತ್ತಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು.

ಪ್ರತಿತಿಂಗಳು ಆರೋಗ್ಯ ತಪಾಸಣೆ ಮಾಡಿಸಬೇಕು ಕಡಿಮೆ ತೂಕದ ಮಕ್ಕಳು ಕಂಡುಬಂದಲ್ಲಿ ಅಂತವರಿಗೆ ಹೆಚ್ಚುವರಿ ಆಹಾರ ಒದಗಿಸಬೇಕು, ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಆಟಿಕೆ ಸಾಮಗ್ರಿಗಳು ಇರುವಂತೆ ನೋಡಿಕೊಳ್ಳಬೇಕು, ಪ್ರತೀ ತಿಂಗಳು ಪೋಷಕರ ಸಭೆ, ಕೂಸಿನ ಮನೆ ಮೇಲುಸ್ತುವಾರಿ ಸಮಿತಿ ಸಭೆಗಳನ್ನು ಕಡ್ಡಾಯವಾಗಿ ಆಯೋಜನೆ ಮಾಡದಲ್ಲಿ ಕೂಸಿನ ಮನೆಗಳು ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಯಶಸ್ವಿಯಾಗಿ ನಿರ್ವಹಣೆಯಾಗುತ್ತವೆ. ಕೇಂದ್ರ ಗ್ರಾಮ ಪಂಚಾಯತಿಗೆ ಒಂದೆ ಇರುವುದರಿಂದ ಎಲ್ಲಾ ಗ್ರಾಮಗಳ ಜನರ 3 ವರ್ಷದೊಳಗಿನ ಮಕ್ಕಳು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಅದಕ್ಕಾಗಿ ವಾರ್ಡ ಸಭೆ, ಗ್ರಾಮ ಸಭೆ, ಸಾಮಾನ್ಯ ಸಭೆಯಲ್ಲಿ ಎಂದು ತಿಳಿಸಿದರು.

ತಳಕಲ್ ಗ್ರಾಮಕ್ಕೆ ತಂಡವು ಭೇಟಿ ನೀಡಿದಾಗ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ವೀರನಗೌಡ ಚೇನ್ನವೀರಗೌಡ್ರ ಮಾತನಾಡಿ ಕೂಸಿನ ಮನೆಗಳು ಗ್ರಾಮದ 3 ವರ್ಷದೊಳಗಿನ ಮಕ್ಕಳಗೆ ಆರೈಕೆ, ಪೌಷ್ಠಿಕ ಆಹಾರ, ಶಿಕ್ಷಣ ಒದಗಿಸುವ ಕೇಂದ್ರಗಳಾಗಿವೆ, ಇದರೊಂದೊಗೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ 8 ಜನ ಆರೈಕೆದಾರರಿಗೆ ನಿರಂತರ 100 ಕೆಲಸ ಸಿಗಲಿದೆ ಎಂದರು.

ಈ ಸಂದರ್ಭದಲ್ಲಿ ಮಾನ್ಯ ಸಹಾಯಕ ನಿರ್ದೇಶಕರು ಗ್ರಾಮೀಣ ಉದ್ಯೋಗ ಶರಣಪ್ಪ ಕೆಳಗಿನ ಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಸಿದ್ದನಗೌಡ ರಬ್ಬನಗೌಡ್ರ, ವೈಜನಾಥ ಸಾರಂಗಮಠ, ಪ್ರಕಾಶ್ ಶಿಡ್ನಳ್ಳಿ, ರಮೇಶ್ ತಿಮ್ಮಾರಡ್ಡಿ, ಸುರೇಶ್ ಕಾವಳೆ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ RGFellow ಸೀಮಾ ಕೌಸರ್, ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗ, ಕೇರ್ ಟೇಕರ್ ಹಾಜರಿದ್ದರು.

# ಇಎಸ್‌ಐಸಿ: ಉದ್ಯೋಗದಾತರು ಮತ್ತು ಉದ್ಯೋಗಿಗಳು ನೋಂದಾಯಿಸಿಕೊಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.24–ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ 2025 ಎಂಬ ನವೀಕೃತ ಯೋಜನೆ ಅನುಮೋದಿಸಿದ್ದು, ಇಎಸ್‌ಇ ಅಡಿ ಉದ್ಯೋಗದಾತರು ಮತ್ತು ಉದ್ಯೋಗಿಗಳು ನೋಂದಾಯಿಕೊಳ್ಳಬೇಕು ಎಂದು ಕಲಬುರಗಿ ಪ್ರಾದೇಶಿಕ ಕಚೇರಿಯ ಜಂಟಿ ನಿರ್ದೇಶಕ ಯುವರಾಜ ಎಸ್.ವಿ ಅವರು ತಿಳಿಸಿದ್ದಾರೆ.

ಈ ಕುರಿತು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ಮತ್ತು ಕ್ರೀಡಾ ಸಚಿವ ಡಾ.ಮಾಂಡವೀಯ ಅವರ ಅಧ್ಯಕ್ಷತೆಯಲ್ಲಿ ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196 ನೇ ಸಭೆಯಲ್ಲಿ ಈ ಯೋಜನೆಯನ್ನು ಅನುಮೋದಿಸಿದೆ.

ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ 2025 ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, 31ನೇ ಡಿಸೆಂಬರ್ 2025 ರವರೆಗೆ ಸಕ್ರಿಯವಾಗಿದೆ. ಹಾಗಾಗಿ ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್‌ಇ ಅಡಿ ಇನ್ನು ನೋಂದಣಿಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಲು ಒಂದು ಬಾರಿಯ ಅವಕಾಶ ನೀಡಿದೆ ಎಂದು ಅವರು ತಿಳಿಸಿದ್ದಾರೆ.

ಈ ಯೋಜನೆಯಡಿ ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮ್ ಸುವಿಧಾ ಮತ್ತು ಎಂಸಿಎ ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು.

ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ. ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯ ಅನ್ವಯಿಸುವುದಿಲ್ಲ. ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂಪ್ರೇರಿತವಾದ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯ ಹೋಗಲಾಡಿಸಿ, ನೋಂದಣಿ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. ಈ ಯೋಜನೆಯನ್ನು ಅನುಮೋದಿಸುವ ಮೊದಲು ನಿಗಧಿತ ಅವಧಿಯಲ್ಲಿ ನೋಂದಣಿ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಬೇಡಿಕೆಗೆ ಕಾರಣವಾಗುತ್ತಿತ್ತು. ಈ ಅಡೆತಡೆಗಳನ್ನು ನಿವಾರಿಸಿ ನೋಂದಣಿಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿಯೊಳಗೆ ಸೇರಿಸಿ ಸಾಮಾಜಿಕ ಭದ್ರತೆ ಒದಗಿಸಲಾಗುತ್ತದೆ ಎಂದು ಹೇಳಿದ್ದಾರೆ.

ಈ ಯೋಜನೆಯಿಂದ ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಯ ಬೇಡಿಕೆಯಿಲ್ಲದೆ ನೋಂದಣಿಗೆ ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ.

ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೇ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ಗುತ್ತಿಗೆ ವಲಯದ ಕಾರ್ಮಿಕರು ಇಎಸ್‌ಐ ಕಾಯ್ದೆಯಡಿ ದೊರೆಯುವ ಅಗತ್ಯ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್‌ಐಸಿಯು ಅಗತ್ಯ ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯಡಿ ಬೆಳೆ ವಿಮೆ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.25–ಪ್ರಸ್ತಕ ಸಾಲಿನ ಮುಂಗಾರು ಹಂಗಾಮಿನ ಕೃಷಿ ಬೆಳೆಗಳಿಗೆ ವಿಮೆ ನೋಂದಣಿ ಪ್ರಕ್ರಿಯೆ ಆರಂಭಗೊಂಡಿದ್ದು, ಬಳ್ಳಾರಿ ಹೋಬಳಿಯ ರೈತರು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯಡಿ ತಮ್ಮ ವಿವಿಧ ಕೃಷಿ ಬೆಳೆಗಳಿಗೆ ಬೆಳೆ ವಿಮೆ ಮಾಡಿಸಿಕೊಳ್ಳಬೇಕು ಎಂದು ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಬಸವರಾಜು ಸಿಂಧಿಗೇರಿ ಅವರು ತಿಳಿಸಿದ್ದಾರೆ.

ಬೆಳೆವಿಮೆಯಿಂದ ರೈತರಿಗೆ ನೈಸರ್ಗಿಕ ಪ್ರಕೃತಿ ವಿಕೋಪಗಳಿಂದಾಗಿ ಬೆಳೆ ಹಾನಿಯಾದರೆ, ವಿಮಾ ಯೋಜನೆಯಿಂದ ಅನುಕೂಲವಾಗಲಿದೆ.

ಮಳೆಯಾಶ್ರಿತ ಬೆಳೆಗಳಾದ ಸೂರ್ಯಕಾಂತಿ ಬೆಳೆಗೆ(ಎಕರೆಗೆ) 330 ರೂ., ಮಳೆಯಾಶ್ರಿತ ಹಾಗೂ ನೀರಾವರಿ ಬೆಳೆ ಹತ್ತಿ (ಎಕ–ರೆಗೆ) ಕ್ರಮವಾಗಿ 1,007 ರೂ., ಹಾಗೂ 1,256 ರೂ., ನೀರಾವರಿ ಮುಸುಕಿನ ಜೋಳ (ಎಕರೆಗೆ) 522 ರೂ., ನೀರಾವರಿ ತೊಗರಿಗೆ 407 ರೂ. ಇದ್ದು, ನೋಂದಣಿಗೆ ಜುಲೈ 31 ಕೊನೆಯ ದಿನವಾಗಿದೆ. ನೀರಾವರಿ ಭತ್ತ (ಎಕರೆಗೆ) 755 ರೂ, ಮಳೆಯಾಶ್ರಿತ ಬೆಳೆಗಳಾದ ಸಜ್ಜೆ–255 ರೂ., ನವಣೆ–229 ರೂ., ತೊಗರಿ–389 ರೂ., ಹುರುಳಿ–166 ರೂ., ಹಾಗೂ ನೆಲಗಡಲೆ/ಶೇಂಗಾ 441 ರೂ. ಇದ್ದು, ಆಗಸ್ಟ್ 16 ಕೊನೆಯ ದಿನವಾಗಿದೆ.

ಬೆಳೆಗಳ ವಿಮೆ ನೋಂದಣಿಗೆ ಹೋಬಳಿ ಹಾಗೂ ಗ್ರಾಮ ಪಂಚಾಯತಿಗಳಲ್ಲಿ ನಿಗದಿಪಡಿಸಿದ್ದು, ನಿಗದಿತ ಘಟಕದಲ್ಲಿ ಬೆಳೆ ನೋಂದಣಿ ಮಾಡಲಾಗುವುದು. ರೈತರು ಬೆಳೆ ವಿಮೆ ನೋಂದಣಿಗಾಗಿ ಹತ್ತಿರದ ಸಾಮಾನ್ಯ ಸೇವಾ ಕೇಂದ್ರ, ಗ್ರಾಮ ಒನ್ ಕೇಂದ್ರ, ರೈತರು ತಮ್ಮ ವ್ಯವಹಾರದ ಬ್ಯಾಂಕ್‌ಗಳಿಗೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿವೃತ್ತಿಯಾದ ನೌಕರರಿಗೆ ಹಾಲಿ ಇರುವ ಪದ್ಧತಿಯನ್ನು ಮುಂದುವರಿಸಲು ಅಪರ ಜಿಲ್ಲಾಧಿಕಾರಿಗಳಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ದಿನಾಂಕ 01–01–2026 ರ ಮೊದಲು ನಿವೃತ್ತಿಯಾದ ನೌಕರರಿಗೆ, ಕುಟುಂಬದವರಿಗೆ ಪಿಂಚಣಿ ಪರಿಷ್ಕರಣೆ ಸಾಧ್ಯವಾಗುದಿಲ್ಲ ಎಂಬ ಹಣಕಾಸು ಬಿಲ್ಲನ್ನು ಕೈ ಬಿಟ್ಟು ಹಾಲಿ ಇರುವ ಪದ್ಧತಿಯನ್ನು ಮುಂದುವರಿಸುವಂತೆ ದೇಶದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಯವರಿಗೆ ಕೊಪ್ಪಳದ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಮೂಲಕ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಜಿಲ್ಲಾಧ್ಯಕ್ಷ ಸಿ. ವಿ. ಜಡಿಯವರ ಪ್ರಧಾನ ಕಾರ್ಯದರ್ಶಿ ಬಿ. ಎಫ್. ಬೀರನಾಯ್ಕರ ಉಪಾಧ್ಯಕ್ಷರುಗಳಾದ ಶಾಂತಯ್ಯ ಅಂಗಡಿ, ಶ್ರೀಮತಿ ಇಂದುಮತಿ ಬ್ಯಾಲಹುಣಸಿ, ಖಜಾಂಚಿ ವೆಂಕಪ್ಪ ಬಾರಕೇರ ಕಾನೂನು ಸಲಹೆಗಾರರಾದ ಶ್ರೀ ಕೃಷ್ಣಮೂರ್ತಿ ದೇಸಾಯಿ, ಮಲಾರರಾವ ಕುಲಕರ್ಣಿ ಹಾಗೂ ನೂರಾರು ನಿವ್ರತ್ತ ನೌಕರರು ಈ ಸಮಯದಲ್ಲಿ ಹಾಜರಿದ್ದರು.

# ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾಗಿ ಶಿವರಾಜ್ ಬೂದೂರ್ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ: ಕರ್ನಾಟಕ ರಾಜ್ಯ ಕಾಂಗ್ರೆಸ್ ಸಮಿತಿ ಯಾದಗಿರಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾಗಿ ಆಯ್ಕೆ ಮಾಡಿದಕ್ಕಾಗಿ ಹೃತ್ಪೂರ್ವಕ ಅಭಿನಂದನೆಗಳು ಸಲ್ಲುಸುತ್ತೇನೆ ಹಾಗೂ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಹಲವು ವರ್ಷಗಳಿಂದ ಕಾಂಗ್ರೆಸ್ಸಿನಲ್ಲಿ ಸೇವೆ ಸಲ್ಲಿಸಿದ್ದು ನನ್ನನ್ನು



ಗುರುತಿಸಿದ ಶರಣಬಸಪ್ಪಗೌಡ ದರ್ಶನಾಪುರ ಅವರ ನನಗೆ ಈ ಪ್ರಾಣ ನೀಡಿದ್ದಕ್ಕಾಗಿ ಹೃತ್ಪೂರ್ವಕ ಅಭಿನಂದನೆಗಳು ಸಲ್ಲಿಸುತ್ತೇನೆ.

ಮಾನ್ಯಶ್ರೀ ಶರಣಬಸಪ್ಪಗೌಡ ದರ್ಶನಾಪುರ್ ಜಿಲ್ಲಾ ಉಸ್ತುವಾರಿ ಮಂತ್ರಿಗಳಿಗೆ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಜು.26 ರಂದು "ಮಕ್ಕಳ ರಕ್ಷಣೆಗೆ ಕಾನೂನುಗಳು ಪುಸ್ತಕ ಬಿಡುಗಡೆ"

# ಸಮಾರಂಭ ಹಾಗೂ ಮಗುವಿಗೊಂದು ಮರ ಶಾಲೆಗೊಂದು ವನ ಅಭಿಯಾನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.24–ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ರೀಡ್ಸ್ ಸಂಸ್ಥೆ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಮತ್ತು ಅರಣ್ಯ ಇಲಾಖೆ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಜು.26 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ನ್ಯಾಯಾಲಯದ ವಿಸಿ ಸಭಾಂಗಣದಲ್ಲಿ "ಮಕ್ಕಳ ರಕ್ಷಣೆಗೆ ಕಾನೂನುಗಳು" ಪುಸ್ತಕ ಬಿಡುಗಡೆ ಸಮಾರಂಭ ಹಾಗೂ ಮಗುವಿಗೊಂದು ಮರ ಶಾಲೆಗೊಂದು ವನ ಅಭಿಯಾನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ ಶಾಂತಿ ಅವರು ಪುಸ್ತಕ ಬಿಡುಗಡೆ ಮತ್ತು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.

ಬಳ್ಳಾರಿ ಪ್ರಾದೇಶಿಕ ವಿಭಾಗದ ಅರಣ್ಯ ಇಲಾಖೆಯ ಉಪ ಸಂರಕ್ಷಣಾಧಿಕಾರಿ ಕೆ.ಎನ್ ಬಸವರಾಜು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ರೀಡ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಸಿ.ತಿಪ್ಪೇಶಪ್ಪ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯ ಡಾ.ಹೆಚ್.ಸಿ.ರಾಘವೇಂದ್ರ, ಹಂಪಿ ಕನ್ನಡ ವಿಶ್ವವಿದ್ಯಾಲಯದ ಅಭಿವೃದ್ಧಿ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾ.ಜನಾರ್ದನ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕರಾದ ಉಮಾದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ್, ಹಿರಿಯ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ ಚಂದ್ರಕಾಂತ ನಂದಾರೆಡ್ಡಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ಧಪ್ಪ.ಜಿ ಕೈನೂರು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿ.ಆರ್.ಸಿ., ಸಿ.ಆರ್.ಸಿ ಇ.ಸಿ.ಓ, ಕಾರ್ಮಿಕ ಅಧಿಕಾರಿಗಳು, ಪಿ.ಡಿ–ಎನ್.ಸಿ.ಎಲ್.ಪಿ, ಮಕ್ಕಳ ವಿಶೇಷ ಪೊಲೀಸ್ ಘಟಕ ಸಿಬ್ಬಂಧಿಗಳು, ಡಿ.ಸಿ.ಪಿ.ಓ ಸಿಬ್ಬಂದಿಗಳು, ಚೈಲ್ಡ್ ಲೈನ್ ಸಿಬ್ಬಂಧಿಗಳು, ಅಂಗನವಾಡಿ ಮೇಲ್ವಿಚಾರಕರು, ಪ್ಯಾರಾ ಲೀಗಲ್ ವಾಲೆಂಟೀಯರ್ಸ್, ಎಲ್ಲಾ ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥರುಗಳು, ರೀಡ್ಸ್ ಸಂಸ್ಥೆಯ ಸಿಬ್ಬಂದಿಗಳು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿಗಳು ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ತುಂಗಭದ್ರಾ ನಂ.1 ಜಲಾಶಯ ವಿಭಾಗ ಕಚೇರಿಗೆ ರೈತ ಸಂಘದ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕಳೆದ ಹತ್ತು ದಿನಗಳಿಂದ ತುಂಗಭದ್ರಾ ನಂ.1 ಜಲಾಶಯ ವಿಭಾಗದ ಕನೀನಿನಿ ಕಚೇರಿಯಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವ ಪರಿಣಾಮ ಕಚೇರಿಯ ಎಲ್ಲಾ ಕೆಲಸಗಳು ಸ್ಥಗಿತಗೊಂಡಿವೆ. ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಸ್ಪಂದನೆ ಇಲ್ಲದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ವಿದ್ಯುತ್ ಸಂಪರ್ಕ ಕಡಿತಗೊಳಿಸುವುದಕ್ಕೆ ಕಾರಣವಾಗಿ ಕಚೇರಿಗೆ ಸಂಬಂಧಿಸಿದ ಹಳೆಯ ವಿದ್ಯುತ್ ಬಾಕಿ ಸುಮಾರು 26 ಲಕ್ಷ ರೂ. ದಾಟಿದೆ ಎಂದು ತಿಳಿದು ಬಂದಿದೆ. ಇದರ ಬೆನ್ನಲ್ಲೇ, ಅಖಿಲ ಕರ್ನಾಟಕ ಕಿಸಾನ್ ಜಾಗೃತಿ ಸಂಘದ ರಾಜ್ಯ ಉಪಾಧ್ಯಕ್ಷರು ಸೈಯದ್ ಖಾದ್ರಿ, ಬಳ್ಳಾರಿ ಜಿಲ್ಲಾಧ್ಯಕ್ಷರು ಗಂಗಾಧರ ಮತ್ತು ಕೊಪ್ಪಳ ಅಧ್ಯಕ್ಷರು ಎಸ್ ರಾಜೇಶ್ ಜಂಟಿಯಾಗಿ ಕಚೇರಿಗೆ ಭೇಟಿ ನೀಡಿ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ತಮ್ಮ ಅಕ್ರೋಶವನ್ನು ವ್ಯಕ್ತಪಡಿಸಿದರು.

ಸಂಘಟನೆಯ ಪ್ರತಿನಿಧಿಗಳು ಮಾತನಾಡಿದ ನಂತರ, ಸಂಬಂಧಿತ ಅಧಿಕಾರಿಗಳು "ಬಾಕಿ ಬಿಲ್ಲುಗಳನ್ನು ಪಾವತಿಸಿದ ಬಳಿಕ ನಾಳೆಯೊಳಗೆ ವಿದ್ಯುತ್ ಸಂಪರ್ಕ ಪುನಸ್ಥಾಪನೆ ಮಾಡುವುದಾಗಿ" ಭರವಸೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಈ ಸಂದರ್ಭದಲ್ಲಿ ರೈತ ಮುಖಂಡರು ವಿದ್ಯುತ್ ಇಲ್ಲದೆ ಕಚೇರಿಯ ಕೆಲಸಗಳು ಸಂಪೂರ್ಣ ಸ್ಥಗಿತಗೊಂಡಿದ್ದು, ರೈತರಿಗೆ ಮತ್ತು ಸಾರ್ವಜನಿಕರಿಗೆ ಅನೇಕ ಅಡಚಣೆಗಳು ಉಂಟಾಗಿವೆ. ಅಧಿಕಾರಿಗಳು ಕಚೇರಿಗೆ ಬರದೆ, ಸಾರ್ವಜನಿಕರಿಗೆ ಸ್ಪಂದನೆ ನೀಡದೇ ನಿರ್ಲಕ್ಷ್ಯ ತೋರಿಸುತ್ತಿದ್ದಾರೆ" ಎಂದು ಕಿಡಿಕಾರಿದರು.

# ರಾಯಚೂರು ಮಹಾನಗರ ಪಾಲಿಕೆಯಿಂದ ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ರಾಯಚೂರು ಜುಲೈ 19– ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2025–26ನೇ ಸಾಲಿನ ಎಸ್.ಎಫ್.ಸಿ ಅನುದಾನದಲ್ಲಿ ಶೇ.7.25 ಇತರೆ ಹಿಂದುಳಿದ ಜನಾಂಗದ ಮತ್ತು ಶೇ.5 ವಿಕಲಚೇತನರ ವೈಯಕ್ತಿಕ ಸಂಬಂಧಿತ ಕಲ್ಯಾಣ ಕಾರ್ಯಕ್ರಮದಲ್ಲಿ ಪಾಲಿಕೆ ವ್ಯಾಪ್ತಿ ಪ್ರದೇಶದ ಅರ್ಹ ಫಲಾನುಭವಿಗಳಿಂದ ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಕಾರ್ಯಚಟುವಟಿಕೆಯಡಿ ಶೇ.7.25ರ ಇತರೆ ಹಿಂದುಳಿದ ಜನಾಂಗದ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ 1.85 ಲಕ್ಷ ರೂ.ಗಳನ್ನು ಅಂದಾಜು ಮೊತ್ತ ಕಾಯ್ದಿರಿಸಲಾಗಿದೆ. ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಛಾವಣೆ ದುರಸ್ತಿ ಸಾಮಗ್ರಿಗಳು ಅಥವಾ ಅವಶ್ಯಕ ಸಾಮಗ್ರಿಗಳನ್ನು ಖರೀದಿಸಲು 40000 ರೂ.ಗಳನ್ನು ಒಂದು ಬಾರಿ ಒಟ್ಟು 18 ಅಭ್ಯರ್ಥಿಗಳಿಗೆ ಧನಸಹಾಯ ನೀಡಲಾಗುವುದು.

ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಅದಾಯ ಪ್ರಮಾಣ ಪತ್ರ (ಪ್ರಸಕ್ತ ಚಾಲ್ತಿ ಸಾಲು), ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ, ಪಾಸ್ ಪೋಟೋ ಅಳತೆಯ ಭಾವ ಚಿತ್ರ–2, ಬ್ಯಾಂಕ್ ಪಾಸ್ ಪುಸ್ತಕ ಹಾಗು ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈದ್ಯರಿಂದ ಪಡೆದ ಗುರುತಿನ ಚೀಟಿ/ಯು.ಡಿ.ಎ. ಕಾರ್ಡ, ಮನೆಯ ಮೇಲ್ಛಾವಣೆ ಛಾಯಾ ಚಿತ್ರ./ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಜಾಗದ ಛಾಯಾಚಿತ್ರ, ಮೊಬೈಲ್ ನಂಬರ್‌ನೊಂದಿಗೆ ಜುಲೈ 31ರ ಸಂಜೆ 5 ಗಂಟೆಯೊಳಗಾಗಿ ಅಗತ್ಯ ದಾಖಲಾತಿಗಳು ಕಡ್ಡಾಯವಾಗಿ ನಿಗದಿತ ದಿನಾಂಕ ಒಳಗಡೆ ಸಲ್ಲಿಸಬಹುದಾಗಿದೆ.

# ಜಿಲ್ಲೆಯಲ್ಲಿನ ಕೆರೆಗಳ ಅಭಿವೃದ್ಧಿಗೆ ಕ್ರಮ : ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.24-ಜಿಲ್ಲೆಯ ಗ್ರಾಮೀಣ ಮತ್ತು ನಗರ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು ಅಭಿವೃದ್ಧಿಪಡಿಸಿ ಪುನರುಜ್ಜೀವನಗೊಳಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಗರಾಭಿವೃದ್ಧಿ ಪ್ರಾಧಿಕಾರ, ಯೋಜನಾ ಪ್ರಾಧಿಕಾರ, ಪುರಸಭಾ ಯೋಜನಾ ಪ್ರಾಧಿಕಾರಗಳ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯಡಿ ಕೆರೆಗಳ ಪುನರುಜ್ಜೀವನ ಶುಲ್ಕ ವಿನಿಯೋಗ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೆರೆಗಳ ಪುನರುಜ್ಜೀವನ ಕಾಮಗಾರಿಗಳನ್ನು ತ್ವರಿತವಾಗಿ ಹಾಗೂ ಸುಗಮವಾಗಿ ಕೈಗೆತ್ತಿಕೊಳ್ಳಲು ಜಿಲ್ಲಾ ಮಟ್ಟದಲ್ಲಿ ಏಕ ಗವಾಕ್ಷಿ ಸಮಿತಿಯನ್ನು ರಚಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಒಟ್ಟು 268 ಕೆರೆಗಳು ಇದ್ದು, ಅದರಲ್ಲಿ 148 ಕೆರೆಗಳು ಗ್ರಾಮೀಣ ವ್ಯಾಪ್ತಿಯಲ್ಲಿ 68 ಕೆರೆಗಳು ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಹಾಗೂ 9 ಕೆರೆಗಳು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುತ್ತವೆ. ಮುಖ್ಯವಾಗಿ ಮುಚಖಂಡಿ ಹಾಗೂ ಮಲ್ಲಾಪೂರ ಕೆರೆಗಳನ್ನು ಅಭಿವೃದ್ಧಿ ಪಡಿಸಿದಲ್ಲಿ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಜುಲೈ 27 ರಂದು ನಾನೇ ಸ್ವತಃ ಭೇಟಿ ನೀಡಿ ಪರಿಶೀಲನೆ ನಡೆಸುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

### ಶೀಘ್ರದಲ್ಲಿ ಬೋಟಿಂಗ್

ಜಿಲ್ಲೆಯ ಪ್ರಸಿದ್ದ ಮುಚಖಂಡಿ ಕೆರೆಗೆ ನೀರು ತುಂಬಿಸಲು ಕ್ರಮಕೈಗೊಳ್ಳಲಾಗುತ್ತಿದ್ದು, ಪ್ರವಾಸಿಗರನ್ನು ಆಕರ್ಷಿಸುವ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ವರ್ಷಾಂತದಲ್ಲಿ ಬೋಟಿಂಗ್ ವ್ಯವಸ್ಥೆ ಮಾಡಲಾಗುತ್ತಿದೆ. ಅಲ್ಲದೇ ಬಾದಾಮಿಯ ಅಗಸ್ತ್ಯತೀರ್ಥ ಹೊಂಡದಲ್ಲಿ ಬೋಟಿಂಗ್ ವ್ಯವಸ್ಥೆಗೆ ಕ್ರಮವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು.

ತಡೆ ಬೇಲಿ ನಿರ್ಮಾಣ, ಕೆರೆ ಹೂಳು ತೆಗೆಯುವುದು ಮತ್ತು ಕೆರೆಯ ನೀರಿನ ಸಂಗ್ರಹಣೆ ಹೆಚ್ಚಿಸುವ ನಿಟ್ಟಿನಲ್ಲಿ ಅಂತರ್ಜಲವನ್ನು ಮರುಪೂರ್ಣಗೊಳಿಸುವುದು, ಕೆರೆ ಒತ್ತುವರಿ ತಡೆಯಲು ಅಗತ್ಯ ಗಿಡ ಮರಗಳನ್ನು ಕೆರೆಯ ದಂಡೆಗಳಲ್ಲಿ ಬೆಳೆಸುವುದು, ಕೆರೆ ನೀರಿನ ಶುದ್ದೀಕರಣ, ನೀರಿನ ಗುಣಮಟ್ಟವನ್ನು ಸುಧಾರಿಸುವ, ಕೊಳಚೆ ನೀರು ಕೆರೆಗೆ ಸೇರದಂತೆ ತಡೆಯುವ ಕಾಮಗಾರಿ, ವಾಯು ವಿಹಾರಕ್ಕೆ ಅಗತ್ಯವಿರುವ ಪಾದಚಾರಿ ಮಾರ್ಗ, ಪ್ರವಾಸೋದ್ಯಮ ಉತ್ತೇಜಿಸುವ ಕಾಮಗಾರಿಗಳು ಸೇರಿದಂತೆ ಇತರೆ ಕಾಮಗಾರಿಗಳನ್ನು ಕೈಗೊಳ್ಳಲು ವಿವಿಧ ಸ್ಥಳೀಯ ಸಂಸ್ಥೆ, ಪ್ರಾಧಿಕಾರಗಳಿಗೆ ಸಂಗಪ್ಪ ತಿಳಿಸಿದರು.

ಬಾದಾಮಿ ಅಗಸ್ತ್ಯ ತೀರ್ಥ ಹೊಂಡಲ್ಲಿರುವ ಭೂತನಾಥ ದೇವಸ್ಥಾನಕ್ಕೆ ತೆರಳಲು ಒಂದು ಕಡೆ ಮಾತ್ರ ದಾರಿ ಇದ್ದು, ಇನ್ನೊಂದು ಕಡೆಯಲ್ಲಿ ಪ್ರವಾಸಿಗರು ತೆರಳಲು ಅನುಕೂಲವಾಗುವ ನಿಟ್ಟನಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಇದಕ್ಕಾಗಿ ಭಾರತೀಯ ಪುರಾತತ್ವ ಇಲಾಖೆಯಿಂದ ಅನುಮತಿಗಾಗಿ ಪತ್ರ ಬರೆಯಲಾಗಿದ್ದು, ಅನುಮತಿ ಬೇಗ ದೊರೆಯುವುದಕ್ಕೆ ಪ್ರಯತ್ನಿಸಲಾಗುತ್ತಿದೆ ಎಂದು ಪುರಾತತ್ವ ಇಲಾಖೆಯ ಮೂಲಿಮನಿ ಸಭೆಗೆ ತಿಳಿಸಿದರು.

ಕೆರೆ ಸಂರಕ್ಷಣೆ ಹಾಗೂ ಪುನರುಜ್ಜೀವನ ಕಾಮಗಾರಿಗಳನ್ನು ಕೆಟಿಪಿಪಿ ಕಾಯ್ದೆ ಹಾಗೂ ಇತರೆ ನಿಯಮಗಳ ಅನುಸಾರ ಎಲ್ಲ ಪ್ರಕ್ರಿಯೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದೆಂದು ಜಿಲ್ಲಾಧಿಕಾರಿ ಸೂಚನೆ ನೀಡಿದರು. ಕೆರೆಯ ಪುನರುಜ್ಜೀವನದ ಶುಲ್ಕದ ಹಣ ಸದುಪಯೋಗವಾಗಬೇಕು. ಯಾವುದೇ ಕಾರಣಕ್ಕೂ ದುರ್ಬಳಕೆಯಾಗದಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಪಿ.ರುಥ್ರೇನ್, ಜಿಲ್ಲಾ ಭೂ ದಾಖಲೆ ಇಲಾಖೆಯ ಉಪ ನಿರ್ದೇಶಕ ರವಿಕುಮಾರ, ಜಿಲ್ಲಾ ಪ್ರವಾಸೋದ್ಯಮ ಇಲಖೆಯ ಉಪನಿರ್ದೇಶಕ ಜಿ.ಎಸ್.ಹಿತ್ತಲಮನಿ, ಸಣ್ಣ ನೀರಾವರಿ ಇಲಾಖೆಯ ಕಾರ್ಯಪಾಲಕ ಅಭಿಯಂತರರು ಸೇರಿದಂತೆ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಉಪಸ್ಥಿತರಿದ್ದರು.

'ನಮ್ಮ ಕ್ಲಿನಿಕ್' ಉದ್ಘಾಟಿಸಿದ ಶಾಸಕ ನಾರಾ ಭರತ್ ರೆಡ್ಡಿ

# ಸಾಮಾನ್ಯ ರೋಗಿಗಳಿಗೆ ಸ್ಥಳೀಯವಾಗಿ ಚಿಕಿತ್ಸೆ ಪಡೆಯಲು ಸಹಕಾರಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.24-ನಗರ ಪ್ರದೇಶ ವ್ಯಾಪ್ತಿಯ ಜನವಸತಿ ಪ್ರದೇಶದಲ್ಲಿ 'ನಮ್ಮ ಕ್ಲಿನಿಕ್' ಸಾರ್ವಜನಿಕರಿಗೆ ಗುಣಮಟ್ಟದ ಸೇವೆಗೆ ಆದ್ಯತೆ ನೀಡಲಿದ್ದು, ಸಾಮಾನ್ಯ ರೋಗಿಗಳಿಗೆ ಸ್ಥಳೀಯವಾಗಿಯೇ ಚಿಕಿತ್ಸೆ ಪಡೆಯಲು ಸಹಕಾರಿಯಾಗಲಿವೆ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕರಿಮಾರೆಮ್ಮ ಕಾಲೋನಿಯಲ್ಲಿ ಆರಂಭಿಸಲಾದ ನೂತನ 'ನಮ್ಮ ಕ್ಲಿನಿಕ್' ಅನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಸಾರ್ವಜನಿಕರು ಆರೋಗ್ಯ ಸಮಸ್ಯೆಗಳಿಗೆ ದೂರದೆಡೆಗೆ ಓಡಾಡಬಾರದು. ನಗರದ ಬಡ, ಆರ್ಥಿಕವಾಗಿ ಹಿಂದುಳಿದ ಸಮುದಾಯದವರಿಗೆ ತಮ್ಮ ವ್ಯಾಪ್ತಿಯಲ್ಲಿ ಉಚಿತವಾಗಿ ಸಮಗ್ರ ಪ್ರಾಥಮಿಕ ಆರೋಗ್ಯ ಸೇವೆಗಳನ್ನು 'ನಮ್ಮ ಕ್ಲಿನಿಕ್'ಗಳಲ್ಲಿ ಒದಗಿಸಲಾಗುತ್ತದೆ. ಮುಂಬರುವ ದಿನಗಳಲ್ಲಿ ಈ ಕಾಲೋನಿಯಲ್ಲಿಯೇ ಸುಮಾರು 5 ಕೋಟಿ ರೂ. ವೆಚ್ಚದ ಸುಸಜ್ಜಿತ ಆಸ್ಪತ್ರೆ ನಿರ್ಮಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾರಮೇಶ್ ಬಾಬು ಅವರು ಮಾತನಾಡಿ, ಬಳ್ಳಾರಿ ಜಿಲ್ಲೆಗೆ 2023-24 ನೇ ಸಾಲಿಗೆ 12 ನಮ್ಮ ಕ್ಲಿನಿಕ್ ಮತ್ತು 2024-25 ನೇ ಸಾಲಿಗೆ ಬಳ್ಳಾರಿ ನಗರದಲ್ಲಿ 06, ಸಿರುಗುಪ್ಪ 01 ಮತ್ತು ಕಂಪ್ಲಿ 01 ಸೇರಿ ಒಟ್ಟು 08 ನಮ್ಮ ಕ್ಲಿನಿಕ್‌ಗಳು ಮಂಜೂರಾಗಿವೆ. ಇಂದು ಬಳ್ಳಾರಿ ನಗರದಲ್ಲಿ 03 ಲೋಕಾರ್ಪಣೆಗೊಂಡಿದ್ದು, ಒಟ್ಟು 20 ನಮ್ಮ ಕ್ಲಿನಿಕ್‌ಗಳು ಬಳ್ಳಾರಿ ಜಿಲ್ಲೆಯಲ್ಲಿ ಸಾರ್ವಜನಿಕರ ಆರೋಗ್ಯ ಸೇವೆಗಳಿಗೆ ಅಣಿಯಾಗುತ್ತಿವೆ. 10 ರಿಂದ 20 ಸಾವಿರ ಜನಸಂಖ್ಯೆಗನುಗುಣವಾಗಿ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು.

ಸೋಮವಾರದಿಂದ ಶನಿವಾರದವರೆಗೆ ನಮ್ಮ ಕ್ಲಿನಿಕ್‌ಗಳಲ್ಲಿ ಸೇವೆಗಳು ಲಭ್ಯವಿದ್ದು, ಇಲ್ಲಿ ಒಬ್ಬ ವೈದ್ಯಾಧಿಕಾರಿ, ನರ್ಸಿಂಗ್ ಸ್ಟಾಫ್, ಲ್ಯಾಬ್ ಟೆಕ್ನಿಷಿಯನ್ ಹಾಗೂ ಡಿ-ದರ್ಜೆ ನೌಕರರು ಇರಲಿದ್ದಾರೆ ಎಂದು ಹೇಳಿದರು.

ನಂತರ ನಗರದ ಶ್ರೀರಾಂಪುರ ಕಾಲೋನಿ, ಎ.ಪಿ.ಎಮ್.ಸಿ ಮಾರುಕಟ್ಟೆ ವ್ಯಾಪ್ತಿಯಲ್ಲಿ ಸೇರಿದಂತೆ ಒಟ್ಟು 3 'ನಮ್ಮ ಕ್ಲಿನಿಕ್' ಗಳನ್ನು ಉದ್ಘಾಟಿಸಲಾಯಿತು.

**ಅನಿಸಿಕೆ:**

ಸಣ್ಣ-ಪುಟ್ಟ ಆರೋಗ್ಯ ಸಮಸ್ಯೆಗಳಿಗೆ ನಗರದ ಆರೋಗ್ಯ ಕೇಂದ್ರಗಳಿಗೆ ಹೋಗುತ್ತಿದ್ದೇವು. ಈಗ ನಮ್ಮ ಏರಿಯಾದಲ್ಲಿ 'ನಮ್ಮ ಕ್ಲಿನಿಕ್' ಆರಂಭವಾಗಿರುವುದರಿಂದ ತುಂಬಾ ಸಂತೋಷವಾಗುತ್ತಿದೆ. ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತೇನೆ.

-ಚಂದ್ರಕಲಾ, ನಿವಾಸಿ, ಕರಿಮಾರೆಮ್ಮ ಕಾಲೋನಿ, ಬಳ್ಳಾರಿ ನಗರ.

ಹಲವಾರು ದಿನಗಳಿಂದ ನೆನೆಗುದಿಗೆ ಬಿದ್ದಿದ್ದ ಕಟ್ಟಡವನ್ನು ಉದ್ಘಾಟನೆಗೊಳಿಸಿದ್ದಾರೆ. ನಮ್ಮ ಕಾಲೋನಿಯಲ್ಲಿಯೇ ಇರುವುದರಿಂದ ಸಣ್ಣ-ಪುಟ್ಟ ಆರೋಗ್ಯ ಸಮಸ್ಯೆಗಳಿಗೆ ತುಂಬಾ ಅನುಕೂಲವಾಗಲಿದೆ.

-ಚಾಂದಿನಿ, ನಿವಾಸಿ, ಕರಿಮಾರೆಮ್ಮ ಕಾಲೋನಿ, ಬಳ್ಳಾರಿ ನಗರ.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಸದಸ್ಯ ಮಿಂಚು ಶ್ರೀನಿವಾಸ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರಕುಮಾರ್, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ ಸೇರಿದಂತೆ ನಮ್ಮ ಕ್ಲಿನಿಕ್‌ಗಳ ವೈದ್ಯಾಧಿಕಾರಿಗಳು, ಸಿಬ್ಬಂದಿ ವರ್ಗ ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ದೇಹದಷ್ಟೇ ಮನಸ್ಸಿನ ಆರೋಗ್ಯವೂ ಮುಖ್ಯ-ಪ್ರೊ.ಮಾಳವಿಕಾ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.24-ಪ್ರಸ್ತುತ ದಿನಮಾನಗಳಲ್ಲಿ ಮಕ್ಕಳು ಮಾನಸಿಕವಾಗಿ ಬಳಲುತ್ತಿದ್ದು ಈ ಬಗ್ಗೆ ಗಮನಹರಿಸಬೇಕಾದ ಅಗತ್ಯವಿದೆ. ದೇಹದಷ್ಟೇ ಮನಸ್ಸಿನ ಆರೋಗ್ಯ ಕೂಡ ಬಹುಮುಖ್ಯವಾಗಿದೆ ಎಂದು ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ ಸಂದರ್ಶಕ ಪ್ರಾಧ್ಯಾಪಕಿ ಮಾಳವಿಕಾ ಕಪೂರ ಅಭಿಪ್ರಾಯಪಟ್ಟರು.

ನಗರದ ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಅತಿಥಿ ಉಪನ್ಯಾಸ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು, ಅಟೆನ್ಷನ್ ಡಿಫಿಸಿಟ್ ಹೈಪರ್ಆಕ್ಟಿವಿಟಿ ಡಿಸಾರ್ಡರ್ (ಎ.ಡಿ.ಎಚ್.ಡಿ) ಎನ್ನುವುದು ಮಕ್ಕಳ ಮೇಲೆ ಪರಿಣಾಮ ಬೀರುವ ಅತ್ಯಂತ ಸಾಮಾನ್ಯ ಮಾನಸಿಕ ಅಸ್ವಸ್ಥತೆಯಾಗಿದೆ. ಕಾಯಿಲೆಯನ್ನು ಗಂಭೀರವಾಗಿ ಪರಿಗಣಿಸದಿದ್ದರೆ ಮಕ್ಕಳ ಸಾಮಾಜಿಕ ಬದುಕಿನಲ್ಲಿ ವೈಪರಿತ್ಯಗಳು ತಲೆದೋರುತ್ತವೆ. ಭವಿಷ್ಯದ ಆರೋಗ್ಯವಂತ ನಾಗರಿಕರನ್ನು ರೂಪಿಸುವ ದಿಸೆಯಲ್ಲಿ ಎ.ಡಿ.ಎಚ್.ಡಿ ಅಂತಹ ಕಾಯಿಲೆಯನ್ನು ಗುರುತಿಸಿ ಗುಣಪಡಿಸುವ ಜವಾಬ್ದಾರಿ ಮಾನಸಿಕ ತಜ್ಞರ ಮೇಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರೊ. ಮಾಳವಿಕಾ ಕಪೂರ ಅವರ 'ಮಲ್ಟಿಲಿಂಗ್ವಲಿಸಂ ಇನ್ ಚಿಲ್ಡ್ರನ್ -ಎ ಮಾರ್ವೆಲ್, ಎ ಮಿರಾಕಲ್, ಅಂಡ್ ಯೆಟ್ ಎ ಮಿಸ್ಟರಿ' ಹೆಸರಿನ ಹೊಸ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

ವೈದ್ಯಕೀಯ ಮಹಾವಿದ್ಯಾಲಯದ ವತಿಯಿಂದ ಮಾಳವಿಕಾ ಅವರನ್ನು ಸನ್ಮಾನಿಸಲಾಯಿತು.

ಉಪನ್ಯಾಸದ ನಂತರ ಸಂವಾದವನ್ನು ಆಯೋಜಿಸಲಾಗಿತ್ತು. ಡಾ.ನಾರಾಯಣ ಮುತಾಲಿಕ ಸ್ವಾಗತಿಸಿದರು. ಡಾ.ಸುಷ್ಮಾ ಇನಾಮದಾರ್ ಪರಿಚಯಿಸಿದರು. ಡಾ.ಹರೀಶ್ ಕುಲಕರ್ಣಿ ವಂದಿಸಿದರು.

ಉಪನ್ಯಾಸ ಕಾರ್ಯಕ್ರಮದಲ್ಲಿ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಮಾನಸಿಕ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ.ನಾರಾಯಣ ಮುತಾಲಿಕ್, ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಅಶೋಕ ಬಡಕಲಿ, ವಿವಿಧ ವಿಭಾಗಗಳ ಮುಖ್ಯಸ್ಥರು, ವೈದ್ಯರು, ಸಜ್ಜಲಶ್ರೀ ನರ್ಸಿಂಗ್ ಕಾಲೇಜಿನ ಬೋಧಕರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಾವ್ಯ ಸ್ಪರ್ಧೆಗೆ ಕವನಗಳ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.24-ಜಿಲ್ಲೆಯ ಹುನಗುಂದ ನಗರದ ಸಂಗಮ ಪ್ರತಿಷ್ಠಾನದ 2025 ರ ವಾರ್ಷಿಕ ಕಾರ್ಯಕ್ರಮ ಸಂಗಮ ಸಾಹಿತ್ಯ ಸಂಭ್ರಮ ನಿಮಿತ್ತ ತಾಲೂಕು ಮಟ್ಟದ ಕವಿತಾ ಸ್ಪರ್ಧೆಗೆ ಕವನಗಳನ್ನು ಆಹ್ವಾನ ಮಾಡಿದೆ. ಕವಿತೆ ಸ್ವತಂತ್ರವಾಗಿದ್ದು ಅಪ್ರಕಟಿತ ಆಗಿರಬೇಕು.

1000 ರೂ. ಪ್ರಥಮ, 750 ರೂ. ದ್ವಿತೀಯ ಮತ್ತು 500 ರೂ.ನಗದು ಬಹುಮಾನವಿದ್ದು, ಉತ್ತಮ ಕವನ ಸಂಕಲನ ಸೇರಿ ಮೂರು ಬಹುಮಾನಗಳಿವೆ.

ಕವನಗಳನ್ನು ಆಗಸ್ಟ್ 30 ರೊಳಗೆ ಸಿದ್ದಲಿಂಗಪ್ಪ ಬೀಳಗಿ, ನಿವೃತ್ತ ಉಪನ್ಯಾಸಕರು, ಮಹಾಂತನಗರ ಹುನಗುಂದ-587118 ಇವರಿಗೆ ಲಿಖಿತವಾಗಿ ಸಲ್ಲಿಸಬಹುದಲ್ಲದೇ 9448541356(ಸಿದ್ದಲಿಂಗಪ್ಪ ಬೀಳಗಿ) ಅಥವಾ 9448518526 (ಎಸ್ಕೆ ಕೊನೆಸಾಗರ) ಈ ಮೊಬೈಲ್ ನಂಬರ್‌ಗಳಿಗೆ ವಾಟ್ಸಪ್ ಮೂಲಕವೂ ಕಳಿಸಬಹುದು ಎಂದು ಸಂಗಮ ಪ್ರತಿಷ್ಠಾನದ ಸಂಚಾಲಕ ಎಸ್.ಕೆ.ಕೊನೆಸಾಗರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಣ್ಣೆ ಕಾಳು ಕೊಯ್ಲೋತ್ತರ ಘಟಕಕ್ಕೆ ನೆರವು ವಿತರಿಸಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 24-ಇಲ್ಲಿನ ಜಂಟಿ ಕೃಷಿ ನಿರ್ದೇಶಕರ ಕಾರ್ಯಾಲಯದಿಂದ 2025-26ನೇ ಸಾಲಿನ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನದ ಎಣ್ಣೆ ಕಾಳು (ಎನ್‌ಎಂಇಒ-ಒಎಸ್) ಯೋಜನೆಯಡಿ ಎಣ್ಣೆ ಕಾಳು ಕೊಯ್ಲೋತ್ತರ ಘಟಕಕ್ಕೆ ನೆರವು ವಿತರಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ಖಾದ್ಯ ತೈಲ ಅಭಿಯಾನದ ಎಣ್ಣೆ ಕಾಳು ಯೋಜನೆಯಡಿ ಪ್ರಾಥಮಿಕ ಮತ್ತು ದ್ವಿತೀಯ ಎಣ್ಣೆ ಕಾಳು ಕೊಯ್ಲೋತ್ತರ ಘಟಕಕ್ಕೆ ಮೂಲ ಸೌಕರ್ಯ ಕಲ್ಪಿಸಲು, ಸ್ಥಳೀಯವಾಗಿ ಉದ್ಯೋಗಾವಕಾಶ ಕಲ್ಪಿಸಲು, ಶುದ್ಧ ಖಾದ್ಯ ತೈಲ ಉಪಯೋಗಿಸಲು ಅನುಕೂಲವಾಗುವಂತೆ ಹಾಗೂ ಎಣ್ಣೆ ಕಾಳು ಬೆಳೆಗಳನ್ನು ಉತ್ತೇಜಿಸಲು ಈ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ.

ಯೋಜನಾ ವರದಿಯ ಶೇ.33ರಷ್ಟು ಅಥವಾ 9.99 ಲಕ್ಷ ರೂ. ಮೀರದಂತೆ ಸಹಾಯಧನ ಒದಗಿಸಲಾಗುವುದು. ಎಣ್ಣೆ ಕಾಳು ಕೊಯ್ಲೋತ್ತರ ಘಟಕಗಳಿಗೆ ಅವಶ್ಯವಿರುವ ಯಂತ್ರೋಪಕರಣ ಖರೀದಿಸಲು ಸರಕಾರ ಹಾಗೂ ಸರಕಾರೇತರ ಸಂಸ್ಥೆಗಳು, ರೈತ ಉತ್ಪಾದಕ ಸಂಘಗಳು ವಿಸ್ತೃತ ಯೋಜನಾ ವರದಿಯೊಂದಿಗೆ ಜುಲೈ 31ರೊಳಗಾಗಿ ಅರ್ಜಿಯನ್ನು ಜಂಟಿ ಕೃಷಿ ನಿರ್ದೇಶಕರ ಕಚೇರಿ ರಾಯಚೂರಿನಲ್ಲಿ ಸಲ್ಲಿಸಬಹುದಾಗಿದೆ.

ಈ ಘಟಕದಲ್ಲಿ ಕಟ್ಟಡ ವೆಚ್ಚ ಮತ್ತು ಭೂಮಿ ಬಾಡಿಗೆ ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅಧ್ಯಕ್ಷತೆಯಲ್ಲಿ ಪರಿಶೀಲಿಸಿ, ಅರ್ಹ ಫಲಾನುಭವಿಯನ್ನು ಕಾರ್ಯಕಾರಿ ಸಮಿತಿಯಲ್ಲಿ ಆಯ್ಕೆ ಮಾಡಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.24-ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯ-ಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ಮಂತ್ರಾಲಯದಿಂದ ರಸ್ತೆ ಮೂಲಕ ಜುಲೈ 30 ರಂದು ಬುಧವಾರ ಸಂಜೆ 4.30 ಗಂಟೆಗೆ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು. ಜುಲೈ 31 ರಂದು ಗುರುವಾರ ಬೆಳಿಗ್ಗೆ 9.30 ಗಂಟೆಗೆ ಕಲಬುರಗಿಯ ವೈದ್ಯಕೀಯ ವಿಜ್ಞಾನಗಳ ಆಸ್ಪತ್ರೆಗೆ ಭೇಟಿ ನೀಡಿ ಕಾಮಗಾರಿಗಳನ್ನು ಪರಿಶೀಲನೆ ನಡೆಸುವರು. ಬೆಳಿಗ್ಗೆ 11 ಗಂಟೆಗೆ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಭಾಗವಹಿಸುವರು. ಮಧ್ಯಾಹ್ನ 2 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 3 ಗಂಟೆಗೆ ಕಲಬುರಗಿ ಐವಾನ್ ಶಾಹಿ ಅತಿಥಿ ಗೃಹದಲ್ಲಿ ಮಹಿಳೆಯರಿಂದ ಅಹವಾಲು ಸ್ವೀಕರಿಸುವರು. ನಂತರ ಅಂದು ರಾತ್ರಿ 9 ಗಂಟೆಗೆ ಕಲಬುರಗಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ನೌಕರರ ಸಂಘಕ್ಕೆ ಡಾ.ಗಾಳಿ ನಿರ್ದೇಶಕ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.24-ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಬಾಗಲಕೋಟೆ ಜಿಲ್ಲಾ ಘಟಕಕ್ಕೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಅವರನ್ನು ನಾಮನಿರ್ದೇಶಿತ ನಿರ್ದೇಶಕರನ್ನಾಗಿ ನೇಮಕ ಮಾಡಲಾಗಿದೆ.

ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ ಡಾ.ಅರುಣಕುಮಾರ ಗಾಳಿ ಅವರನ್ನು ನೇಮಕ ಮಾಡಿ ಆದೇಶ ಪತ್ರ ನೀಡಿದ್ದಾರೆ. ಡಾ.ಗಾಳಿ ಅವರನ್ನು ಕೆ.ಜಿ.ಸಿ.ಟಿ.ಎ ವಲಯ ಅಧ್ಯಕ್ಷ ಡಾ.ನೀಲಪ್ಪ ಹೊಸಮನಿ, ಹಡಲಗೇರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಶರಣಗೌಡ ಪಾಟೀಲ ಅಭಿನಂದಿಸಿದ್ದಾರೆ.

# ಜು.27 ಬಸವೇಶ್ವರ ಸಹಕಾರಿ ಬ್ಯಾಂಕಿನ ವಾರ್ಷಿಕ ಮಹಾಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.24-ನಗರದ ಬಸವೇಶ್ವರ ಸಹಕಾರಿ ಬ್ಯಾಂಕಿನ 2024-25ನೇ ಸಾಲಿನ 108ನೇ ವಾರ್ಷಿಕ ಸರ್ವಸಾಧಾರಣ ಸಭೆ ಜುಲೈ 27 ಸಾಯಂಕಾಲ 5.30 ಘಂಟೆಗೆ ನವನಗರದ ಬಸವೇಶ್ವರ ಸಹಕಾರಿ ಬ್ಯಾಂಕಿನ ಆವರಣದಲ್ಲಿರುವ ಬಸವ ಕಲಾ ವೇದಿಕೆಯಲ್ಲಿ ಜರುಗಲಿದೆ.

ಬ್ಯಾಂಕಿನ ಅಧ್ಯಕ್ಷ ಪ್ರಕಾಶ ತಪಶೆಟ್ಟಿ ಅಧ್ಯಕ್ಷತೆಯಲ್ಲಿ ಜರುಗುವ ಈ ಮಹಾಸಭೆಗೆ ಸರ್ವ ಸದಸ್ಯರು ವೇಳೆಗೆ ಸರಿಯಾಗಿ ಹಾಜರಿರಬೇಕು ಎಂದು ಬ್ಯಾಂಕಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿವೇಕಾನಂದ ಕೇಮಾಳಿ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

'ಅಮ್ಮ ಎಂದರೆ ಕಡಲು' ಕೃತಿ ಬಿಡುಗಡೆ

# ಬರಹದಲ್ಲಿ ಬದಲಾವಣೆಯ ಶಕ್ತಿಯಿದೆ-ಲಲಿತಾ ಹೊಸಪ್ಯಾಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.24-ಕಥೆಗಳು ಕಾಲ್ಪನಿಕವಾಗಿದ್ದರೂ ಅದರಲ್ಲಿ ನೈಜತೆ ಇರಬೇಕು. ಓದುಗರ ಮನೆ-ಮನ ಮುಟ್ಟುವಂತಿರಬೇಕು. ಸಮಾಜದಲ್ಲಿ ಇರುವ ಅಸಮಾಧಾನ, ದ್ವೇಷ, ಅಸೂಯೆ, ಮೂಢನಂಬಿಕೆ ಹೀಗೆ ಹಲವು ಅನಿಷ್ಠತೆಗಳಿಗೆ ಬದಲಾವಣೆ ತರುವ ಶಕ್ತಿ ಲೇಖಕರ ಬರಹಕ್ಕಿದೆ. ಅಂತಹ ಬರಹಗಳು ಯಶಸ್ವಿಯಾಗುತ್ತವೆ ಎಂದು ಲೇಖಕಿಯರ ಸಂಘದ ಜಿಲ್ಲಾ ಅಧ್ಯಕ್ಷೆ ಡಾ.ಲಲಿತಾ ಹೊಸಪ್ಯಾಟಿ ಹೇಳಿದರು.

ನವನಗರದ ಪತ್ರಿಕಾ ಭವನದಲ್ಲಿ ಅಮೀನಗಡದ ಪತ್ರಕರ್ತ ಹಸನಡೋಂಗ್ರಿ ಬೇಪಾರಿ ಅವರ 3ನೇ ಕೃತಿ 'ಅಮ್ಮ ಎಂದರೆ ಕಡಲು' ಕಥಾ ಸಂಕಲನ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ,

ಕುಟುಂಬ ಸಂಬಂಧಗಳು ಇಂದು ಸಡಿಲಗೊಳ್ಳುತ್ತಿವೆ. ಅವಿಭಕ್ತ ಕುಟುಂಬಗಳು ಮಾಯವಾಗುತ್ತಿವೆ. ಒಂದೇ ಕುಟುಂಬದಲ್ಲಿದ್ದರೂ ಮನಸ್ಥಿತಿಗಳು ಬೇರೆ ಬೇರೆ ಆಗಿರುತ್ತವೆ. ಅಂತಹ ಕುಟುಂಬಗಳನ್ನು ಬೆಸೆಯುವ ಮೂಲಕ ಮನಸ್ಥಿತಿಯನ್ನು ಬದಲಾಯಿಸುವ ಶಕ್ತಿಯನ್ನು ಬರಹಗಳು ಹೊಂದಿರಬೇಕು ಎಂದರು.

ಕಥೆಗಾರನಿಗೆ ನಿರೂಪಣಾ ಶೈಲಿ ಮುಖ್ಯ. ಬೇಪಾರಿಯವರು ಪತ್ರಕರ್ತರಾಗಿ, ಸಾಹಿತ್ಯಕ್ಷೇತ್ರದಲ್ಲೂ ಸೃಜನಶೀಲತೆಯಿಂದ ಬರೆಯಲು ಆರಂಭಿಸಿದ್ದಾರೆ. ಜಿಲ್ಲೆಯ ಕಥೆಗಾರರ ಸಾಲಿಗೆ ಹೊಸದಾಗಿ ಸೇರ್ಪಡೆಯಾಗಿದ್ದಾರೆ. ಅವರ ಸಾಹಿತ್ಯ ಕೃಷಿ ಇನ್ನಷ್ಟು ಬೆಳೆಯಲಿ ಎಂದು ಲಲಿತಾ ಹೊಸಪ್ಯಾಟಿ ಹಾರೈಸಿದರು.

ಇಳಕಲ್ಲಿನ ಹಿರಿಯ ಸಾಹಿತಿ ಡಾ.ಎಂ.ಬಿ.ಒಚಿಟಿ ಮಾತನಾಡಿ, ಬೇಪಾರಿ ಅವರು ವೃತ್ತಿಯಿಂದ ಪತ್ರಕರ್ತರಾಗಿದ್ದರೂ, ಪ್ರವೃತ್ತಿಯಿಂದ ಲೇಖಕರಾಗಿ ಗುರುತಿಸಿಕೊಂಡಿದ್ದಾರೆ. ಅವರ ಅಮ್ಮ ಎಂಬ ಕಡಲು ಈ ಕಥಾ ಸಂಕಲನವು ಮಾನವೀಯ ಸಂಬಂಧ ಬೆಸೆಯುವ ಕಥೆಗಳನ್ನು ಒಳಗೊಂಡಿದೆ. ಜನಸಾಮಾನ್ಯರು ಓದಿ ಅರ್ಥೈಸಿಕೊಳ್ಳುವ ಸುಂದರವಾದ ಭಾಷೆಯಲ್ಲಿ ಅಭಿವ್ಯಕ್ತವಾಗಿವೆ ಎಂದು ಹೇಳಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಮಹಾದೇವ ಬಸರಕೋಡ ಮಾತನಾಡಿ, ಕನ್ನಡ ಸಾಹಿತ್ಯ ಲೋಕದಲ್ಲಿ ಕಥಾ ಪರಂಪರಗೆ ತನ್ನದೇ ವೈಶಿಷ್ಠತೆ ಇದೆ. ಸಾಮಾಜಿಕ ಸಮಸ್ಯೆಗಳ ಆಳ-ಅಗಲವನ್ನು ಅರ್ಥೈಯಿಸಿಕೊಳ್ಳುವಲ್ಲಿ ಮತ್ತು ಧ್ವನಿ ಪೂರ್ಣ ಪರಿಹಾರ ನೀಡುವಲ್ಲಿ ಕಥೆಗಳ ಪಾತ್ರ ಹಿರಿದು. ಇಂತಹ ಕಥೆಗಳನ್ನು ಕಟ್ಟಿಕೊಡುವ ಮೂಲಕ ಕಥಾಲೊಕಕ್ಕೆ ಲೇಖಕ ಮಿತ್ರ ಹಸನ್ ಪ್ರವೇಶಿಸಿದ್ದು ಹೆಮ್ಮೆಯ ಸಂಗತಿಯಾಗಿದೆ. ಸೃಜನಶೀಲತೆಯ ಹಾದಿಯಲ್ಲಿನ ಅವರ ಹೊಸ ಪಯಣ ಯಶಸ್ಸು ಕಾಣಲಿ ಎಂದರು.

ಕಥಾ ಸಂಕಲನವನ್ನು ಹಿರಿಯ ಸಾಹಿತಿ ಡಾ.ಪ್ರಕಾಶ ಖಾಡೆ ಬಿಡುಗಡೆಗೊಳಿಸಿದರು. ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಆರ್.ಜಿ.ಸನ್ನಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪತ್ರಕರ್ತ ಶ್ರೀಶೈಲ ಕೆ. ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮ ನಿರೂಪಿಸಿದರು. ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ಮಹೇಶ ಅಂಗಡಿ ಲೇಖಕ ಬೇಪಾರಿ ಅವರನ್ನು

# ಜಿಲ್ಲಾಧಿಕಾರಿಗಳು ವಿವಿಧ ಕ್ರಿಯಾ ಯೋಜನೆಗಳಿಗೆ ಅನುಮೋದನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.24-2025-26ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ಪರಂಪರಾಗತ ಕೃಷಿ ವಿಕಾಸ ಯೋಜನೆ ಮತ್ತು ತೋಟಗಾರಿಕೆಯಲ್ಲಿ ಯಾಂತ್ರೀಕರಣ ಯೋಜನೆ ಸೇರಿದಂತೆ ಮತ್ತಿತರ ಯೋಜನೆಯ ಅನುಷ್ಠಾನಕ್ಕಾಗಿ ಕ್ರಿಯಾ ಯೋಜನೆಗಳಿಗೆ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನುಮ್ ಅವರು ಅನುಮೋದನೆ ನೀಡಿದರು.

ಗುರುವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು, ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳಡಿ ನಿಗದಿಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿಗಳನ್ನು ಪರಿಶೀಲಿಸಿ ಪ್ರಸಕ್ತ ಸಾಲಿನ ಗುರಿಗಳನ್ನು ಅಕ್ಟೋಬರ್-ನವೆಂಬರ್ ಮಾಹೆಯ ಅಂತ್ಯದವರೆಗೆ ಪೂರ್ಣ ಪ್ರಗತಿ ಸಾಧಿಸಿ ಹೆಚ್ಚುವರಿ ಗುರಿಯನ್ನು ಪಡೆಯಬೇಕೆಂದು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ತಾಲ್ಲೂಕಿಗೆ ಒಂದರಂತೆ ಸಂಬಂಧಪಟ್ಟ ಸ್ಥಳಿಯ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳೊಂದಿಗೆ ಚರ್ಚಿಸಿ ಅವಶ್ಯವಿರುವ ತೋಟಗಾರಿಕೆ ಉತ್ಪನ್ನಗಳ ಮೌಲ್ಯವರ್ಧನೆಗೆ ವಿಸ್ತೃತ ಯೋಜನಾ ವರದಿಗಳನ್ನು ತಯಾರಿಸಿ ತೋಟಗಾರಿಕೆ ನಿರ್ದೇಶನಾಲಯಕ್ಕೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಪರಂಪರಾಗತ ಕೃಷಿ ವಿಕಾಸ ಯೋಜನೆಯಡಿ ಕಲಬುರಗಿ ಮತ್ತು ಚಿಂಚೋಳಿ ತಾಲ್ಲೂಕುಗಳು ಆಯ್ಕೆಯಾಗಿದ್ದು ಹೆಚ್ಚುವರಿಯಾಗಿ 2 ಗುಚ್ಛಗಳನ್ನು ಆಯ್ಕೆಮಾಡಿ ತೋಟಗಾರಿಕೆ ನಿರ್ದೇಶನಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕು ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಕಲಬುರಗಿ (ಜಿ.ಪಂ.) ತೋಟಗಾರಿಕೆ ಉಪನಿರ್ದೇಶಕ ಸಂತೋಷ ಇನಾಮದಾರ್, ಸಣ್ಣ ನೀರಾವರಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ನಾಗನಗೌಡ, ಕೃಷಿ ವಿಜ್ಞಾನಿ ಸನ್ಮಿತಾ, ಹೈದ್ರಾಬಾದ್ ವೇದಿಕ ಸಂಸ್ಥೆಯ ಸುನೀತಾ ಸೇರಿದಂತೆ ವಿವಿಧ ತಾಲೂಕಿನ ತೋಟಗಾರಿ-ಕೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಿ.ಯು.ಕೆ.ನಲ್ಲಿ ಹೊಸದಾಗಿ 7 ಕೋರ್ಸ್ ಪ್ರಾರಂಭಿಸಲು ಅನುಮತಿ

## 2 ಕೋರ್ಸ್ ಈಗಾಗಲೆ ಪ್ರಾರಂಭ,ಉಳಿದವು ಶೀಘ್ರ ಕಾರ್ಯಾರಂಭ:ಪ್ರೊ. ಬಟ್ಟು ಸತ್ಯನಾರಾಯಣ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.24:ಸಮಕಾಲೀನ, ಕೌಶಲ್ಯಆಧಾರಿತಮತ್ತುಆರೋಗ್ಯಕರ ಶಿಕ್ಷಣಕ್ಕೆಬದ್ಧವಾಗಿರುವ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಹೊಸದಾಗಿ 7 ಕೋರ್ಸ್ ಪ್ರಾರಂಭಕ್ಕೆ ಕೇಂದ್ರ ಉನ್ನತ ಶಿಕ್ಷಣ ಸಚಿವಾಲಯ ಅನುಮತಿ ನೀಡಿದೆ ಎಂದು ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟುಸತ್ಯನಾರಾಯಣ ಹೇಳಿದರು.

ಗುರುವಾರ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯದ ಅತಿಥಿಗೃಹದಲ್ಲಿ ಪತ್ರಿಕಾಗೋಷ್ಠಿಉದ್ದೇಶಿಸಿಮಾತನಾಡಿದ ಅವರು, ಮಾಸ್ಟರ್ ಪ್ರೋಗ್ರಾಂ ಇನ್ ಲೈಬ್ರರಿ & ಇರ್ಫಾಮೇಷನ್ ಸೈನ್ಸ್, ಎಂಎಸ್ಸಿ ಸ್ಟ್ಯಾಟಿಸ್ಟಿಕ್ಸ್ & ಡಾಟಾ ಅನಾಲೆಟಿಕ್ಸ್, 5 ವರ್ಷಗಳ ಇಂಟಗ್ರೇಟೆಡ್ ಬಿಎ (ಎಲ್ಎಲ್‌ಬಿ), ಬಿ.ಟೆಕ್ (ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್), ಎಂಟೆಕ್ (ಆರ್ಟಿಫಿಶಿಯಲ್ ಇಂಟಲಿಜೆನ್ಸ್ & ಮಶೀನ್ ಲರ್ನಿಂಗ್), ಎಂಎಸ್ಸಿ (ಜೆನೆಟಿಕ್ಸ್ ಮತ್ತು ಜೀನೋಮಿಕ್ಸ್) ಹಾಗೂ ಎಂಎಸ್ಸಿ ಪ್ಲಾಂಟ್ ಸೈನ್ಸ್ & ಎನಿಮಲ್ ಸೈನ್ಸ್ ವಿಭಾಗವನ್ನು ಹೊಸದಾಗಿ 29 ಜನ ಪ್ರಾಧ್ಯಾಪಕರ ವೃಂದ ಬಲದೊಂದಿಗೆ ತೆರೆಯಲು ಮಂಜೂರಾತಿ ನೀಡಿದೆ ಎಂದರು.

ಇದರಲ್ಲಿ ಈಗಾಗಲೆ ಐದು ವರ್ಷದ ಇಂಟಗ್ರೇಟೆಡ್ ಬಿ.ಎ. ಎಲ್.ಎಲ್.ಬಿ. ಮತ್ತು ಬಿ.ಟೆಕ್ (ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್) ಎರಡು ಕೋರ್ಸ್ ಪ್ರಾರಂಭಿಸಲಾಗಿದೆ. ಇನ್ನುಳಿದ ಕೋರ್ಸ್ ಶೀಘ್ರ ಕಾರ್ಯರಂಭ ಮಾಡಲಿವೆ ಎಂದ ಅವರು, ಈ ಹೊಸ ಕೋರ್ಸ್‌ಗಳು ವಿ.ವಿ.ಯನ್ನು ಶ್ರೇಷ್ಠತಾ ಕೇಂದ್ರ ಮಾಡಲು ನೆರವಾಗಲಿವೆ ಎಂದರು.

ನಾವೀನ್ಯತೆ ಮತ್ತು ಕೌಶಲ್ಯ ಅಭಿವೃದ್ಧಿಯನ್ನುಉತ್ತೇಜಿಸಲು,ಸಿ.ಯು. ಕೆ.ನಲ್ಲಿ ಇನ್ಕ್ಯೂಬೇಷನ್ ಕೇಂದ್ರವನ್ನು ಸ್ಥಾಪಿಸಲಾಗಿದೆ. ಇದು ಯುವ ನಾವೀನ್ಯಕಾರರು ಮತ್ತು ಆವಿಷ್ಕಾರಕರ ಸೃಜನಶೀಲತೆಯನ್ನು ಹೆಚ್ಚಿಸುವ ಟಿಂಕರಿಂಗ್ ಪ್ರಯೋಗಾಲಯವನ್ನು ಹೊಂದಿದೆ. ಇದಲ್ಲದೆ ಇಂಡಸ್ಟ್ರಿಸೆಲ್ ಸ್ಥಾಪಿಸುವ ಮೂಲಕ ಕಂಪನಿಗಳ ಬೇಡಿಕೆ ಅನುಗುಣವಾಗಿ ಇಲ್ಲಿನ ವಿದ್ಯಾರ್ಥಿಗಳಿಗೆ ಕೌಶಲ್ಯ ಶಿಕ್ಷಣ ನೀಡಲಾಗುತ್ತಿದೆ ಎಂದ ಅವರು, ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಉದ್ಯಮಶೀಲತಾ ಅಭಿವೃದ್ಧಿ ಚಟುವಟಿಕೆಗಳನ್ನು ಉತ್ತೇಜಿಸಲು, ಸಿಯುಕೆ ವಾಧ್ವಾನಿ ಫೌಂಡೇಶನ್‌ನ ಸಹಯೋಗದೊಂದಿಗೆಉದ್ಯಮಶೀಲತೆಯ ಕುರಿತು ಸರ್ಟಿಫಿಕೇಟ್ ಕೋರ್ಸ್ ಆಯೋಜಿಸಲುನಿರ್ಧರಿಸಿದೆಎಂದರು.

ರಾಷ್ಟ್ರೀಯ ಶಿಕ್ಷಣ ನೀತಿ–2020ನ್ನು ಅಳವಡಿಸಿಕೊಂಡಿರುವ ವಿ.ವಿ. ಸಂಶೋಧನೆ ಮತ್ತು ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುತ್ತಿದೆ. ಪರಿಣಾಮ ಈ ವರ್ಷ ಸುಮಾರು 16 ಕೋಟಿ ರೂ. ಕ್ಕಿಂತ ಹೆಚ್ಚಿನ ಸಂಶೋಧನಾ ಅನುದಾನವನ್ನು ಪಡೆದಿದೆ. ವಿಶ್ವವಿದ್ಯಾನಿಲಯವು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅನುಸಂಧಾನ ರಾಷ್ಟ್ರೀಯ ಸಂಶೋಧನಾ ಪ್ರತಿಷ್ಠಾನದ ಮೂಲಕ ಪಾಲುದಾರಿಕೆಗಳ ವೇಗವರ್ಧಿತ ಇನ್ನೋವೇಶನ್ ಮತ್ತುಸಂಶೋಧನಾ ಕಾರ್ಯಕ್ರಮದಡಿಯಲ್ಲಿ 11.5 ಕೋಟಿ ರೂ. ಅನುದಾನ ಪಡೆದಿದೆ. ಆರೋಗ್ಯ ಮತ್ತು ವೈದ್ಯಕೀಯ ತಂತ್ರಜ್ಞಾನ ಕ್ಷೇತ್ರದಲ್ಲಿ ಸಂಶೋಧನೆ ಕೈಗೊಳ್ಳಲು ಹೈದರಾಬಾದ್ ಕೇಂದ್ರೀಯ ವಿ.ವಿ.ಯೊಂದಿಗೆ ಸಮಾಲೋಚನೆ ನಡೆಸಿದೆ. ವಿಶ್ವವಿದ್ಯಾಲಯದ ರಸಾಯನಶಾಸ್ತ್ರ ವಿಭಾಗವು ಫಿಸ್ಟ್ ಪ್ರೋಗ್ರಾಮ್‌ನಲ್ಲಿ 1.67 ಕೋಟಿ ರೂ.ಗಳ ಧನಸಹಾಯವನ್ನು ವೈಜ್ಞಾನಿಕ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಪಡೆದುಕೊಂಡಿದೆ. ಅದೇ ರೀತಿ ವಿಶ್ವೇಶ್ವರಯ್ಯ ರಿಸರ್ಚ್ ಸ್ಕೀಮ್‌ನಲ್ಲಿ 3 ಕೋಟಿ ರೂ. ಗಳ ಪ್ರಾಜೆಕ್ಟ್‌ಗಳನ್ನು ಪಡೆದುಕೊಂಡಿದೆ. ವಿಶ್ವವಿದ್ಯಾಲಯದ ಆವರಣವನ್ನು ಸುಸ್ಥಿರ ಆವರಣವನ್ನಾಗಿ ಮಾಡಲು ಪಣತೊಟ್ಟಿದ್ದು, ಇದಕ್ಕಾಗಿ ಎನ್.ಬಿ.ಸಿ.ಸಿ ಎಂಬ ಸಂಸ್ಥೆಯು ತನ್ನ ಸಿ.ಎಸ್. ಆರ್.ನಿಧಿಯಡಿ 1.21 ಕೋಟಿ ರೂ. ಗಳನ್ನು ವಿ.ವಿ.ಗೆ ನೀಡಿದೆ. ಒಟ್ಟಾರೆ ವಿಶ್ವವಿದ್ಯಾಲಯದಲ್ಲಿ ಈಗ 30 ಸಂಶೋಧನಾ ಪ್ರಾಜೆಕ್ಟ್ ಗಳು ಚಾಲ್ತಿಯಲ್ಲಿವೆ ಎಂದು ಕುಲಪತಿಗಳು ತಿಳಿಸಿದರು. ಅಪ್ರೆಂಟಿಸ್ ತರಬೇತಿಗೆ ಜುಲೈ 29ಕ್ಕೆ ಒಪ್ಪಂದಕ್ಕೆ ಸಹಿ: ಉದ್ಯಮ–ಬಾಂಧವ್ಯವನ್ನು ಉತ್ತೇಜಿಸಲು, ವಿಶ್ವವಿದ್ಯಾನಿಲಯವು ಅಪ್ರೆಂಟಿಸ್‌ಶಿಪ್ ಆಧಾರಿತ ಪದವಿ ಕಾರ್ಯಕ್ರಮಗಳನ್ನು ಪ್ರಾರಂಭಿಸುತ್ತಿದೆ. ಇದೇ ಜುಲೈ 29 ರಂದು ನವದೆಹಲಿಯಲ್ಲಿ ಚೆನ್ನೈನ ಅಪ್ರೆಂಟಿಸ್‌ಶಿಪ್ ತರಬೇತಿ ಮಂಡಳಿಯೊಂದಿಗೆ ಒಪ್ಪಂದಕ್ಕೆ ಸಹಿ ಹಾಕಲಿದ್ದೇವೆ ಎಂದು ಪ್ರೊ. ಬಟ್ಟು ಸತ್ಯನಾರಾಯಣ ತಿಳಿಸಿದರು.



ಸಿ.ಯು.ಕೆ ಕ್ಯಾಂಪಸ್‌ನಲ್ಲಿಯೇ ಎಕ್ಸ್‌ಲೆನ್ಸ್ ಸೆಂಟರ್ ಸ್ಥಾಪನೆ:ಸಂಶೋಧನಾ ಪ್ರಯತ್ನ ಮತ್ತು ಬೆಳವಣಿಗೆಯ ತಂತ್ರವಾಗಿ ಕರ್ನಾಟಕದ ಕೇಂದ್ರಿಯ ವಿಶ್ವವಿದ್ಯಾಲಯವು ಬೆಂಗಳೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿದ ಹೈ ಫ್ರೀಕ್ವೆನ್ಸಿ ಎಲೆಕ್ಟ್ರಾನಿಕ್ಸ್ ನಲ್ಲಿ ಶ್ರೇಷ್ಠತೆಯ ಕೇಂದ್ರವನ್ನು ಕೈಬಿಟ್ಟಿದ್ದು, ಕಡಗಂಚಿಯ ಸಿ.ಯು.ಕೆ. ಆವರಣದಲ್ಲಿಯೇ ಈ ಶ್ರೇಷ್ಠತಾ ಕೇಂದ್ರ ತಲೆ ಎತ್ತಲಿದೆ. ದೇಶದ ರಕ್ಷಣಾ ಕಾರ್ಯತಂತ್ರಕ್ಕೆ ಪೂರಕವಾಗಿ ಮಾನವಶಕ್ತಿಯನ್ನು ತರಬೇತಿ ನೀಡುವ ಗುರಿಯನ್ನು ಈ ಕೇಂದ್ರ ಹೊಂದಿದೆ. ಈ ಕೇಂದ್ರದ ಅಡಿಯಲ್ಲಿ ಸಿಯುಕೆ–ಯ ಚಟುವಟಿಕೆಗಳಿಗೆ ಇಸ್ರೋ ಮತ್ತು ಡಿಆರ್‌ಡಿಓ ಸಂಸ್ಥೆಗಳು ತನ್ನ ಬೆಂಬಲವನ್ನು ವ್ಯಕ್ತಪಡಿಸಿವೆ. ಕೀಸೈಟ್ ಟೆಕ್ನಾಲಜೀಸ್‌ನ ಸಹಭಾಗಿತ್ವದಲ್ಲಿ ಶೇ.50–50 ಅನುದಾನದಡಿ 2 ಕೋಟಿ ರೂ. ಕ್ಕಿಂತ ಹೆಚ್ಚಿನ ವೆಚ್ಚದಲ್ಲಿ ಈ ಕೇಂದ್ರ ಸ್ಥಾಪಿಸಲಾಗುತ್ತಿದೆ ಎಂದು ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.

ವಿಶ್ವವಿದ್ಯಾಲಯವು ಸುಮಾರು 60 ಕೋಟಿ ರೂ. ವೆಚ್ಚದಲ್ಲಿ ಸೋಫಿಸಿಕೇಟೆಡ್ ಇನ್ಸ್ಟ್ರುಮೆಂಟೇಶನ್ ಸೆಂಟರ್ ಪ್ರಾರಂಭಿಸಿದ್ದು, ಇದು ಉತ್ತರ ಕರ್ನಾಟಕದಲ್ಲಿಯೇ ಮೊದಲ ಕೇಂದ್ರವಾಗಿದೆ. ಐ.ಐ.ಎಸ್.ಸಿ. ಬಿಟ್ಟರೆ ಕಲಬುರಗಿ ಜಿಲ್ಲೆಯಲ್ಲಿ ಈ ಕೇಂದ್ರವಿದೆ. ಇಲ್ಲಿ 600 ಮೆಗಾ ಹಾರ್ಟ್ ಎನ್‌ಎಂಆರ್, ಹೈ ರೆಸುಲ್ಯೂಷನ್ ಮಾಸ್ ಸ್ಪೆಕ್ಟೋಮೀಟರ್, ಫಿಸಿಕಲ್ ಪ್ರಾಪರ್ಟಿ ಮೆಜರ್ಮೆಂಟ್ ಸಿಸ್ಟಮ್, ಇಂಡಕ್ಟೀವ್ಲಿ ಕಪಲ್ಡ್ ಪ್ಲಾಸ್ಮಾ ಮಾಸ್ ಸ್ಪೆಕ್ಟೋಮೀಟರ್, ಫೀಲ್ಡ್ ಎಮಿಷನ್ ಸ್ಕ್ಯಾನಿಂಗ್ ಎಲೆಕ್ಟ್ರಾನ್ ಮೈಕ್ರೋಸ್ಕೋಪ್, ಸಿಂಗಲ್ ಕ್ರಿಸ್ಟಲ್ ಎಕ್ಸರೇ ಡಿಫ್ರ್ಯಾಕ್ಟೋಮೀಟರ್, ಪೌಡರ್ ಎಕ್ಸರೇ ಡಿಫ್ರ್ಯಾಕ್ಟೋಮೀಟರ್ ನಂತಹ ಅತ್ಯಾಧುನಿಕ ಉಪಕರಣಗಳು ಹೊಂದಿದೆ ಎಂದು ಹೇಳಿದರು.

201.86 ಕೋಟಿ ರೂ. ಬಿಡುಗಡೆ: ಸಕಲ ಮೂಲಸೌಕರ್ಯಗಳಿದ್ದಲ್ಲಿ ಮಾತ್ರ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯ. ಇದನ್ನರಿತ ಕೇಂದ್ರ ಸರ್ಕಾರವು ವಿಶ್ವವಿದ್ಯಾಲಯದಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಶಾಸ್ತ್ರ, ಜೀವಶಾಸ್ತ್ರ ಹಾಗೂ ಗಣಕ ಶಾಸ್ತ್ರ ವಿಭಾಗಗಳ ಕಟ್ಟಡಗಳ ನಿರ್ಮಾಣಕ್ಕೆ, ಸಿಬ್ಬಂದಿಗಳ ವಸತಿ ಗೃಹ ಹಾಗೂ ಬಾಲಕ–ಬಾಲಕೀಯರಿಗೆ ತಲಾ 500 ಹಾಸಿಗೆಗಳ ವಿದ್ಯಾರ್ಥಿಗಳ ವಸತಿಗೃಹ ನಿರ್ಮಾಣಕ್ಕಾಗಿ ಇತ್ತೀಚೆಗೆ 201.86 ಕೋಟಿ ರೂ. ಗಳನ್ನು ಬಿಡುಗಡೆ ಮಾಡಿದೆ. ಆಗಸ್ಟ್ ದೊಳಗೆ ಭೂಮಿ ಪೂಜೆ ನೆರವೇರಿಸಿ ಮುಂದಿನ 2 ವರ್ಷದಲ್ಲಿ ಇದೆಲ್ಲವನ್ನು ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ವಿ.ವಿ.ಯಲ್ಲಿ 175 ಖಾಯಂ ಪ್ರಾಧ್ಯಾಪಕರಿದ್ದು, ಹೊಸದಾಗಿ ಮಂಜೂರಾದ 29 ಮತ್ತು ಬಾಕಿ ಉಳಿದ 34 ಪ್ರಾಧ್ಯಾಪಕರನ್ನು ಶೀಘ್ರವೆ ಭರ್ತಿ ಮಾಡಿಕೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ಚನ್ನವೀರ ಆರ್.ಎಂ., ಹಣಕಾಸು ಅಧಿಕಾರಿ ರಾಮಾದುರೈ, ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಗಣಪತಿ ಬಿ. ಸಿನ್ನೂರ್, ಸಹಾಯಕ ಸಾರ್ವಜನಿಕ ಸಂಪರ್ಕ ಅಧಿಕಾರಿಡಾ. ಪ್ರಕಾಶ್ ಬಾಳಿಕಾಯಿ ಸೇರಿದಂತೆ ಎಲ್ಲಾ ನಿಕಾಯಗಳ ಡೀನರು, ಮುಖ್ಯಸ್ಥರು ಉಪಸ್ಥಿತರಿದ್ದರು.



ಕಲಬುರಗಿ: ಶ್ರಾವಣಮಾಸ ಪ್ರಾರಂಭದ ನಾಗರ ಅಮವಾಸ್ಯೆ ದಿನವಾದ ಗುರುವಾರ ನಗರದ ಶರಣಬಸವೇಶ್ವರ ದೇವಸ್ಥಾನಕ್ಕೆ ಆಗಮಿಸಿದ ಅಸಂಖ್ಯಾತ ಭಕ್ತರು ಸರತಿಯ ಸಾಲಿನಲ್ಲಿ ನಿಂತು ದರ್ಶನ ಪಡೆದರು.

# ಆಧುನಿಕ ಕೃಷಿ ಪದ್ಧತಿಯಿಂದ

## ಹೆಚ್ಚು ಲಾಭ:ಸಿದ್ರಾಮಯ್ಯಾ ಎಸ್.ಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.24 : ಸಮುದಾಯ ಕೃಷಿಪದ್ಧತಿಯನ್ನು ಅಳವಡಿಸಿಕೊಂಡು ರೈತರು ಹೆಚ್ಚೆಚ್ಚು ಬೆಳೆ ಉತ್ಪಾದಿಸಿದರೆ ಆರ್ಥಿಕವಾಗಿಸ್ವಾವಲಂಬಿಗಳಾಗಹುಬುದು ಎಂದು ಬೀದರ ತಾಲ್ಲೂಕ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿಯ ಅಧ್ಯಕ್ಷ ಸಿದ್ರಾಮಯ್ಯಾ.ಎಸ್.ಸ್ವಾಮಿ ಸಲಹೆ ನೀಡಿದರು.




ಅವರು ಇತ್ತೀಚಿಗೆ ಬೀದರ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ವಿವಿಧ ಇಲಾಖೆಯ ಪ್ರಗತಿ ಪರಿಶೀಲನೆ ಹಾಗೂ ಮುಂಗಾರು ಹಂಗಾಮಿನ ಸಿದ್ದತೆಯ ಕುರಿತು ನಡೆಸಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿಯೊಬ್ಬರುತಮ್ಮಸುತ್ತಮುತ್ತಲಿನಲ್ಲಿ ಮರ ಗಿಡಗಳನ್ನು ಬೆಳೆಸಬೇಕು. ರೈತರು ಸಿರಿಧಾನ್ಯ ಬಳಸುವಂತೆ ಮತ್ತು ಅದರ ಮಹತ್ವದ ಬಗ್ಗೆ ಹೆಚ್ಚು ಒತ್ತು ನೀಡಬೇಕು. ಬೆಳೆ ವಿಮೆಗೆ ಇದೇ ತಿಂಗಳು ಅಂ–ದರೆ ಜುಲೈ.31 ನೋದಾಯಿಸುವ ಕೊನೆಯ ದಿನಾಂಕವಾಗಿರುವುದರಿಂದ ಎಲ್ಲಾ ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಬೇಕು. ಸಮಗ್ರ ಕೃಷಿ ಪದ್ಧತಿ ಮತ್ತು ಕೃಷಿ ಹೊಂಡ ಅಳವಡಿಸಿಕೊಳ್ಳುವುದರ ಮೂಲಕ ಸಾವಯುವ ಕೃಷಿಗೆ ಒತ್ತು ನೀಡಬೇಕೆಂದರು.

ಕೃಷಿ ಇಲಾಖೆ ವತಿಯಿಂದ ದೊರೆಯುವ ಸೌಲಭ್ಯಗಳನ್ನು ಪ್ರತಿಯೊಬ್ಬರು ಪಡೆಯಬೇಕು. ಕೃಷಿ ಭಾಗ್ಯಯೋಜನೆಯ ಕೃಷಿಹೊಂಡಗಳ ಪ್ರಚಾರ, ರೈತರಿಗೆ ಪ್ರಯೋಜನೆ ಪಡೆಯುವಂತಾಗಬೇಕು. ಸರ್ಕಾರದ ಸಹಾಯ ಧನದಲ್ಲಿ ದೊರೆಯುವ ತುಂತುರು ನೀರಾವರಿ ಘಟಕ, ಕೃಷಿ ಯಾಂತ್ರಿಕರಣ, ಸಮಗ್ರ ಕೃಷಿ ಪದ್ಧತಿ, ಬಿತ್ತನೆ ಬೀಜದ ಕುರಿತು, ಹಾಗೂ ನ್ಯಾನೊ ಯುರೀಯಾ, ಸಂಕೀರ್ಣ ಗೊಬ್ಬರ ಬಳಕೆ ಮಾಡಬೇಕೆಂದರು.

ಸಭೆಯಲ್ಲಿ ಕೃಷಿ, ಮೀನುಗಾರಿಕೆ, ತೋಟಗಾರಿಕೆ, ಅರಣ್ಯ, ಪಶುಸಂಗೋಪನೆ, ರೇಷ್ಮೆ, ಕೃಷಿ ವಿಜ್ಞಾನ ಕೇಂದ್ರದ ನಾನಾ ಯೋಜನೆಗಳ ಬಗ್ಗೆ ಮಾಹಿತಿ ವಿನಿಮಯ ಮಾಡಿಕೊಳ್ಳಲಾಯಿತು.

ಈ ಸಭೆಯಲ್ಲಿ ಬೀದರ ತಾಲ್ಲೂಕ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿಯ ಉಪಾಧ್ಯಕ್ಷ ಮಹೇಶ್ ಚಿಂತಾಮಣಿ, ಖಜಾಂಚಿ, ಸಂಜುಕುಮಾರ, ಮಲ್ಲಿಕಾರ್ಜುನ ಹಚ್ಚಿ, ದಯಾನಂದ ಸ್ವಾಮಿ, ಜಿಲ್ಲಾ ಪ್ರತಿ ನಿಧಿ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರಾದ ಮನ್ಮಥಸ್ವಾಮಿ, ವೈಜಿನಾಥ ಭುಯ್ಯಾ, ನಾಗಯ್ಯಾ ಸ್ವಾಮಿ, ಮಹಾದೇವ ಸ್ವಾಮಿ, ಅಶೋಕ್ ಬಿರಾದಾರ ಮತ್ತು ನಾಗಯ್ಯಾ ಹೀರೆಮಠ, ಬೀದರ ಸಹಾಯಕ ಕೃಷಿ ನಿರ್ದೇಶಕರಾದ ಆರತಿ ಪಾಟೀಲ್ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಹಿರೇಮಠ ಸಂಸ್ಥಾನದಲ್ಲಿ ಪತ್ರಿಕಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.24: ಸಮಾಜದ ಪ್ರಗತಿಯಲ್ಲಿ ಪತ್ರಿಕೆಗಳ ಕೊಡುಗೆ ದೊಡ್ಡದಿದೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ದೃಶ್ಯ ಮಾಧ್ಯಮ ಸಾಕಷ್ಟು ಪ್ರಭಾವ ಶಾಲಿಯಾಗಿದ್ದರೂ ಮುದ್ರಣ ಮಾಧ್ಯಮ ಮಹತ್ವ ಇನ್ನು ಹೆಚ್ಚಾಗಿದೆ. ದಿನಪತ್ರಿಕೆ ಓದುಗರ ಸಂಖ್ಯೆ ಮೊದಲಿಗಿಂತಲೂ ಹೆಚ್ಚಾಗಿದೆ. ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಪತ್ರಿಕೆಗಳು ನಿರ್ಭಯ ಜತೆಗೆ ನಿಷ್ಪಕ್ಷಪಾತ ವರದಿ ಮಾಡುತ್ತಿವೆ. ಪತ್ರಕರ್ತರು ಸಮಾಜ ಮುಖಿಯಾಗಿ ಕಾರ್ಯನಿರ್ವಹಣೆ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.

ನೇತೃತ್ವ ವಹಿಸಿದ ಪೀಠಾಧಿಪತಿ ಗುರುಬಸವಪಟ್ಟದ್ದೇವರು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪತ್ರಿಕಾ ರಂಗ ಮಹತ್ವದ ಸ್ಥಾನ ಹೊಂದಿದೆ. ಜಾತಿ, ಧರ್ಮ ಭೇದವಿಲ್ಲದೇ ಸಮಾಜದ ಪರ ಕಾರ್ಯ ನಿರ್ವಹಿಸುವ ಸೇವೆ ಪತ್ರಿಕೋದ್ಯಮವಾಗಿದೆ. ಪ್ರತಿಯೊಬ್ಬರೂ ಪತ್ರಿಕೆ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪತ್ರಕರ್ತರ ಸಂಘದ ಜಯರಾಜ ದಾಬಶೆಟ್ಟೆ, ಪ್ರವಚನ ಸೇವಾ ಸಮಿತಿ ಅಧ್ಯಕ್ಷ ಗುಂಡಪ್ಪ ಸಂಗಮಕರ್, ಪತ್ರಕರ್ತರಾದ ಚಂದ್ರಕಾಂತ ಪಾಟೀಲ್, ಅಶೋಕ ರಾಜೋಳೆ, ಬಸವರಾಜ ಪ್ರಭಾ, ರಾಜೇಶ ಮುಗಟೆ ಸೇರಿದಂತೆ ಹಲವರು ಇದ್ದರು. ದೀಪಕ ಠಮಕೆ ನಿರೂಪಿಸಿ ವಂದಿಸಿದರು.

ಸನ್ಮಾನ :

ಇದೇವೇಳೆ ಪತ್ರಿಕಾ ದಿನಾಚರಣೆ ಅಂಗವಾಗಿ ತಾಲೂಕಿನ ದೃಶ್ಯ ಮಾಧ್ಯಮ ಮತ್ತು ಮುದ್ರಣ ಮಾಧ್ಯಮದ ಪತ್ರಕರ್ತರನ್ನು ಉಭಯ ಪೂಜ್ಯರು ಸನ್ಮಾನಿಸಿ, ಅಭಿನಂದಿಸಿದರು.

# ಶಶಿಧರ ಕೋಸುಂಬೆ ಜಿಲ್ಲಾಸ್ಪತ್ರೆಗೆ ಭೇಟಿ

## ಅವ್ಯವಸ್ಥೆಯ ವಿರುದ್ಧ ವೈದ್ಯರು, ಅಧಿಕಾರಿಗಳ ತರಾಟೆ



ಮಲ್ಲಮ್ಮನುಡಿವಾರ್ತೆಬಾಗಲಕೋಟೆ,ಜು.24–ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸುಂಬೆ ನೇತೃತ್ವದ ತಂಡ ಗುರುವಾರ ಬಾಗಲಕೋಟೆ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು. ಈ ವೇಳೆ ಆಸ್ಪತ್ರೆಯಲ್ಲಿನ ಅವ್ಯವಸ್ಥೆ ಕಂಡು ಆಸ್ಪತ್ರೆಯ ವೈದ್ಯರು ಹಾಗೂ ಅಧಿಕಾರಿಗಳನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡ ಆಯೋಗದ ಸದಸ್ಯ ಶಶಿಧರ ಕೋಸುಂಬೆ, ನೋಟಿಸ್ ನೀಡಿ ಅವ್ಯವಸ್ಥೆ ಕುರಿತು ಲಿಖಿತ ಉತ್ತರ ನೀಡುವಂತೆ ಸೂಚಿಸಿದರು.

ಆಸ್ಪತ್ರೆಯಲ್ಲಿನ ಚಿಕ್ಕಮಕ್ಕಳು, ನವಜಾತ ಶಿಶುಗಳ ವಿಭಾಗ, ಬಾಣಂತಿಯರ ವಾರ್ಡ್‌ಗಳಿಗೆ ಭೇಟಿ ನೀಡಿದ ಅವರು, ಹೆರಿಗೆ ವಿಭಾಗದಲ್ಲಿ ಬಾಣಂತಿಯರ ಜೊತೆ ಮಾತನಾಡಿ, ಆಸ್ಪತ್ರೆಯ ವ್ಯವಸ್ಥೆ ಹಾಗೂ ಸೌಲಭ್ಯಗಳ ಕುರಿತು ವಿವರಣೆ ಪಡೆದರು. ಆಸ್ಪತ್ರೆಯಲ್ಲಿನ ಅವ್ಯವಸ್ಥೆ ಗಮನಕ್ಕೆ ಬರುತ್ತಲೇ ಸಂಬಂಧಿಸಿದವರನ್ನು ತರಾಟೆಗೆ ತೆಗೆದುಕೊಂಡು ಅಗತ್ಯ ಸೌಲಭ್ಯಗಳನ್ನು ಒದಗಿಸುವಂತೆ ತಾಕೀತು ಮಾಡಿದರು. ಆಸ್ಪತ್ರೆಯಲ್ಲಿ ಅಗತ್ಯವಿರುವ ವಿಭಾಗಗಳಲ್ಲಿನ 60ಕ್ಕೂ ಅಧಿಕ ಎಸಿಗಳು ಕೆಟ್ಟು ನಿಂತಿರುವುದನ್ನು ಗಮನಿಸಿದ ಕೋಸುಂಬೆ, ಅಧಿಕಾರಿಗಳ ವಿರುದ್ಧ ಕೆಂಡಾಮಂಡಲವಾಗಿ ಈ ಅವ್ಯವಸ್ಥೆಗೆ ನಿಜವಾದ ಕಾರಣ ಹೇಳುವಂತೆ ಅವರು ಪಟ್ಟುಹಿಡಿದರು. ಎಸಿ ಎಲ್ಲೆಲ್ಲಿ ಇರಬೇಕು ಎನ್ನುವುದು ಗೊತ್ತಿಲ್ಲದ ನೀವು ಏನು ಕೆಲಸ ಮಾಡುತ್ತೀರಿ ಎಂದು ಕಿಡಿ ಕಾರಿದರು.

ಆಸ್ಪತ್ರೆಯಲ್ಲಿ ಬಾಣಂತಿಯರ ಸಂ–ಖ್ಯೆ ಕಡಿಮೆ ಇರುವುದಕ್ಕೆ ಸೂಕ್ತ ಕಾರಣಗಳೇನು, ಮಕ್ಕಳ ಸಂಖ್ಯೆ ಕಡಿಮೆಗೆ ಕಾರಣಗಳೇನು, ತಾಯಂದಿರು ಮಕ್ಕಳಿಗೆ ಹಾಲುಣಿಸುವ ಕೇಂದ್ರ, ವಿಶೇಷ ನವಜಾತ ಶಿಶುಗಳ ಕೇಂದ್ರಗಳಲ್ಲಿನ ಅವ್ಯವಸ್ಥೆಯನ್ನು ಕಂಡು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಈ ವೇಳೆ ಆಸ್ಪತ್ರೆಯಲ್ಲಿ ರೋಗಿಗಳು, ಅವರ ಸಹಾಯಕರು, ವೈದ್ಯರ ನಿರ್ಲಕ್ಷ್ಯ ಹಾಗೂ ಅವ್ಯವಸ್ಥೆಯ ಕುರಿತು ದೂರು ನೀಡಿದರು.

# ಹಣ ಮಾಡಲೆಂದೇ ಸ್ಮಾರ್ಟ್ ಮೀಟರ್ ಅಳವಡಿಕೆ

## ಸಚಿವ ಜಾರ್ಜ ವಜಾಗೆ ತೇಲ್ಕೂರ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ :ಜು.24: ಸ್ಮಾರ್ಟ್ ಮೀಟರ್ ಹಗರಣದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಇಂಧನ ಸಚಿವ ಕೆ.ಜೆ.ಜಾರ್ಜ್ ಅವರನ್ನು ವಜಾಗೊಳಿಸಬೇಕು; ಅವರ ರಾಜೀನಾಮೆ ಪಡೆಯಬೇಕು ಎಂದು ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ಸಿದ್ದರಾಮಯ್ಯನವರ ಕಿರೀಟ–ಕ್ಕೆ ಈ ಭ್ರಷ್ಟಾಚಾರ ಹಗರಣವು ಮತ್ತೊಂದು ಹೊಸ ಗರಿ ಎಂದರು. ಈ ವಿಚಾರದಲ್ಲಿ ಮುಖ್ಯಮಂತ್ರಿಗಳ ಉತ್ತರವೇನುಎಂದು ಪ್ರಶ್ನಿಸಿದರು. 15 ಸಾವಿರ ಕೋಟಿ ಎಂದರೆ ಸಣ್ಣ ಮೊತ್ತವಲ್ಲ. ಹಾಗಾಗಿ ಅವರ ರಾಜೀನಾಮೆ ಪಡೆಯಬೇಕು ಎಂದು ಒತ್ತಾಯಿಸಿದರು.



ಅರ್ಹತೆ ಇಲ್ಲದ ಗುತ್ತಿಗೆದಾರನಿಗೆ ಗುತ್ತಿಗೆ, ಬ್ಲ್ಯಾಕ್ ಲಿಸ್ಟೆಡ್ ಕಂಪೆನಿ ಜೊತೆ ಒಡಂಬಡಿಕೆ, ನಿಯಮಾವಳಿ ಉಲ್ಲಂಘನೆ ಮಾಡಿದ್ದನ್ನು ಹಾಗೂ ರಾಷ್ಟ್ರದಲ್ಲೇ ಗರಿಷ್ಠ–ದುಬಾರಿ ದರ ವಿಧಿಸುತ್ತಿರುವುದು, ಕಡ್ಡಾಯ ಇಲ್ಲದಿದ್ದರೂ ಕಡ್ಡಾಯ ಮಾಡಿದ್ದಾರೆ ಎಂದುದೂರಿದರು.

ಜನರಿಗೆ ಅಭಿವೃದ್ಧಿ ಕೊಡಿ. ಗುಣಮಟ್ಟದ ಶಿಕ್ಷಣ ಕೊಡಿ. ತಂತ್ರಜ್ಞಾನ ಬಳಕೆ ಮಾಡಿ. ಒಕ್ಕಲೆಬ್ಬಿಸುವುದು, ಊರು ಬಿಟ್ಟು ವಲಸೆ ಹೋಗುವ ಪರಿಸ್ಥಿತಿ ಬರುವಂತೆ ಮಾಡುವುದನ್ನು ಬಿಟ್ಟುಬಿಡಿ. ಕೋವಿಡ್ ನಂತರವೂ ವಾಸವಿದ್ದಲ್ಲೇ ಬದುಕು ಕಟ್ಟಿಕೊಳ್ಳಲು ಸಾಧ್ಯ ಎಂಬುದನ್ನು ನಾವು ಕಣ್ಮುಂದೆ ಕಂಡಿದ್ದೇವೆ. ಅದನ್ನು ಬಲಪಡಿಸುವ ಪ್ರಯತ್ನ ಮಾಡಿ. ಎಂದು ತಿಳಿಸಿದರು.

ಕರ್ನಾಟಕದಲ್ಲಿ ಲೋಕಸಭಾ ಚುನಾವಣೆಯಲ್ಲಿ ಅಕ್ರಮ ಆದ ಕುರಿತು ರಾಹುಲ್ ಗಾಂಧಿಯವರು ಆಪಾದಿಸಿದ ಬಗ್ಗೆ ಆಗ ಕಾಂಗ್ರೆಸ್ ಪಕ್ಷವೇ ಇಲ್ಲಿ ಆಡಳಿತದಲ್ಲಿತ್ತು. ಇದು ಆಧಾರರಹಿತ ಹೇಳಿಕೆ; ಇದನ್ನು ಖಂಡಿಸುತ್ತೇವೆ. ಇದಕ್ಕೆ ಚುನಾವಣಾ ಇಲಾಖಾಧಿಕಾರಿಗಳು, ಸರಕಾರವೇ ಉತ್ತರ ಕೊಡಬೇಕಾಗುತ್ತದೆ ಎಂದು ನುಡಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.